VOLUME: 16 | 12 MAY 2026 | ಮಂಗಳವಾರ | RS: 2 | PAGE: 06 ISSUE: 94 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

BHARATHA SARATHI
KANNADA DAILY NEWS PAPER
CALL 9740160669
# ಭಾರತ ಸಾರಥಿ
RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ
prabhavaa.com
ಸಂಪಾದಕ ಗಂಡಸಿ ಸದಾನಂದಸ್ವಾಮಿ





ತ.ನಾಡು ಸಿಎಂ ಮತ್ತು ನಟ ವಿಜಯ್ ಪ್ರಮಾಣ ವಚನ ಸ್ವೀಕಾರ ಕಾರ್ಯಕ್ರಮದಲ್ಲಿ ನಟಿ ತ್ರಿಶಾ ಧರಿಸಿದ್ದ ಸೀರೆಯಲ್ಲಿ ಫೋಟೋಗಳನ್ನು ಶೇರ್ ಮಾಡಿದ್ದಾರೆ. ಜೊತೆಗೆ 'ದಿ ಲವ್ ಈಸ್ ಆಲ್‌ವೇಸ್ ಲೌಡರ್' ಎಂದು ಬರೆದುಕೊಂಡಿದ್ದಾರೆ. ಪ್ರಮಾಣ ವಚನ ಸ್ವೀಕಾರ ಕಾರ್ಯಕ್ರಮದಲ್ಲಿ ಮಿಂಚಿದ್ದ ತ್ರಿಶಾ ಸಂಭ್ರಮ, ಸಡಗರ ಭಾರೀ ಕುತೂಹಲ ಕ್ರಿಯೇಟ್ ಮಾಡಿತ್ತು.



## ಸ್ವದೇಶಿ ಮಂತ್ರ ಜಪಿಸಿದ ಮೋದಿ

ವಡೋದರಾ: ಕಳೆದ ಕೆಲವು ವರ್ಷಗಳಿಂದ ಜಗತ್ತು ನಿರಂತರವಾಗಿ ಅಸ್ಥಿರ ಪರಿಸ್ಥಿತಿಗಳ ಮೂಲಕ ಹಾದುಹೋಗುತ್ತಿದೆ ಮತ್ತು ಪಶ್ಚಿಮ ಏಷ್ಯಾ ಸಂಘರ್ಷದಿಂದ ಸೃಷ್ಟಿಯಾದ ಸನ್ನಿವೇಶಗಳು ದಶಕದ ಪ್ರಮುಖ ಬಿಕ್ಕಟ್ಟುಗಳಲ್ಲಿ ಒಂದಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಸೋಮವಾರ ಹೇಳಿದ್ದಾರೆ.

ದೇಶದ ನಾಗರಿಕರು ವಿದೇಶಗಳಿಂದ ಬರುವ ಉತ್ಪನ್ನಗಳ ಮೇಲಿನ ವೆಚ್ಚವನ್ನು ಕಡಿಮೆ ಮಾಡುವಂತೆ ಮತ್ತೆ ಕರೆ ನೀಡಿದ ಪ್ರಧಾನಿ ಮೋದಿ, 'ವೋಕಲ್ ಫಾರ್ ಲೋಕಲ್' ಮಂತ್ರ ಅನುಸರಿಸಬೇಕು ಎಂದು ಹೇಳಿದ್ದಾರೆ.

ವಡೋದರಾದಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಮೋದಿ, ಆಮದು ಮಾಡಿಕೊಂಡ ಸರಕುಗಳ ಬೆಲೆಗಳು ಗಗನಕ್ಕೇರುತ್ತಿವೆ ಮತ್ತು ಪಶ್ಚಿಮ ಏಷ್ಯಾ ಸಂಘರ್ಷದ ದೃಷ್ಟಿಯಿಂದ ಜಾಗತಿಕ ಪೂರೈಕೆ ಸರಪಳಿಗೆ ತೀವ್ರ ಅಡ್ಡಿಯಾಗುತ್ತಿದೆ ಎಂದು ಹೇಳಿದ್ದಾರೆ.

ಪಶ್ಚಿಮ ಏಷ್ಯಾ ಸಂಘರ್ಷದಿಂದ ಸೃಷ್ಟಿಯಾದ ಸನ್ನಿವೇಶಗಳು ಈ ದಶಕದ ಪ್ರಮುಖ ಬಿಕ್ಕಟ್ಟುಗಳಲ್ಲಿ ಒಂದಾಗಿದೆ ಮತ್ತು ದೇಶವು ಕೋವಿಡ್ ಸವಾಲನ್ನು ಗೆದ್ದಂತೆಯೇ, ಈ ಬಿಕ್ಕಟ್ಟನ್ನು ಸಹ ಜಯಿಸುತ್ತದೆ ಎಂದು ಪ್ರಧಾನಿ ತಿಳಿಸಿದರು.

ಭಾರತವು ವಿದೇಶಗಳಿಂದ ಅನೇಕ ಉತ್ಪನ್ನಗಳನ್ನು ಆಮದು ಮಾಡಿಕೊಳ್ಳಲು ಲಕ್ಷಾಂತರ ಕೋಟಿ ರೂಪಾಯಿಗಳನ್ನು ವಿದೇಶಿ ವಿನಿಮಯದಲ್ಲಿ ಖರ್ಚು ಮಾಡುತ್ತಿದೆ ಎಂದ ಮೋದಿ, ನಾಗರಿಕರು ವಿದೇಶದಿಂದ ಬರುವ ಉತ್ಪನ್ನಗಳ ಬಳಕೆಯನ್ನು ಕಡಿಮೆ ಮಾಡಬೇಕು ಮತ್ತು ಆಮದು ಮಾಡಿಕೊಂಡ ಸರಕುಗಳ ಮೇಲೆ ಅನಗತ್ಯ ಅವಲಂಬನೆಯನ್ನು ತಪ್ಪಿಸಬೇಕು ಎಂದರು.

"ಕೋವಿಡ್ ಸಾಂಕ್ರಾಮಿಕವು ಈ ಶತಮಾನದ ಅತಿದೊಡ್ಡ ಬಿಕ್ಕಟ್ಟಾಗಿದ್ದರೆ, ಪಶ್ಚಿಮ ಏಷ್ಯಾದಲ್ಲಿನ ಯುದ್ಧದಿಂದ ಸೃಷ್ಟಿಸಲ್ಪಟ್ಟ ಸಂದರ್ಭಗಳು ಈ ದಶಕದ ಪ್ರಮುಖ ಬಿಕ್ಕಟ್ಟುಗಳಲ್ಲಿ ಒಂದಾಗಿದೆ. ನಾವು ಒಟ್ಟಾಗಿ ಕೋವಿಡ್‌ನ ಸವಾಲನ್ನು ಜಯಿಸಿದಂತೆ ಖಂಡಿತವಾಗಿಯೂ ಈ ಬಿಕ್ಕಟ್ಟನ್ನು ಸಹ ನಿವಾರಿಸುತ್ತೇವೆ ಎಂದು ಹೇಳಿದರು.



75 ವರ್ಷಗಳನ್ನು ಪೂರೈಸುತ್ತಿರುವ ಗುಜರಾತ್‌ನ ಸೋಮನಾಥ ದೇಗುಲದ ಅಮೃತಮಹೋತ್ಸವದಲ್ಲಿ ಭಾಗಿಯಾಗಿ, ಪ್ರಧಾನಿ ನರೇಂದ್ರ ಮೋದಿ ಧಾರ್ಮಿಕ ವಿಧಿವಿಧಾನ ಹಾಗೂ ಕುಂಭಾಭಿಷೇಕ ನೆರವೇರಿಸಿದರು.

## ಬಾಂಗ್ಲಾ ಗಡಿ ಕೇಂದ್ರಕ್ಕೆ ವರ್ಗಾವಣೆ

ಕೋಲ್ಕತ್ತಾ: ಬಾಂಗ್ಲಾದೇಶ ಗಡಿಗೆ ಬೇಲಿ ಹಾಕುವುದಕ್ಕಾಗಿ ಗಡಿ ಭದ್ರತಾ ಪಡೆ(ಬಿಎಸ್‌ಎಫ್)ಗೆ ಭೂಮಿ ವರ್ಗಾವಣೆ ಮಾಡಲು ರಾಜ್ಯ ಸರ್ಕಾರ ಅನುಮತಿ ನೀಡಿದೆ ಎಂದು ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಸುವೇಂದು ಅಧಿಕಾರಿ ತಿಳಿಸಿದ್ದಾರೆ.

ಈ ಕುರಿತು ಸೋಮವಾರ ಮಾತನಾಡಿದ ಅವರು, ತಮ್ಮ ಸರ್ಕಾರದ ಮೊದಲ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನ ತೆಗೆದುಕೊಳ್ಳಲಾಗಿದೆ ಎಂದು ಹೇಳಿದರು.

ಭೂಮಿ ವರ್ಗಾವಣೆ ಪ್ರಕ್ರಿಯೆ ಇಂದಿನಿಂದಲೇ (ಸೋಮವಾರ) ಶುರುವಾಗಿದ್ದು, 45 ದಿನಗಳಲ್ಲಿ ಪೂರ್ಣಗೊಳ್ಳಲಿದೆ ಎಂದು ತಿಳಿಸಿದ್ದಾರೆ.

"ಬಾಂಗ್ಲಾದೇಶದ ಗಡಿಯಲ್ಲಿ ಬೇಲಿ ಹಾಕಲು ಬಿಎಸ್‌ಎಫ್‌ಗೆ ಭೂಮಿ ವರ್ಗಾವಣೆ ಮಾಡಲು ಪ.ಬಂಗಾಳ ಸರ್ಕಾರ ಅನುಮೋದನೆ ನೀಡಿದೆ. ಈ ಪ್ರಕ್ರಿಯೆ ಇಂದಿನಿಂದ ಪ್ರಾರಂಭ. ಹಾಗು 45 ದಿನಗಳಲ್ಲಿ ಮುಗಿಯುತ್ತದೆ" ಎಂದು ಅಧಿಕಾರಿ ಮಾಧ್ಯಮದವರಿಗೆ ಮಾಹಿತಿ ನೀಡಿದ್ದಾರೆ.

ಅದಷ್ಟೇ ಅಲ್ಲದೇ, ಕೇಂದ್ರ ಸರ್ಕಾರದ ಪ್ರಮುಖ ಸಾಮಾಜಿಕ ಭದ್ರತಾ ಯೋಜನೆ ಆಯುಷ್ಮಾನ್ ಭಾರತ್ ಆರೋಗ್ಯ ಯೋಜನೆ ಹಾಗು ಹಲವು ಇತರೆ ಯೋಜನೆಗಳನ್ನೂ ರಾಜ್ಯದಲ್ಲಿ ಅನುಷ್ಠಾಗೊಳಿಸುವುದಾಗಿಯೂ ಸಿಎಂ ಘೋಷಿಸಿದ್ದಾರೆ.

ವಿಧಾನಸಭಾ ಚುನಾವಣಾ ಮತಪ್ರಚಾರದ ಸಮಯದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಮಾತು ಕೊಟ್ಟಂತೆ ಶಾಲಾ ಉದ್ಯೋಗ ಅರ್ಜಿದಾರರ ವಯಸ್ಸಿನ ಮಿತಿಯನ್ನು 5 ವರ್ಷಗಳ ಕಾಲ ವಿಸ್ತರಿಸುವ ಪ್ರಸ್ತಾವನೆಗೂ ಸಂಪುಟ ಒಪ್ಪಿಗೆ ಸೂಚಿಸಿದೆ ಎಂದು ಅವರು ಹೇಳಿದ್ದಾರೆ.

ಇದರ ಜೊತೆಗೆ, ರಾಷ್ಟ್ರೀಯ ಮತ್ತು ರಾಜ್ಯ ಕೇಡರ್‌ಗಳ ಅಡಿಯಲ್ಲಿರುವ ಅಧಿಕಾರಿಗಳಿಗೆ ಕೇಂದ್ರ ಸರ್ಕಾರದ ತರಬೇತಿ ಪ್ರಾರಂಭಿಸಲು ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳಲು ಸಚಿವ ಸಂಪುಟವು ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಅಧಿಕಾರ ನೀಡುತ್ತದೆ ಎಂದು ಅಧಿಕಾರಿ ತಿಳಿಸಿದ್ದಾರೆ.

ಈ ಹಿಂದಿನ ಸರ್ಕಾರ ಸಂವಿಧಾನವನ್ನು ಉಲ್ಲಂಘಿಸಿ ಬಿಎನ್‌ಎಸ್ ಜಾರಿಗೆ ತರಲಿಲ್ಲ ಎಂದು ಆರೋಪಿಸಿದ ಅವರು, ರಾಜ್ಯದಲ್ಲಿ ಕ್ರಿಮಿನಲ್ ಕಾನೂನನ್ನು ಜಾರಿಗೆ ತರಲು ಸಂಪುಟ ನಿರ್ಧರಿಸಿದೆ ಎಂದು ಹೇಳಿದರು.

ಅಷ್ಟೇ ಅಲ್ಲದೇ, ಹಿಂದಿನ ಸರ್ಕಾರಕೇಂದ್ರ ಗೃಹ ಸಚಿವಾಲಯದ 2025ರ ಜೂನ್‌ನಲ್ಲಿನ ಜನಗಣತಿ ಸುತ್ತೋಲೆಯನ್ನು ನಿರ್ಲಕ್ಷಿಸಿತು. ಇದೀಗ ಸಚಿವ ಸಂಪುಟಅದನ್ನು ತಕ್ಷಣವೇ ಜಾರಿಗೆ ತರಲು ಅನುಮತಿ ನೀಡಿದೆ ಎಂದರು.

## ಭದ್ರತಾ ವೈಫಲ್ಯ: ಎನ್‌ಐಎಯಿಂದ ತನಿಖೆ

ಬೆಂಗಳೂರು: ಪ್ರಧಾನಿ ನರೇಂದ್ರ ಮೋದಿಯವರು ಸಂಚರಿಸುತ್ತಿದ್ದ ಮಾರ್ಗದಲ್ಲಿ ಎರಡು ಜೆಲೆಟಿನ್ ಕಡ್ಡಿ ಪತ್ತೆಯಾದ ಬೆಂಗಳೂರಿನ ಹೊರವಲಯದಲ್ಲಿರುವ ಸ್ಥಳಕ್ಕೆ ರಾಷ್ಟ್ರೀಯ ತನಿಖಾ ದಳ ತಂಡವೊಂದು ತೆರಳಿ ಪರಿಶೀಲನೆ ನಡೆಸಿದೆ. ಪ್ರಧಾನಿ ಮೋದಿಯವರ ಬೆಂಗಾವಲು ಪಡೆಯು ಬಳಸಬೇಕಿದ್ದ ಕಗ್ಗಲೀಪುರದ ತಾತಗುಣಿಯ ರಸ್ತೆ ಪಕ್ಕದಲ್ಲೇ ಜಿಲೆಟಿನ್ ಕಡ್ಡಿ ಪತ್ತೆಯಾಗಿದ್ದು, ರಾಷ್ಟ್ರೀಯ ತನಿಖಾ ದಳ ಅಲ್ಲಿಗೆ ತೆರಳಿದೆ. ಸ್ಥಳೀಯ ಪೊಲೀಸರು ಓಖಂ ತನಿಖೆಗೆ ಸಹಾಯ ನೆರವಾಗುತ್ತಿದ್ದಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿರುವುದಾಗಿ ಸುದ್ದಿಸಂಸ್ಥೆಯೊಂದು ತಿಳಿಸಿದೆ.

ಎರಡು ಜೆಲೆಟಿನ್ ಕಡ್ಡಿಗಳಿದ್ದ ಪ್ಯಾಕೇಟ್ ಭಾನುವಾರ ಬೆಳಿಗ್ಗೆ ಕಗ್ಗಲಿಪುರದ ತಥಗುಣಿ ಬಳಿಯ ನೈಸ್ ರಸ್ತೆ ಜಂಕ್ಷನ್‌ನಿಂದ ಸುಮಾರು ಒಂದು ಕಿ.ಮೀ ದೂರದಲ್ಲಿ ಪ್ರಧಾನಿ ಬರುವ ಮುಂಚೆಯೇ ಜಿಲೆಟಿನ್ ಕಡ್ಡಿ ಪತ್ತೆಯಾಗಿತ್ತು.

ಈ ಮಧ್ಯೆ ಸುದ್ದಿಗಾರರೊಂದಿಗೆ ಮಾತನಾಡಿದ ಬೆಂಗಳೂರು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್, ತಾಂತ್ರಿಕ ಕಣ್ಗಾವಲು ಬಳಸಿ ಘಟನೆ ನಡೆದ ಒಂದು ಗಂಟೆಯೊಳಗೆ ಆರೋಪಿಯನ್ನು ಬಂಧಿಸಲಾಯಿತು ಎಂದು ತಿಳಿಸಿದರು.

ಪ್ರಧಾನಿ ಮೋದಿಯವರ ಬೆಂಗಾವಲು ಪಡೆಯು ಬಳಸಬೇಕಿದ್ದ ಕಗ್ಗಲೀಪುರದ ತಾತಗುಣಿಯ ರಸ್ತೆ ಪಕ್ಕದಲ್ಲೇ ಜಿಲೆಟಿನ್ ಕಡ್ಡಿ ಪತ್ತೆಯಾಗಿದ್ದು, ರಾಷ್ಟ್ರೀಯ ತನಿಖಾ ದಳ ಅಲ್ಲಿಗೆ ತೆರಳಿದೆ. ಸ್ಥಳೀಯ ಪೊಲೀಸರು ಓಖಂ ತನಿಖೆಗೆ ಸಹಾಯ ನೆರವಾಗುತ್ತಿದ್ದಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿರುವುದಾಗಿ ಸುದ್ದಿಸಂಸ್ಥೆಯೊಂದು ತಿಳಿಸಿದೆ.

ಭಾನುವಾರ ಬೆಳಿಗ್ಗೆ 8.29 ರ ಸುಮಾರಿಗೆ, ಅಪರಿಚಿತ ವ್ಯಕ್ತಿಯೊಬ್ಬ ಪೊಲೀಸ್ ನಿಯಂ ತ್ರಣ ಕೊಠಡಿಗೆ ಕರೆ ಮಾಡಿದ್ದಾನೆ.

## 20ಕ್ಕೆ ತುಮಕೂರಿನಲ್ಲಿ ಬೃಹತ್ ಸಮಾವೇಶ

ತುಮಕೂರು: ತುಮಕೂರಿನಲ್ಲಿ ಮೇ 20ರಂದು ನಡೆಯಲಿರುವ ಬೃಹತ್ ಸಮಾವೇಶದಲ್ಲಿ ಭಾಗವಹಿಸುವ ಎಲ್ಲಾ ಫಲಾನುಭವಿಗಳಿಗೂ ಅಂದೇ ಸವಲತ್ತುಗಳನ್ನು ವಿತರಿಸಬೇಕು ಎಂದು ಗೃಹ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ: ಜಿ. ಪರಮೇಶ್ವರ ಅವರು ಜಿಲ್ಲಾಡಳಿತಕ್ಕೆ ಸೂಚಿಸಿದ್ದಾರೆ.

ಮೇ 20ರಂದು ತುಮಕೂರಿನಲ್ಲಿ ನಡೆಯಲಿರುವ ಕರ್ನಾಟಕ ಸರ್ಕಾರದ 3 ವರ್ಷಗಳ ಸಾಧನೆ ಸಂಭ್ರಮ ಬೃಹತ್ ಸಮಾವೇಶ ಕಾರ್ಯಕ್ರಮ ಹಾಗೂ ತುಮಕೂರು ಜಿಲ್ಲೆಯ ಕಂದಾಯ ಇಲಾಖೆ ಹಾಗೂ ಇತರೆ ಫಲಾನುಭವಿಗಳಿಗೆ ಸವಲತ್ತುಗಳನ್ನು ವಿತರಿಸುವ ಕಾರ್ಯಕ್ರಮ ಕುರಿತು ಜಿಲ್ಲಾಧಿಕಾರಿ ಕಚೇರಿಯಲ್ಲಿ ಸೋಮವಾರ ಪೂರ್ವಭಾವಿ ಸಭೆ ನಡೆಸಿ ಅವರು ಮಾತನಾಡಿದರು.

ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಭಾಗವಹಿಸುವ ಈ ಬೃಹತ್ ಸಮಾವೇಶದಲ್ಲಿ ಭಾಗವಹಿಸುವ ಫಲಾನುಭವಿಗಳಿಗೆ ವೇದಿಕೆಯಲ್ಲಿ ಸಾಂಕೇತಿಕವಾಗಿ ಸವಲತ್ತುಗಳನ್ನು ವಿತರಣೆ ಮಾಡಿದರೂ ಇನ್ನಿತರೆ ಫಲಾನುಭವಿಗಳಿಗೆ ಅಂದೇ ಆ ಕ್ಷಣದಲ್ಲೇ ಸವಲತ್ತುಗಳನ್ನು ಹಾಗೂ ಹಕ್ಕುಪತ್ರಗಳನ್ನು ವಿತರಿಸಲು ಸಿದ್ಧತೆ ಮಾಡಿಕೊಳ್ಳಬೇಕು ಎಂದು ಸಚಿವರು ತಿಳಿಸಿದರು.

ಈ ಹಿಂದೆ ಕೆಲವೊಮ್ಮೆ ವೇದಿಕೆಯಲ್ಲಿ ಸಾಂಕೇತಿಕವಾಗಿ ಹಕ್ಕುಪತ್ರಗಳನ್ನು ನೀಡಿ ಆನಂತರ ಇತರೆ ಫಲಾನುಭವಿಗಳಿಗೆ ಹಕ್ಕುಪತ್ರಗಳನ್ನು ನೀಡಲು ತೀರ ವಿಳಂಬವಾಗುವ ಸಾಧ್ಯತೆಗಳ ಬಗ್ಗೆ ಕೇಳಿದ್ದೇನೆ. ಈ ಹಿನ್ನೆಲೆಯಲ್ಲಿ ತುಮಕೂರು ಜಿಲ್ಲಾಡಳಿತ ಅಂತಹ ತಪ್ಪುಗಳನ್ನು ಮಾಡಬಾರದು. ಫಲಾನುಭವಿಗಳಿಗೆ ಅಂದೇ ಮುಖ್ಯಮಂತ್ರಿಗಳ ಸಮ್ಮುಖದಲ್ಲೇ ಹಕ್ಕುಪತ್ರಗಳನ್ನು ಹಾಗೂ ಸವಲತ್ತುಗಳನ್ನು ವಿತರಿಸಲು ಕ್ರಮವಹಿಸಬೇಕು. ಈ ಸಂಬಂಧ ಪ್ರತ್ಯೇಕವಾಗಿ ಸಂಬಂಧಿಸಿದ ಇಲಾಖೆ ಅಧಿಕಾರಿಗಳಿಗೆ ಜವಾಬ್ದಾರಿ ನೀಡಿ ಫಲಾನುಭವಿಗಳು ಕುಳಿತುಕೊಳ್ಳುವ ಸ್ಥಳದಲ್ಲಿಯೇ ಹಕ್ಕುಪತ್ರ ಹಾಗೂ ಇತರೆ ಸೌಲಭ್ಯಗಳನ್ನು ವಿತರಿಸಲು ಸಿದ್ಧತೆ ಕೈಗೊಳ್ಳಬೇಕು ಎಂದು ಅವರು ಸೂಚಿಸಿದರು.

ಜಿಲ್ಲೆಯಾದ್ಯಂತ ಎಲ್ಲಾ 10 ತಾಲ್ಲೂಕುಗಳಿಂದ ಸುಮಾರು 2ಲಕ್ಷಕ್ಕೂ ಹೆಚ್ಚು ಫಲಾನುಭವಿಗಳು ಈ ಕಾರ್ಯಕ್ರಮಕ್ಕೆ ಆಗಮಿಸುವ ನಿರೀಕ್ಷೆಯಿದ್ದು, ಈ ಫಲಾನುಭವಿಗಳನ್ನು ಕಾರ್ಯಕ್ರಮಕ್ಕೆ ಕರೆತರಲು ಸಂಬಂಧಿಸಿದ ತಾಲ್ಲೂಕು ಆಡಳಿತ ಸೂಕ್ತ ಕ್ರಮ ಕೈಗೊಳ್ಳಬೇಕು. ಫಲಾನುಭವಿಗಳನ್ನು ಆಯಾ ತಾಲ್ಲೂಕುಗಳ ಇತರೆ ಪ್ರದೇಶಗಳಿಂದ ಹೊರಡುವ ಜಾಗದಲ್ಲಿಯೇ ಫಲಾನುಭವಿಗಳಿಗೆ ಬೆಳಗಿನ ಉಪಹಾರ ನಂತರವೇ ಬಸ್ಸುಗಳು ಹೊರಡಬೇಕು. ಈ ಸಂಬಂಧ ಫಲಾನುಭವಿಗಳ ಸುರಕ್ಷತೆ ಹಾಗೂ ಉಪಚಾರದಲ್ಲಿ ಯಾವುದೇ ಕೊರತೆ ಆಗಬಾರದು ಎಂದು ಸಚಿವರು ಅಧಿಕಾರಿಗಳಿಗೆ ಸೂಚಿಸಿದರು.




ಕಾರ್ಯಕ್ರಮಕ್ಕಾಗಿ ತುಮಕೂರು ನಗರಕ್ಕೆ ಜಿಲ್ಲೆಯ ಇತರೆ ತಾಲ್ಲೂಕುಗಳಿಂದ ಫಲಾನುಭವಿಗಳನ್ನು ಕರೆತರಲು ಸರ್ಕಾರಿ, ಖಾಸಗಿ ಬಸ್ಸುಗಳೂ ಸೇರಿದಂತೆ ಸುಮಾರು 3,000 ಬಸ್ಸುಗಳು ನಗರಕ್ಕೆ ಆಗಮಿಸಲಿದ್ದು, ಫಲಾನುಭವಿಗಳು ದೂರದಿಂದ ಕಾರ್ಯಕ್ರಮದ ಜಾಗಕ್ಕೆ ನಡೆದುಕೊಂಡು ಬರಲು ಅವಕಾಶ ನೀಡದೆ ಕಾರ್ಯಕ್ರಮದ ಜಾಗದಲ್ಲಿಯೇ ಬಸ್ಸುಗಳು ಫಲಾನುಭವಿಗಳನ್ನು ಇಳಿಸಿ, ಕಾರ್ಯಕ್ರಮದ ನಂತರ ಫಲಾನುಭವಿಗಳನ್ನು ಕರೆದೊಯ್ಯಲು ವ್ಯವಸ್ಥೆ ಆಗಬೇಕು. ನಗರ ಭಾಗದಲ್ಲಿ ವಾಹನ ಸಂಚಾರ ಅಥವಾ ವಾಹನಗಳ ನಿಲುಗಡೆಗೆ ಸ್ಥಳಾವಕಾಶದ ಕೊರತೆಯಾಗಬಹುದು. ಅದಕ್ಕಾಗಿ ಜಿಲ್ಲಾ ಪೊಲೀಸ್ ಇಲಾಖೆಯಿಂದ ಸೂಕ್ತ ನಿಲುಗಡೆ ಪ್ರದೇಶ ಗುರುತಿಸಿ ನಿರ್ದಿಷ್ಟ ತಾಲ್ಲೂಕುಗಳ ವಾಹನಗಳು ನಿರ್ದಿಷ್ಟ ನಿಲುಗಡೆಯಲ್ಲಿಯೇ ನಿಲ್ಲುವಂತೆ ವ್ಯವಸ್ಥೆ ಮಾಡಬೇಕೆಂದು ಸೂಚಿಸಿದರು.

ಕಾರ್ಯಕ್ರಮದಲ್ಲಿ ಭಾಗವಹಿಸುವ ಫಲಾನುಭವಿಗಳಿಗೆ ತುಮುಲ್ ವತಿಯಿಂದ ಮಜ್ಜಿಗೆ, ನೀರಿನ ವ್ಯವಸ್ಥೆ ಆಗಬೇಕು. ಅಲ್ಲದೆ, ಫಲಾನುಭವಿಗಳು ಸುಲಭವಾಗಿ ತಮ್ಮ ಜಾಗಕ್ಕೆ ಹೋಗಿ ಕುಳಿತುಕೊಳ್ಳಲು ಅಥವಾ ನೀರು ಕುಡಿಯಲು ಸೂಕ್ತ ವ್ಯವಸ್ಥೆ ಕಲ್ಪಿಸಬೇಕು ಎಂದರು.

ಅಲ್ಲದೆ, ತುಮಕೂರು ಮಹಾನಗರಪಾಲಿಕೆ ವತಿಯಿಂದ ನಗರದ ಸ್ವಚ್ಛತೆ ಹಾಗೂ ಸುಂದರವಾಗಿ ಕಾಣಿಸಲು ವ್ಯವಸ್ಥೆ ಕೈಗೊಳ್ಳಬೇಕು. ಕಾರ್ಯಕ್ರಮಕ್ಕೆ ಲಕ್ಷಾಂತರ ಮಂದಿ ಫಲಾನುಭವಿಗಳು ಆಗಮಿಸುವುದರಿಂದ ಅವರಿಗೆ ಸೂಕ್ತ ರೀತಿಯ ಸಂಚಾರಿ ಶೌಚಾಲಯ ವ್ಯವಸ್ಥೆ ಕಲ್ಪಿಸಬೇಕು ಎಂದು ಸಚಿವರು ಸೂಚಿಸಿದರು.

ಕಾರ್ಯಕ್ರಮಕ್ಕಾಗಿ ಸಚಿವ ಸಂಪುಟದ ಎಲ್ಲಾ ಸಚಿವರು, ಹಿರಿಯ ಅಧಿಕಾರಿಗಳು ಆಗಮಿಸುವುದರಿಂದ ಯಾವುದೇ ಕೊರತೆಯಾಗದಂತೆ ಅವರಿಗೆ ಆತಿಥ್ಯದ ವ್ಯವಸ್ಥೆಯಾಗಬೇಕು. ಈಗಾಗಲೇ ತುಮಕೂರು ಮಾದರಿ ಎಂಬ ಪರಿಕಲ್ಪನೆ ರಾಜ್ಯ ಸರ್ಕಾರದ ಮಟ್ಟದಲ್ಲಿ ಜನಜನಿತವಾಗಿದೆ. ಮುಖ್ಯಮಂತ್ರಿಗಳ ಕಾರ್ಯಕ್ರಮ, ರಾಷ್ಟ್ರೀಯ, ಅಂತಾರಾಷ್ಟ್ರೀಯ ಕಾರ್ಯಕ್ರಮಗಳನ್ನು ಸಂಘಟಿಸಿ ಯಶಸ್ವಿಯಾಗಿರುವುದರಿಂದ ರಾಜ್ಯ ಸರ್ಕಾರಕ್ಕೆ ತುಮಕೂರಿನ ಬಗ್ಗೆ ವಿಶೇಷ ಆಸಕ್ತಿ ಹಾಗೂ ವಿಶ್ವಾಸ ಇರುತ್ತದೆ.

ಈ ಹಿನ್ನೆಲೆಯಲ್ಲಿ ತುಮಕೂರು ಮಾದರಿ ಎಂಬ ಬಗ್ಗೆ ಯಾವುದೇ ಕೊರತೆಯಿಲ್ಲದಂತೆ ಅತ್ಯಂತ ಶಿಸ್ತುಬದ್ಧವಾಗಿ ಗೊಂದಲಗಳಿಗೆ ಆಸ್ಪದ ನೀಡದಂತೆ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಎಲ್ಲಾ ಅಧಿಕಾರಿಗಳು ಶ್ರಮಿಸಬೇಕು ಎಂದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ವಿ. ಅಶ್ವಿಜ, ಜಿಲ್ಲಾ ಪೊಲೀಸ್ ಅಧೀಕ್ಷಕ ಅಶೋಕ್ ಕೆ.ವಿ. ಸೇರಿದಂತೆ ಜಿಲ್ಲಾ ಮಟ್ಟದ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು. ಜಿಲ್ಲೆಯ ಇತರೆ ತಾಲ್ಲೂಕುಗಳ ತಹಶೀಲ್ದಾರ್, ಇನ್ನಿತರೆ ತಾಲ್ಲೂಕು ಮಟ್ಟದ ಅಧಿಕಾರಿಗಳು ವಿಡಿಯೋ ಕಾನ್ಫರೆನ್ಸ್ ಮೂಲಕ ಹಾಜರಾಗಿದ್ದರು.

## ಗಿಫ್ಟ್ ಕೊಡುವುದಾಗಿ ಡಿಕೆಶಿ ಘೋಷಣೆ

ಬೆಂಗಳೂರು: ಮೇ 13ಕ್ಕೆ ಬೆಂಗಳೂರು ಜನತೆಗೆ ಬಿಗ್ ಗಿಫ್ಟ್ ನೀಡಲಿದ್ದೇವೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಅವರು ತಿಳಿಸಿದ್ದಾರೆ.

ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಸುರ್ಜೇವಾಲ ಅವರ ಜೊತೆ ರಾಜಕೀಯವಾಗಿ ಸಭೆ ಮಾಡಿದ್ದೇವೆ. ಈಗ ಅಧಿಕಾರಿಗಳನ್ನು ಕರೆದು ಸೂಚನೆ ಕೊಟ್ಟಿದ್ದೇನೆ. ಮೇ 13ರಂದು ಬೆಂಗಳೂರು ಜನರಿಗೆ ಒಂದು ದೊಡ್ಡ ಗ್ಯಾರಂಟಿ, ಬಿಗ್ ಗಿಫ್ಟ್ ಕೊಡಲಿದ್ದೇವೆ. ಅದನ್ನು ಮೇ 13ರಂದೇ ತಿಳಿಸುತ್ತೇನೆ ಎಂದಿದ್ದಾರೆ.

ಇದೇ ವೇಳೆ ದೇಶದ ಜನತೆಗೆ ಪ್ರಧಾನಿ ನರೇಂದ್ರ ಮೋದಿ ಮನವಿ ಮಾಡಿದ ವಿಚಾರವಾಗಿ ಮಾತನಾಡಿ, ಮೋದಿ ಅವರು ಹೇಳ್ತಾರೆ. ಆದ್ರೆ ಚಿನ್ನದ ಬೆಲೆ ಯಾಕೆ ಜಾಸ್ತಿ ಆಯ್ತು ಅಂತ ಹೇಳ್ತಿಲ್ಲ. ಪೆಟ್ರೋಲ್ ಬಳಕೆ ಕಡಿಮೆ ಮಾಡಿ ಅಂತ ಹೇಳ್ತಿದ್ದಾರೆ. ಆದ್ರೆ ಯಾಕಾಯ್ತು ಅಂತ ಹೇಳ್ತಿಲ್ಲ. ಜನರಿಗೆ ಯಾರಿಂದ ತೊಂದರೆ ಆಯ್ತು ಅಂತ ಮೋದಿ ಅವರೇ ವಿವರಣೆ ನೀಡಬೇಕು.

ಮದುವೆ ಮಾಡೋರು, ಮುಂಜಿ ಮಾಡೋರು ಯಾರು ಚಿನ್ನ ತೆಗೆದುಕೊಳ್ಳಬೇಡಿ ಅಂತ ಹೇಳೋಕೆ ಆಗುತ್ತಾ? ನೀವು ಜನರಿಗೆ ಸಲಹೆ ಏನು ಬೇಕಿದ್ರು ಕೊಡ್ತೀರಾ. ಆದರೆ ಕೊರೋನಾ ಸಮಯದಲ್ಲಿ ದೀಪ ಹಚ್ಚಿ ಅಂದ್ರಿ, ದೀಪ ಹಚ್ಚಿದ್ವಿ, ಚಪ್ಪಾಳೆ ತಟ್ಟಿ ಅಂದ್ರಿ, ಚಪ್ಪಾಳೆ ತಟ್ಟಿದ್ವಿ ಎಂದರು.

## 'ಚಿನ್ನ ಖರೀದಿ ಬೇಡ, ತೈಲ ಬಳಕೆ ತಗ್ಗಿಸಿ ಎನ್ನುವುದು ಯಾವ ಅಭಿವೃದ್ಧಿಯ ಲಕ್ಷಣ'

ಬೆಂಗಳೂರು: ಚಿನ್ನ ಖರೀದಿಸಬೇಡಿ, ಪೆಟ್ರೋಲ್ ಮತ್ತು ಖಾದ್ಯ ಎಣ್ಣೆ ಕಡಿಮೆ ಬಳಸಿ, ವಿದೇಶ ಪ್ರವಾಸ ಮಾಡಬೇಡಿ ಮತ್ತು ಗೊಬ್ಬರ ಬಳಕೆ ತಗ್ಗಿಸಿ ಎಂದು ಬೇಡಿಕೊಳ್ಳುತ್ತಿರುವುದು ಯಾವ ಅಭಿವೃದ್ದಿಯ ಲಕ್ಷಣ ಎನ್ನುವುದನ್ನು ಪ್ರಧಾನಿ ನರೇಂದ್ರ ಮೋದಿ ಸ್ಪಷ್ಟಪಡಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆಗ್ರಹಿಸಿದ್ದಾರೆ.

ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಸಿದ್ದರಾಮಯ್ಯ, ಪ್ರಧಾನಿ ನರೇಂದ್ರ ಮೋದಿ ಅವರು ಭಾನುವಾರ ಬೆಂಗಳೂರಿನಲ್ಲಿ ಮಾತನಾಡಿದ್ದು ದೇಶದ ಪ್ರಧಾನಿಯಾಗಿಯೋ? ಇಲ್ಲವೇ ರಾಜ್ಯ ಬಿಜೆಪಿ ಅಧ್ಯಕ್ಷರೋ? ಇಲ್ಲವೇ ರಾಜ್ಯದ ವಿರೋಧ ಪಕ್ಷದ ನಾಯಕರಾಗಿಯೋ? ಎನ್ನುವುದನ್ನು ಅವರೇ ಸ್ಪಷ್ಟಪಡಿಸಿ ಸಾರ್ವಜನಿಕರಲ್ಲಿ ಮೂಡಿರುವ ಗೊಂದಲವನ್ನು ಬಗೆಹರಿಸಬೇಕು.

2024–25ರಲ್ಲಿಯೇ ಭಾರತವನ್ನು 5 ಟ್ರಿಲಿಯನ್ ಡಾಲರ್ ಆರ್ಥಿಕತೆಯ ದೇಶ ಮಾಡುವೆ ಎಂದು ಕೊಚ್ಚಿಕೊಂಡಿದ್ದ, ಭಾರತದ ಅಭಿವೃದ್ಧಿ ರಥ ನಾಗಾಲೋಟದಿಂದ ಮುಂದೋಡುತ್ತಿದೆ ಎಂದು ಬೀಗಿದ್ದ ಮತ್ತು ದೇಶದ ಬಡತನವನ್ನು ನಿರ್ಮೂಲನೆ ಮಾಡಿ ಆಗಿದೆ ಎಂದು ತನ್ನ ಬೆನ್ನನ್ನು ತಾನೇ ಚಪ್ಪರಿಸಿಕೊಂಡಿದ್ದ ಪ್ರಧಾನಿಯವರು ಈಗ ಉಪದೇಶ ಮಾಡುತ್ತಿರುವ ಗೂಢಾರ್ಥವೇನು ಎಂದು ಕೆಣಕಿದ್ದಾರೆ.

ಪ್ರಧಾನಮಂತ್ರಿಯವರು ರಾಜ್ಯದ ಕಾಂಗ್ರೆಸ್ ಸರ್ಕಾರವನ್ನು ಉದ್ದೇಶಿಸಿ ಮಾತನಾಡಿದ್ದರೂ ಅವರ ಮಾತಿನಲ್ಲಿ ಕೇಂದ್ರದಲ್ಲಿರುವ ಅವರದ್ದೇ ಸರ್ಕಾರದ ವೈಫಲ್ಯ ಮತ್ತು ರಾಜ್ಯದಲ್ಲಿರುವ ಅವರ ಪಕ್ಷದ ದುಸ್ಥಿತಿಯಯನ್ನು ಸರಿಪಡಿಸಲಾಗದ ಅಸಹಾಯಕತೆ ಇತ್ತು. ತನ್ನ ಎಲೆ ಮೇಲೆ ಆನೆ ಸತ್ತು ಬಿದ್ದಿದ್ದರೂ ಎದುರಿನವರ ಎಲೆ ಮೇಲೆ ಸತ್ತುಬಿದ್ದ ನೊಣವನ್ನು ಹುಡುಕಾಡುವ ಢೋಂಗಿ ಬುದ್ಧಿಯೂ ಅವರ ಭಾಷಣದಲ್ಲಿ ಇತ್ತು.

ಪಂಡಿತ್ ಜವಾಹರಲಾಲ್ ನೆಹರೂ, ಇಂದಿರಾಗಾಂಧಿ, ಅಟಲ್ ಬಿಹಾರಿ ವಾಜಪೇಯಿಯವರೂ ಸೇರಿದಂತೆ ದೇಶದ ಪ್ರಧಾನಮಂತ್ರಿಯಾದವರು ಎಂದೂ ಕೆಟ್ಟ ರಾಜಕಾರಣಿಗಳ ರೀತಿ ಬೀದಿ ಭಾಷಣ ಮಾಡಿ ವಿರೋಧಪಕ್ಷಗಳನ್ನು ಹಳಿಯಲು ಹೋಗಿಲ್ಲ. ಅವರೆಲ್ಲರೂ ಕಾಪಾಡಿಕೊಂಡು ಬಂದಿದ್ದ ಪ್ರಧಾನಿ ಕುರ್ಚಿಯ ಘನತೆ, ಗಾಂಭಿರ್ಯ ಮತ್ತು ಔಚಿತ್ಯವನ್ನು ಮೋದಿ ಅವರು ತಮ್ಮ ಸುಳ್ಳು, ಕೀಳು ಅಭಿರುಚಿ ಮತ್ತು ದ್ವೇಷಾಸೂಯೆಗಳನ್ನು ವ್ಯಕ್ತಪಡಿಸುವ ಭಾಷಣಗಳ ಮೂಲಕ ಮಣ್ಣುಪಾಲು ಮಾಡುತ್ತಿದ್ದಾರೆ. ಬೆಂಗಳೂರಿಗೆ ಬಂದಿದ್ದ ಮೋದಿಯವರು ಇನ್ನೂ ಪಂಚ ರಾಜ್ಯಗಳ ಚುನಾವಣಾ ಸಮಾವೇಶಗಳ ಗುಂಗಿನಲ್ಲಿಯೇ ಇದ್ದಂತೆ ಕಂಡರು.



ಪೆಟ್ರೋಲ್, ಡೀಸೆಲ್, ಅಡುಗೆ ಅನಿಲ, ಖಾದ್ಯತೈಲ ಎಲ್ಲವೂ ದುಬಾರಿಯಾಗಿ ದೇಶದ ಜನರ ನಿತ್ಯದ ಜೀವನ ನಿರ್ವಹಣೆಗಾಗಿ ಪರದಾಡುವಂತಹ ಪರಿಸ್ಥಿತಿ ನಿರ್ಮಾಣಕ್ಕೆ ದೇಶದ ಎಡಬಿಡಂಗಿ ವಿದೇಶಾಂಗ ನೀತಿ ಕಾರಣ ಎನ್ನುವುದನ್ನು ಅರಿತುಕೊಳ್ಳುವಷ್ಟು ಜನತೆ ಪ್ರಬುದ್ಧರಾಗಿದ್ದಾರೆ. ಇರಾನ್ ವಿರುದ್ಧ ಇಸ್ರೇಲ್ ಮತ್ತು ಅಮೆರಿಕ ಜಂಟಿಯಾಗಿ ನಡೆಸುತ್ತಿರುವ ಯುದ್ಧದ ನಡುವೆ ಭಾರತ ಸಿಕ್ಕಿಹಾಕಿಕೊಂಡು ಒದ್ದಾಡುತ್ತಿದೆ. ಇಂತಹ ಸಂದರ್ಭದಲ್ಲಿ ನ್ಯಾಯ ಮತ್ತು ನೀತಿಯ ಪರವಾಗಿ ಗಟ್ಟಿಯಾದ ನಿಲುವು ತೆಗೆದುಕೊಂಡಿದ್ದರೆ ಭಾರತ ಇಂದಿನ ದುಸ್ಥಿತಿಯನ್ನು ಎದುರಿಸುತ್ತಿರಲಿಲ್ಲ. ಮೋದಿಯವರೇ, ಈ ವೈಫಲ್ಯಕ್ಕೆ ಯಾರನ್ನು ದೂರುತ್ತೀರಿ? ಜವಾಹರಲಾಲ್ ನೆಹರೂ ಅವರನ್ನೇ? ಕಾಂಗ್ರೆಸ್ ಪಕ್ಷವನ್ನೇ? ಉತ್ತರಿಸಿ ಎಂದು ಸಿದ್ದರಾಮಯ್ಯ ಹೇಳಿದ್ದಾರೆ.

ಕಾಂಗ್ರೆಸ್ ಆಡಳಿತದಲ್ಲಿ ಕರ್ನಾಟಕದ ಆರ್ಥಿಕ ಪರಿಸ್ಥಿತಿ ಸುಭದ್ರವಾಗಿದೆ. ದೇಶದ ತಲಾವಾರು ಆದಾಯ ರೂ.2.11 ಲಕ್ಷ ರೂ.ಗಳಾಗಿದ್ದರೆ ಕರ್ನಾಟಕದ್ದು 4.33 ಲಕ್ಷ ರೂಪಾಯಿಗಳು. ದೇಶದ ಜಿಡಿಪಿ ಬೆಳವಣಿಗೆಯ ದರ ಶೇಕಡಾ 7.4 ಆಗಿದ್ದರೆ, ಕರ್ನಾಟಕದ್ದು ಶೇಕಡಾ 8.1 ಆಗಿದೆ. ದೇಶದ ಜಿಡಿಪಿಯಲ್ಲಿ ಕರ್ನಾಟಕದ ಪಾಲು ಶೇಕಡಾ 9.19 ಆಗಿದೆ. ಜಿಎಸ್‌ಟಿ ಸಂಗ್ರಹದಲ್ಲಿ ಮಹಾರಾಷ್ಟ್ರದ ನಂತರ ಕರ್ನಾಟಕದ್ದೇ ಅತ್ಯಧಿಕ ಪಾಲು. ಕರ್ನಾಟಕ ಅಭಿವೃದ್ದಿಯ ಪಥದಲ್ಲಿ ವೇಗದಲ್ಲಿ ಸಾಗುತ್ತಿರುವುದಕ್ಕೆ ಬಾರಿ ನಮ್ಮ ಸರ್ಕಾರದ ವಿರುದ್ಧ ಆರೋಪ ಮಾಡುವಾಗ ಸ್ವಲ್ಪ ಪೂರ್ವ ತಯಾರಿ ಮಾಡಿಕೊಂಡು ಬನ್ನಿ. ದೇಶದ ಪ್ರಧಾನಿಯವರ ಬಾಯಲ್ಲಿ ಸುಳ್ಳು ಹೇಳಿಕೆಗಳು ಶೋಭೆಯಲ್ಲ. ಪ್ರಧಾನಿ ಮೋದಿಯವರು ತಮ್ಮ ಪಕ್ಷದ ವಿಶ್ವಾಸದ್ರೋಹದ ಚರಿತ್ರೆಯನ್ನು ಒಮ್ಮೆ ನೆನಪುಮಾಡಿಕೊಂಡಿದ್ದರೆ ಅವರು ಖಂಡಿತ ಕಾಂಗ್ರೆಸ್ ಪಕ್ಷದ ಮೇಲೆ ವಿಶ್ವಾಸದ್ರೋಹದ ಆರೋಪವನ್ನು ಮಾಡುತ್ತಿರಲಿಲ್ಲ. ಬಿಎಸ್‌ಪಿ, ಟಿಎಂಸಿ, ಡಿಎಂಕೆ, ಎಐಡಿಎಂಕೆ, ಪಿಡಿಪಿ, ಶಿವಸೇನೆ, ಅಕಾಲಿದಳ, ನ್ಯಾಷನಲ್ ಕಾನ್ಫರೆನ್ಸ್ ಸೇರಿದಂತೆ ಬಿಜೆಪಿ ಜೊತೆ ಮೈತ್ರಿಮಾಡಿಕೊಂಡು ವಿಶ್ವಾಸದ್ರೋಹಕ್ಕೊಳಗಾದ ಪ್ರಾದೇಶಿಕ ಪಕ್ಷಗಳ ಪಟ್ಟಿ ಬೆಳೆಯುತ್ತಲೇ ಇದೆ. ಇನ್ನೊಂದೆಡೆ ಕಾಂಗ್ರೆಸ್ ಮತ್ತು ಇತರ ಪಕ್ಷಗಳ ನಾಯಕರನ್ನು ಬ್ಲಾಕ್ ಮೇಲ್ ಮಾಡಿ ಅವರು ತಮ್ಮ ಪಕ್ಷಗಳಿಗೆ ವಿಶ್ವಾಸದ್ರೋಹ ಎಸಗುವಂತೆ ಮಾಡಿ, ಜೊತೆಯಲ್ಲಿ ಸೇರಿಸಿಕೊಂಡ ವಿರೋಧ ಪಕ್ಷದ ನಾಯಕರ ಪಟ್ಟಿಯೂ ಬೆಳೆಯುತ್ತಿದೆ. ಇಂತಹ ವಿಶ್ವಾಸದ್ರೋಹಿ ಪಕ್ಷದ ನಾಯಕರಾದ ಮೋದಿ, ಕಾಂಗ್ರೆಸ್ ಪಕ್ಷದ ವಿರುದ್ಧ ವಿಶ್ವಾಸದ್ರೋಹದ ಆರೋಪ ಮಾಡುತ್ತಿರುವುದನ್ನು ನೋಡಿ ದೇಶದ ಜನರೇ ಅಪಹಾಸ್ಯ ಮಾಡುತ್ತಿದ್ದಾರೆ.

ಭಾರತ ಸಾರಥಿ
12/05/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಬೆಂಗಳೂರಿನಲ್ಲಿ ವಿಶ್ವಅಸ್ತಮಾ ಜಾಗೃತಿ ವಾಕಥಾನ್

ಬೆಂಗಳೂರು

ಕರ್ನಾಟಕ ಪಲ್ಮನಾಲಜಿಸ್ಟ್ ಅಸೋಸಿಯೇಷನ್ ವತಿಯಿಂದ ವಿಶ್ವ ಅಸ್ತಮಾ ದಿನ–2026 ಅಂಗವಾಗಿ ಮೇ 10ರಂದು ಬೆಂಗಳೂರಿನ ಜಯನಗರದ ಶಾಲಿನಿ ಮೈದಾನದಲ್ಲಿ ಜಾಗೃತಿ ವಾಕಥಾನ್ ಹಾಗೂ ಅಸ್ತಮಾ ಕುರಿತು ತಜ್ಞರಿಂದ ವೈದ್ಯಕೀಯ ಶಿಕ್ಷಣ ಕಾರ್ಯಕ್ರಮ ಆಯೋಜಿಸಲಾಗಿದೆ.




"ಪ್ರತಿ ಅಸ್ತಮಾ ರೋಗಿಗೂ ಆಂಟಿ–ಇನ್‌ಫ್ಲಮೇಟರಿ ಇನ್ಹೇಲರ್‌ಗಳ ಲಭ್ಯತೆ ಇನ್ನೂ ತುರ್ತು ಅಗತ್ಯ" ಎಂಬ ಈ ವರ್ಷದ ಘೋಷವಾಕ್ಯದೊಂದಿಗೆ ನಡೆಯಲಿರುವ ಈ ಕಾರ್ಯಕ್ರಮದ ಉದ್ದೇಶ ಅಸ್ತಮಾ ರೋಗದ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು, ತ್ವರಿತ ನಿರ್ಣಯ ಹಾಗೂ ಸರಿಯಾದ ಚಿಕಿತ್ಸೆಯ ಮಹತ್ವವನ್ನು ತಿಳಿಸುವುದಾಗಿದೆ.

ಧೂಳು, ಹೊಗೆ, ವಾಯುಮಾಲಿನ್ಯ ಮತ್ತು ಅಲರ್ಜಿ ಮುಂತಾದ ಕಾರಣಗಳಿಂದ ಅಸ್ತಮಾ ಸಮಸ್ಯೆ ದಿನೇದಿನೇ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ, ಕೆಮ್ಮು, ಉಸಿರಾಟದ ತೊಂದರೆ, ವೀಸುವ ಶಬ್ದ ಸೇರಿದಂತೆ ವಿವಿಧ ಲಕ್ಷಣಗಳನ್ನು ನಿರ್ಲಕ್ಷಿಸದೆ ತಕ್ಷಣ ವೈದ್ಯರನ್ನು ಸಂಪರ್ಕಿಸಬೇಕು ಎಂದು ಸಂಘಟನೆ ಮನವಿ ಮಾಡಿದೆ.

ವೈದ್ಯರ ಸಲಹೆಯಂತೆ ಇನ್ಹೇಲರ್ ಬಳಸುವುದರಿಂದ ಅಸ್ತಮಾವನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಬಹುದಾಗಿದೆ ಎಂದು ತಜ್ಞರು ತಿಳಿಸಿದ್ದಾರೆ. ಸಾರ್ವಜನಿಕ ಆರೋಗ್ಯ ಹಿತದೃಷ್ಟಿಯಿಂದ ಹಮ್ಮಿಕೊಂಡಿರುವ ಈ ಜಾಗೃತಿ ಅಭಿಯಾನಕ್ಕೆ ಮಾಧ್ಯಮ ಹಾಗೂ ಸಾರ್ವಜನಿಕರು ಸಹಕಾರ ನೀಡುವಂತೆ ಕರ್ನಾಟಕ ಪಲ್ಮನಾಲಜಿಸ್ಟ್ ಅಸೋಸಿಯೇಷನ್ ಕೋರಿದೆ.

## 'ಪ್ರಕ್ರಿಯಾ ಕ್ಯಾನ್ಸರ್ ಕೇರ್' ಆರಂಭ

ಬೆಂಗಳೂರು

ಬೆಂಗಳೂರಿನ ನಾಗಸಂದ್ರದಲ್ಲಿರುವ ಪ್ರಕ್ರಿಯಾ ಹಾಸ್ಪಿಟಲ್ಸ್, ತನ್ನ ಸಮಗ್ರ ಕ್ಯಾನ್ಸರ್ ಕೇಂದ್ರವಾದ 'ಪ್ರಕ್ರಿಯಾ ಕ್ಯಾನ್ಸರ್ ಕೇರ್' ಮತ್ತು ವಿಕಿರಣ ಚಿಕಿತ್ಸಾ (ರೇಡಿಯೋಥೆರಪಿ) ವಿಭಾಗವನ್ನು ಉದ್ಘಾಟಿಸುವ ಮೂಲಕ ಆರೋಗ್ಯ ಸೇವೆಯಲ್ಲಿ ಮಹತ್ವದ ಮೈಲಿಗಲ್ಲನ್ನು ಸ್ಥಾಪಿಸಿದೆ. ಸುಧಾರಿತ ಮತ್ತು ಕರುಣಾಭರಿತ ಕ್ಯಾನ್ಸರ್ ಚಿಕಿತ್ಸೆಯನ್ನು ಒಂದೇ ಸೂರಿನಡಿ ಒದಗಿಸುವ ನಿಟ್ಟಿನಲ್ಲಿ ಈ ನೂತನ ಕೇಂದ್ರವನ್ನು ವಿನ್ಯಾಸಗೊಳಿಸಲಾಗಿದೆ.



ಈ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ನಿರ್ದೇಶಕ ಯೋಗರಾಜ್ ಭಟ್ ಅವರು ಭಾಗವಹಿಸಿದ್ದರು. ಬಿಜೆಪಿ ಶಾಸಕ ಎಸ್.ಆರ್. ವಿಶ್ವನಾಥ್‌ವರು ಉಪಸ್ಥಿತರಿದ್ದರು.

ಪ್ರಕ್ರಿಯಾ ಕ್ಯಾನ್ಸರ್ ಕೇರ್ ನೀಡುವ ಸೇವೆಗಳು: ಈ ಕೇಂದ್ರವು ಮೆಡಿಕಲ್ ಆಂಕೊಲಾಜಿ, ಸರ್ಜಿಕಲ್ ಆಂಕೊಲಾಜಿ, ರೇಡಿಯೇಶನ್ ಆಂಕೊಲಾಜಿ ಹಾಗೂ ಹೆಮಟೊ ಆಂಕೊಲಾಜಿ ಮತ್ತು ಬಿಎಂಟ್ (ಃಒಖ) ಸೇರಿದಂತೆ ವ್ಯಾಪಕ ಶ್ರೇಣಿಯ ಸೇವೆಗಳನ್ನು ನೀಡಲಿದೆ. ಇದರಿಂದ ರೋಗಿಗಳು ಬಹುಶಿಸ್ತೀಯ ಕ್ಯಾನ್ಸರ್ ಚಿಕಿತ್ಸೆಯನ್ನು ಸುಲಭವಾಗಿ ಮತ್ತು ನಿರಂತರವಾಗಿ ಪಡೆಯಲು ಸಾಧ್ಯವಾಗುತ್ತದೆ.

ಕಾರ್ಯಕ್ರಮದಲ್ಲಿ ಮಾತನಾಡಿದ ನಿರ್ದೇಶಕ ಯೋಗರಾಜ್ ಭಟ್ ಅವರು, "ಇಂತಹ ಸಮಗ್ರ ಕ್ಯಾನ್ಸರ್ ಕೇರ್ ಸೌಲಭ್ಯದ ಪ್ರಾರಂಭವು ವಿಶೇಷ ಆರೋಗ್ಯ ಸೇವೆಯ ಲಭ್ಯತೆಯನ್ನು ಬಲಪಡಿಸುವಲ್ಲಿ ಪ್ರಮುಖ ಹೆಜ್ಜೆಯಾಗಿದೆ. ಸುಧಾರಿತ ಮತ್ತು ರೋಗಿ–ಕೇಂದ್ರಿತ ಸಮಗ್ರ ಕ್ಯಾನ್ಸರ್ ಚಿಕಿತ್ಸಾ ಸೇವೆಗಳ ಅಗತ್ಯತೆಯನ್ನು ಇದು ಪ್ರತಿಬಿಂಬಿಸುತ್ತದೆ. ಈ ಅರ್ಥಪೂರ್ಣ ಉಪಕ್ರಮಕ್ಕಾಗಿ ನಾನು ಪ್ರಕ್ರಿಯಾ ಹಾಸ್ಪಿಟಲ್ಸ್ ಅನ್ನು ಅಭಿನಂದಿಸುತ್ತೇನೆ," ಎಂದರು.

### 150ಕ್ಕೂ ಹೆಚ್ಚು ಪ್ರಿ–ಸ್ಕೂಲ್ ಆರಂಭಿಸುವ ಗುರಿ

ಬೆಂಗಳೂರು

ಸಿಂಗಾಪುರ ಮೂಲದ ಪ್ರಶಸ್ತಿ ವಿಜೇತ ಪ್ರಿ–ಸ್ಕೂಲ್ ಬ್ರ್ಯಾಂಡ್ ರೆಡ್ ಸ್ಕೂಲ್‌ಹೌಸ್ ಭಾರತದಲ್ಲಿ ತನ್ನ ಮೊದಲ ಕೇಂದ್ರವನ್ನು ಬೆಂಗಳೂರಿನಲ್ಲಿ ಆರಂಭಿಸುವ ಮೂಲಕ ಭಾರತೀಯ ಮಾರುಕಟ್ಟೆಗೆ ಅಧಿಕೃತವಾಗಿ ಪ್ರವೇಶಿಸಿದೆ.

ದೇಶಾದ್ಯಂತ ತನ್ನ ವಿಸ್ತರಣೆಯನ್ನು ಬಲಪಡಿಸಲು ಫ್ರ್ಯಾಂಚೈಸ್ ಇಂಡಿಯಾ ಸಂಸ್ಥೆಯೊಂದಿಗೆ ಮಾಸ್ಟರ್ ಫ್ರ್ಯಾಂಚೈಸ್ ಪಾಲುದಾರಿಕೆ ಒಪ್ಪಂದ ಮಾಡಿಕೊಂಡಿರುವುದಾಗಿ ಸಂಸ್ಥೆ ತಿಳಿಸಿದೆ.

ಭಾರತದಲ್ಲಿನ ತನ್ನ ಬೆಳವಣಿಗೆ ಯೋಜನೆಯ ಭಾಗವಾಗಿ, ಮುಂದಿನ 2ರಿಂದ 5 ವರ್ಷಗಳೊಳಗೆ ಫ್ರ್ಯಾಂಚೈಸ್ ಮಾದರಿಯಲ್ಲಿ ದೇಶಾದ್ಯಂತ 150ಕ್ಕೂ ಹೆಚ್ಚು ಶಾಲೆಗಳನ್ನು ಆರಂಭಿಸುವ ಗುರಿಯನ್ನು ರೆಡ್ ಸ್ಕೂಲ್‌ಹೌಸ್ ಹೊಂದಿದೆ.

ಈ ಕುರಿತು ಮಾತನಾಡಿದ ರೆಡ್ ಸ್ಕೂಲ್‌ಹೌಸ್‌ನ ಸಿಇಒ ಮತ್ತು ಸಂಸ್ಥಾಪಕಿ ರೇಚಲ್ ಗೋಹ್, ಭಾರತದಲ್ಲಿ ಗುಣಮಟ್ಟದ ಬಾಲ್ಯ ಶಿಕ್ಷಣ ಮತ್ತು ಜಾಗತಿಕ ಕಲಿಕಾ ಮಾದರಿಗಳಿಗೆ ಹೆಚ್ಚಿನ ಬೇಡಿಕೆ ಇದೆ. ಫ್ರ್ಯಾಂಚೈಸ್ ಇಂಡಿಯಾದೊಂದಿಗೆ ಕೈಜೋಡಿಸುವ ಮೂಲಕ ದೇಶಾದ್ಯಂತ ಬಲವಾದ ಮತ್ತು ವಿಸ್ತರಿಸಬಹುದಾದ ಶಿಕ್ಷಣ ಜಾಲವನ್ನು ನಿರ್ಮಿಸಲು ಎದುರು ನೋಡುತ್ತಿದ್ದೇವೆ ಎಂದು ಹೇಳಿದರು.



# ಗೋಡೆ ಚಿತ್ರಕಲೆ ಅಭಿಯಾನಕ್ಕೆ ಚಾಲನೆ

ಬೆಂಗಳೂರು

ನಗರದ ಸಂಪಂಗಿರಾಮನಗರದಲ್ಲಿ "ಬೇರು ಭೂಮಿ ತಂಡ" ಹಾಗೂ "ಸಂಪಂಗಿರಾಮನಗರ ಪರಿವರ್ತನಾ ವೇದಿಕೆ" ವತಿಯಿಂದ ನಗರದ ಸಾರ್ವಜನಿಕ ಸ್ಥಳಗಳನ್ನು ಸುಂದರಗೊಳಿಸುವ ಉದ್ದೇಶದಿಂದ ಗೋಡೆ ಚಿತ್ರಕಲೆ ಅಭಿಯಾನವನ್ನು ಆಯೋಜಿಸಲಾಗಿದೆ.

ಬ್ಲಾಕ್ ಸ್ಪಾಟ್ (ಕಸವನ್ನು ಎಸೆಯುವ ಜಾಗ) ಹಾಗೂ ರಸ್ತೆಯ ಖಾಲಿ ಗೋಡೆಗಳ ಪ್ರದೇಶಗಳಿಗೆ ಬಣ್ಣ ಹಚ್ಚುವ ಹಾಗೂ ಚಿತ್ರಕಲೆ ಮೂಲಕ ಪರಿಸರ ಮತ್ತು ಸಾಮಾಜಿಕ ಜಾಗೃತಿ ಮೂಡಿಸುವ ಕಾರ್ಯ ಈ ಅಭಿಯಾನದ ಮುಖ್ಯ ಉದ್ದೇಶವಾಗಿದೆ. ಯುವಕರು ಹಾಗೂ ಸ್ಥಳೀಯ ನಿವಾಸಿಗಳ ಸಹಭಾಗಿತ್ವದಲ್ಲಿ ನಡೆಯಲಿರುವ ಈ ಕಾರ್ಯಕ್ರಮವು ಸ್ವಚ್ಛತೆ ಮತ್ತು ಸೌಂದರ್ಯೀಕರಣಕ್ಕೆ ಉತ್ತೇಜನ ನೀಡಲಿದೆ ಎಂದು ನಟ,ನಿರ್ಮಾಪಕ ಗಂಡಸಿ




ಸದಾನಂದ ಸ್ವಾಮಿ ತಿಳಿಸಿದರು.

ಸಂಪಂಗಿರಾಮನಗರ ಪರಿವರ್ತನಾ ವೇದಿಕೆ ತಂಡದ ಸದಸ್ಯ ಹಾಗೂ ಬಿ. ಪ್ಯಾಕ್ ಸಿವಿಕ್ ಲೀಡರ್ ಆದ ಭರತ್ ಕುಮಾರ್ ಮಾತನಾಡುತ್ತಾ ನಮ್ಮ ಸುತ್ತಮುತ್ತ ಪರಿಸರದಲ್ಲಿ ಎಲ್ಲೆಂದರಲ್ಲಿ ಕಸವನ್ನು ಹಾಕುವ ಜನರಿಗೆ ಅರಿವು ಮೂಡಿಸುವ ಸಲುವಾಗಿ ಅಂತಹ ಪ್ರದೇಶವನ್ನು ಸ್ವಚ್ಛತೆಯಿಂದ ಕಾಪಾಡಲು ಹಾಗೂ ನಮ್ಮ ನಗರವನ್ನು ಕಸಮುಕ್ತ ಮತ್ತು ಸೌಂದರ್ಯಕರಣ



ನಗರವನ್ನಾಗಿ ಮಾಡುವ ಉದ್ದೇಶ ಹೊಂದಿದ್ದೇವೆ ಎಂದು ತಿಳಿಸಿದರು.

ಈ ಅಭಿಯಾನದಲ್ಲಿ ಸ್ಥಳೀಯ ಮುಖಂಡರು ಹಾಗೂ ತಂಡದ ಸದಸ್ಯರಾದ ಭರತ್ ಕುಮಾರ್, ಗೌತಮ್, ಜಿತೇಂದ್ರ, ಜ್ಞಾನೇಶ್, ಪ್ರವೀಣ್, ಯಶಸ್, ಸಚಿನ್, ರುಕ್ಮಾಂಗದ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

## ಅದ್ದೂರಿಯಾಗಿ ಪ್ರದರ್ಶನಗೊಂಡ "ಸಂಪೂರ್ಣ ರಾಮಾಯಣ





ಬೆಂಗಳೂರು: ಶ್ರೀ ಸಾಯಿರಾಂ ಸಾಂಸ್ಕೃತಿಕ ಕಲಾ ವೇದಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕದೊಂದಿಗೆ, "ಸಂಪೂರ್ಣ ರಾಮಾಯಣ" ಹಾಗೂ ಮಕ್ಕಳ ಬೇಸಿಗೆ ಶಿಬಿರದ ಸಾಂಸ್ಕೃತಿಕ ಕಾರ್ಯಕ್ರಮವು ಗೊವಿಂದರಾಜನಗರದ ಪ್ರಿಯದರ್ಶಿನಿ ಬಡಾವಣೆಯ ಸಂಗೊಳ್ಳಿ ರಾಯಣ್ಣ ಕ್ರೀಡಾಂಗಣದಲ್ಲಿ ಅದ್ದೂರಿಯಾಗಿ ನಡೆಯಿತು.

ಕಾರ್ಯಕ್ರಮದಲ್ಲಿ ರಾಮಾಯಣದ ಮಹತ್ವ, ಭಾರತೀಯ ಸಂಸ್ಕೃತಿಯ ಮೌಲ್ಯಗಳು ಹಾಗೂ ಮಕ್ಕಳಲ್ಲಿ ಸಾಂಸ್ಕೃತಿಕ ಅರಿವು ಬೆಳೆಸುವ ಉದ್ದೇಶವನ್ನು ಪ್ರತಿಪಾದಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ನಟ ಹಾಗೂ ನಿರ್ಮಾಪಕರಾದ ಗಂಡಸಿ ಸದಾನಂದಸ್ವಾಮಿ, ಇಂತಹ ಶಿಬಿರಗಳು ಹೆಚ್ಚು ನಡೆಯಬೇಕಿದ್ದು, ಮಕ್ಕಳ ಮೊಬೈಲ್ ಬಳಕೆಯನ್ನು ಕಡಿಮೆ ಮಾಡಲು ಪೋಷಕರು ಅವರನ್ನು ಸಾಂಸ್ಕೃತಿಕ ಹಾಗೂ ಶೈಕ್ಷಣಿಕ ಚಟುವಟಿಕೆಗಳಿಗೆ ಪ್ರೋತ್ಸಾಹಿಸಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ರಾಮಾಯಣ ಆಧಾರಿತ ನೃತ್ಯ ಪ್ರದರ್ಶನಗಳು, ವಿವಿಧ ಕಲಾತ್ಮಕ ಕಾರ್ಯಕ್ರಮಗಳು ಹಾಗೂ ಮಕ್ಕಳ ಸಾಂಸ್ಕೃತಿಕ ವೈಭವ ಎಲ್ಲರ ಗಮನ ಸೆಳೆಯಿತು. ಈ ಸಂದರ್ಭದಲ್ಲಿ ಟ್ರಸ್ಟ್ ಕಾರ್ಯದರ್ಶಿ ಮೈಸೂರು ಮಂಜುಳಾ ಸುಜಾತ, ರಂಗಭೂಮಿ ಕಲಾವಿದೆ ಮೈಸೂರ್ ಲತಾ ರೇವತಿ, ಸುಮಿತ್, ದೊಡ್ಡ ರಾಮಯ್ಯ, ಸಂಗೀತ ನಿರ್ದೇಶಕ ಗುರುಸ್ವಾಮಿ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

## 'ವಿದ್ಯುತ್ ವಾಹನ ಕ್ಷೇತ್ರದಲ್ಲಿ ಡಿಜಿಟಲ್ ಉತ್ಪನ್ನ ಅಭಿವೃದ್ಧಿಯ ಹೊಸ ಆಯಾಮ'

ಬೆಂಗಳೂರು




ಭಾರತದ ಪ್ರಮುಖ ವಿದ್ಯುತ್ ಬಸ್ ತಯಾರಿಕಾ ಸಂಸ್ಥೆಯಾದ ಓಲೆಕ್ಟ್ರಾ ಗ್ರೀನ್ ಟೆಕ್ ಲಿಮಿಟೆಡ್ ಹಾಗೂ ಡಸಾಲ್ಟ್ ಸಿಸ್ಟಮ್ಸ್ ಸಂಸ್ಥೆ ಮಹತ್ವದ ಸಹಭಾಗಿತ್ವ ಘೋಷಿಸಿವೆ. ಓಲೆಕ್ಟ್ರಾ ಸಂಸ್ಥೆ ಡಸಾಲ್ಟ್ ಸಿಸ್ಟಮ್ಸ್ ಸಂಸ್ಥೆಯ 3–ಡಿ ಅನುಭವ ವ್ಯವಸ್ಥೆಯನ್ನು ಅಳವಡಿಸಿಕೊಳ್ಳಲಿದ್ದು, ಇದು ವಿದ್ಯುತ್ ವಾಹನ ಕ್ಷೇತ್ರದಲ್ಲಿ ಜಾಗತಿಕ ಮಟ್ಟದ ಡಿಜಿಟಲ್ ಸಮಗ್ರ ಉತ್ಪನ್ನ ಅಭಿವೃದ್ಧಿ ವ್ಯವಸ್ಥೆ ನಿರ್ಮಾಣದತ್ತ ಮಹತ್ವದ ಹೆಜ್ಜೆಯಾಗಿದೆ.

ಈ ನಿರ್ಧಾರವು ಸುಧಾರಿತ ಡಿಜಿಟಲ್ ತಂತ್ರಜ್ಞಾನಗಳ ನೆರವಿನಿಂದ ವಿದ್ಯುತ್ ವಾಹನ ಕ್ಷೇತ್ರದಲ್ಲಿ ನವೀನತೆಯನ್ನು ವೇಗಗೊಳಿಸುವ ಉಭಯ ಸಂಸ್ಥೆಗಳ ಸಾಮೂಹಿಕ ದೃಷ್ಟಿಕೋನವನ್ನು ಪ್ರತಿಬಿಂಬಿಸುತ್ತದೆ.

ವಿದ್ಯುತ್ ಸಂಚಾರ ಕ್ಷೇತ್ರದಲ್ಲಿ ಓಲೆಕ್ಟ್ರಾ ಹೊಂದಿರುವ ನಾಯಕತ್ವ ಹಾಗೂ ವರ್ಚುವಲ್ ಜೋಡಿ ತಂತ್ರಜ್ಞಾನ ಮತ್ತು ವೇದಿಕೆ ಆಧಾರಿತ ವಿನ್ಯಾಸ ಅಭಿಯಾಂತ್ರಿಕೆಯಲ್ಲಿ ಸಸಾಲ್ಟ್ ಸಿಸ್ಟಮ್ಸ್ ಹೊಂದಿರುವ ಪರಿಣತಿಯನ್ನು ಒಟ್ಟುಗೂಡಿಸುವ ಮೂಲಕ, ವಿದ್ಯುತ್ ವಾಹನಗಳ ವಿನ್ಯಾಸ, ಅಭಿವೃದ್ಧಿ ಮತ್ತು ವ್ಯಾಪಕ ಉತ್ಪಾದನೆಯ ವಿಧಾನವನ್ನು ಮರುಪರಿಭಾಷಿಸುವ ಗುರಿ ಹೊಂದಲಾಗಿದೆ.

3–ಡಿ ಅನುಭವ ವೇದಿಕೆ ಮಾನವ ಸಂಪನ್ಮೂಲ, ದತ್ತಾಂಶ, ವಿನ್ಯಾಸ, ಅನುಕರಣೆ ಹಾಗೂ ಉತ್ಪಾದನಾ ವ್ಯವಸ್ಥೆಗಳನ್ನು ಏಕೀಕೃತ ಸಹಯೋಗಿ ವಾತಾವರಣದಲ್ಲಿ ಜೋಡಿಸುತ್ತದೆ.


ಇದರಿಂದ ಸಂಪೂರ್ಣ ಉತ್ಪನ್ನದ ನೈಜ ಸಮಯದ ಸಮಗ್ರ ನೋಟ ಲಭ್ಯವಾಗುತ್ತದೆ.

## ರೈಸ್‌ಬ್ರಾನ್ ಆಯಿಲ್‌ನಿಂದ ಕೊಲೆಸ್ಟ್ರಾಲ್ ಸಮಸ್ಯೆ ನಿವಾರಣೆ

ಬೆಂಗಳೂರು

ಭಾರತೀಯ ಕುಟುಂಬಗಳಲ್ಲಿ ಆರೋಗ್ಯದ ಬಗ್ಗೆ ಜಾಗೃತಿ ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ಅಡುಗೆ ಪದ್ಧತಿಗಳಲ್ಲಿಯೂ ಆರೋಗ್ಯಕರ ಬದಲಾವಣೆಗಳು ಕಾಣಿಸಿಕೊಳ್ಳುತ್ತಿವೆ. ವಿಶೇಷವಾಗಿ ಅಡುಗೆ ಎಣ್ಣೆಯ ಆಯ್ಕೆಯಲ್ಲಿ ಜನರು ಹೆಚ್ಚು ಎಚ್ಚರಿಕೆ ವಹಿಸುತ್ತಿದ್ದು, ರೈಸ್ ಬ್ರಾನ್ ಆಯಿಲ್ ಇದೀಗ ಮನೆಮನೆಗಳಲ್ಲಿ ಆರೋಗ್ಯಕರ ಆಯ್ಕೆಯಾಗಿ ಹೊರಹೊಮ್ಮುತ್ತಿದೆ.

ಹಿಂದೆ ಅನಾರೋಗ್ಯ ಬಂದ ಬಳಿಕವೇ ಚಿಕಿತ್ಸೆ ಬಗ್ಗೆ ಯೋಚಿಸುತ್ತಿದ್ದ ಜನರು, ಈಗ ಆರೋಗ್ಯವನ್ನು ಮುಂಚಿತವಾಗಿ ಕಾಪಾಡಿಕೊಳ್ಳುವ ಜೀವನಶೈಲಿಯತ್ತ ಮುಖ ಮಾಡುತ್ತಿದ್ದಾರೆ. ಈ ಬದಲಾವಣೆಯಲ್ಲಿ ಆಹಾರದ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಪ್ರತಿದಿನ ಬಳಸುವ ಅಡುಗೆ ಎಣ್ಣೆಯ ಗುಣಮಟ್ಟವೂ




ಪ್ರಮುಖ ಸ್ಥಾನ ಪಡೆದುಕೊಂಡಿದೆ.

ಆರೋಗ್ಯ ತಜ್ಞರ ಪ್ರಕಾರ, ರೈಸ್ ಬ್ರಾನ್ ಆಯಿಲ್ ಹೃದಯದ ಆರೋಗ್ಯ ಕಾಪಾಡಲು ಸಹಕಾರಿ ಎನ್ನಲಾಗುತ್ತಿದೆ. ಇದು ಕೆಟ್ಟ ಕೊಲೆಸ್ಟ್ರಾಲ್ ಪ್ರಮಾಣವನ್ನು ಕಡಿಮೆ ಮಾಡಲು ನೆರವಾಗುತ್ತದೆ ಎಂಬ ಅಭಿಪ್ರಾಯ ವ್ಯಕ್ತವಾಗುತ್ತಿದೆ. ಹೃದಯ ಸಂಬಂಧಿ ಕಾಯಿಲೆಗಳು ಮತ್ತು ಮಧುಮೇಹದಂತಹ ಜೀವನಶೈಲಿ ಸಮಸ್ಯೆಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಜನರು ಆರೋಗ್ಯಕರ ಎಣ್ಣೆಗಳತ್ತ ಹೆಚ್ಚು ಒಲವು ತೋರುತ್ತಿದ್ದಾರೆ.

ರೈಸ್ ಬ್ರಾನ್ ಆಯಿಲ್‌ನಲ್ಲಿ ಪಾಲಿ ಅನ್‌ಸ್ಯಾಚುರೇಟೆಡ್ ಹಾಗೂ ಮೊನೊ ಅನ್‌ಸ್ಯಾಚುರೇಟೆಡ್ ಫ್ಯಾಟಿ ಆಸಿಡ್‌ಗಳ ಸಮತೋಲಿತ ಸಂಯೋಜನೆ ಇದ್ದು, ಸ್ಯಾಚುರೇಟೆಡ್ ಫ್ಯಾಟ್ ಪ್ರಮಾಣ ಕಡಿಮೆ ಇದೆ.

ಇದರಿಂದ ಆರೋಗ್ಯಕರ ಆಹಾರ ಪದ್ಧತಿಯನ್ನು ಅನುಸರಿಸಲು ಬಯಸುವವರಿಗೆ ಇದು ಉತ್ತಮ ಆಯ್ಕೆಯಾಗಿದೆ ಎಂದು ಪೌಷ್ಟಿಕಾಂಶ ತಜ್ಞರು ತಿಳಿಸಿದ್ದಾರೆ.

ಭಾರತೀಯ ಅಡುಗೆ ಪದ್ಧತಿಗಳಿಗೆ ಹೊಂದುವಂತೆ ಈ ಎಣ್ಣೆ ಹೆಚ್ಚಿನ ಸ್ಮೋಕ್ ಪಾಯಿಂಟ್ ಹೊಂದಿದ್ದು, ಫ್ರೈ, ತಳಿಸುವುದು ಸೇರಿದಂತೆ ವಿವಿಧ ಅಡುಗೆಗಳಿಗೆ ಅನುಕೂಲಕರವಾಗಿದೆ. ಜೊತೆಗೆ ತಟಸ್ಥ ರುಚಿ ಹೊಂದಿರುವುದರಿಂದ ಆಹಾರದ ಸ್ವಾಭಾವಿಕ ರುಚಿ ಉಳಿಯುತ್ತದೆ.


## "ಹೈಪ್‌3" ಕಿಡ್ಸ್ ಹೆಲ್ಮೆಟ್ ಶ್ರೇಣಿ ಅನಾವರಣಗೊಳಿಸಿದ ಟ್ವರ್ರಾ

ಬೆಂಗಳೂರು

ಮಹಿಳಾ ಕೇಂದ್ರಿತ ಹೆಲ್ಮೆಟ್ ಬ್ರ್ಯಾಂಡ್ ಟ್ವರ್ರಾ ತನ್ನ ಹೊಸ ಯುನಿಸೆಕ್ಸ್ ಮಕ್ಕಳ ಹೆಲ್ಮೆಟ್ ಶ್ರೇಣಿ "ಹೈಪ್3" ಅನ್ನು ಬೆಂಗಳೂರಿನ ಕೋರಮಂಗಲದಲ್ಲಿರುವ ನೆಕ್ಸಸ್ ಮಾಲ್ನಲ್ಲಿ ಉದ್ಘಾಟಿಸಲಾದ ಫ್ಲ್ಯಾಗ್‌ಶಿಪ್ ಮಳಿಗೆಯಲ್ಲಿ ಅನಾವರಣಗೊಳಿಸಿತು.

ಕಾರ್ಯಕ್ರಮದಲ್ಲಿ ಟ್ವರ್ರಾ ಸಂಸ್ಥಾಪಕಿ ಅಲ್ಪನಾ ಪರಿದಾ ಉಪಸ್ಥಿತರಿದ್ದು, ಟೈಟಾನ್ ಕಂಪನಿಯ ಮಾಜಿ ವ್ಯವಸ್ಥಾಪಕ ನಿರ್ದೇಶಕ ಸಿ.ಕೆ. ವೆಂಕಟರಾಮನ್ ಮುಖ್ಯ ಅತಿಥಿಯಾಗಿ ಭಾಗವಹಿಸಿದರು.

ಸುರಕ್ಷತೆ ಮತ್ತು ಸೌಕರ್ಯ ಎರಡನ್ನೂ



ಗಮನದಲ್ಲಿಟ್ಟುಕೊಂಡು ವಿನ್ಯಾಸಗೊಳಿಸಲಾದ "ಹೈಪ್3" ಹೆಲ್ಮೆಟ್‌ಗಳು ಯುವ ವಯಸ್ಕರು ಮತ್ತು ಮಕ್ಕಳಿಗೆ ಸೂಕ್ತವಾಗಿರುವಂತೆ ರೂಪುಗೊಂಡಿವೆ.

ಭಾರತೀಯ ಮಾರುಕಟ್ಟೆಯಲ್ಲಿ ಮಕ್ಕಳ ಮತ್ತು ಯುವ ಸವಾರರಿಗಾಗಿ ಸುರಕ್ಷಿತ ಹಾಗೂ ಆಕರ್ಷಕ ಹೆಡ್ಗಿಯರ್‌ಗಳ ಕೊರತೆ ಇರುವ ಹಿನ್ನೆಲೆ, ಈ ಹೊಸ ಶ್ರೇಣಿ ಆ ಅಗತ್ಯವನ್ನು ಪೂರೈಸುವ ಉದ್ದೇಶ ಹೊಂದಿದೆ ಎಂದು ಕಂಪನಿ ತಿಳಿಸಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಅಲ್ಪನಾ ಪರಿದಾ, ಯುವ ವಯಸ್ಕರು ಮತ್ತು ಹಿಂಬದಿ ಸವಾರರಿಗೆ ಲಭ್ಯವಿರುವ ಹಲವಾರು ಹೆಲ್ಮೆಟ್‌ಗಳಲ್ಲಿ ಸುರಕ್ಷತೆಯ ಜೊತೆಗೆ ವಿನ್ಯಾಸ ಹಾಗೂ ಆರಾಮದಾಯಕತೆಯ ಕೊರತೆ ಕಂಡುಬರುತ್ತಿತ್ತು.

ಅದನ್ನು ಗಮನದಲ್ಲಿಟ್ಟುಕೊಂಡೇ ಟ್ವರ್ರಾ ಹುಟ್ಟಿಕೊಂಡಿತು. "ಹೈಪ್3" ರಾಜಿಯಿಲ್ಲದ ರಕ್ಷಣೆಯನ್ನು ನೀಡುವುದರ ಜೊತೆಗೆ ಹಗುರ ಮತ್ತು ಆರಾಮದಾಯಕ ಅನುಭವ ನೀಡುತ್ತದೆ. ಇದು ಕೇವಲ ಉತ್ಪನ್ನ ಬಿಡುಗಡೆ ಅಲ್ಲ, ಸುರಕ್ಷಿತ ಮತ್ತು ಅಂತರ್ಗತ ರಸ್ತೆ ಸುರಕ್ಷತಾ ಚಳವಳಿಯ ಆರಂಭವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ರಸ್ತೆ ಸುರಕ್ಷತೆ ಕುರಿತ ಗ್ರಾಫಿಟಿ ವಾಲ್ ಸೇರಿದಂತೆ ಹಲವು ಸಂವಾದಾತ್ಮಕ ಚಟುವಟಿಕೆಗಳು ಆಯೋಜಿಸಲ್ಪಟ್ಟಿದ್ದವು. ಉದಯೋನ್ಮುಖ ಯುವ ಕ್ರಿಕೆಟಿಗರು ಹಾಗೂ ಬೆಂಗಳೂರಿನ ದ್ವಿಚಕ್ರ ವಾಹನ ಸಮುದಾಯದ ಸದಸ್ಯರು ಕಾರ್ಯಕ್ರಮದಲ್ಲಿ ಭಾಗ ವಹಿಸಿದರು.

## "ಹೈಪ್‌3" ಕಿಡ್ಸ್ ಹೆಲ್ಮೆಟ್ ಶ್ರೇಣಿ ಅನಾವರಣಗೊಳಿಸಿದ ಟ್ವರ್ರಾ

ಬೆಂಗಳೂರು

ಮಹಿಳಾ ಕೇಂದ್ರಿತ ಹೆಲ್ಮೆಟ್ ಬ್ರ್ಯಾಂಡ್ ಟ್ವರ್ರಾ ತನ್ನ ಹೊಸ ಯುನಿಸೆಕ್ಸ್ ಮಕ್ಕಳ ಹೆಲ್ಮೆಟ್ ಶ್ರೇಣಿ "ಹೈಪ್3" ಅನ್ನು ಬೆಂಗಳೂರಿನ ಕೋರಮಂಗಲದಲ್ಲಿರುವ ನೆಕ್ಸಸ್ ಮಾಲ್ನಲ್ಲಿ ಉದ್ಘಾಟಿಸಲಾದ ಫ್ಲ್ಯಾಗ್‌ಶಿಪ್ ಮಳಿಗೆಯಲ್ಲಿ ಅನಾವರಣಗೊಳಿಸಿತು.

ಕಾರ್ಯಕ್ರಮದಲ್ಲಿ ಟ್ವರ್ರಾ ಸಂಸ್ಥಾಪಕಿ ಅಲ್ಪನಾ ಪರಿದಾ ಉಪಸ್ಥಿತರಿದ್ದು, ಟೈಟಾನ್ ಕಂಪನಿಯ ಮಾಜಿ ವ್ಯವಸ್ಥಾಪಕ ನಿರ್ದೇಶಕ ಸಿ.ಕೆ. ವೆಂಕಟರಾಮನ್ ಮುಖ್ಯ ಅತಿಥಿಯಾಗಿ ಭಾಗವಹಿಸಿದರು.

ಸುರಕ್ಷತೆ ಮತ್ತು ಸೌಕರ್ಯ ಎರಡನ್ನೂ ಗಮನದಲ್ಲಿಟ್ಟುಕೊಂಡು ವಿನ್ಯಾಸಗೊಳಿಸಲಾದ "ಹೈಪ್3" ಹೆಲ್ಮೆಟ್‌ಗಳು ಯುವ ವಯಸ್ಕರು ಮತ್ತು ಮಕ್ಕಳಿಗೆ ಸೂಕ್ತವಾಗಿರುವಂತೆ ರೂಪುಗೊಂಡಿವೆ.

ಭಾರತೀಯ ಮಾರುಕಟ್ಟೆಯಲ್ಲಿ ಮಕ್ಕಳ ಮತ್ತು ಯುವ ಸವಾರರಿಗಾಗಿ ಸುರಕ್ಷಿತ ಹಾಗೂ ಆಕರ್ಷಕ ಹೆಡ್ಗಿಯರ್‌ಗಳ ಕೊರತೆ ಇರುವ ಹಿನ್ನೆಲೆ, ಈ ಹೊಸ



ಶ್ರೇಣಿ ಆ ಅಗತ್ಯವನ್ನು ಪೂರೈಸುವ ಉದ್ದೇಶ ಹೊಂದಿದೆ ಎಂದು ಕಂಪನಿ ತಿಳಿಸಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಅಲ್ಪನಾ ಪರಿದಾ, ಯುವ ವಯಸ್ಕರು ಮತ್ತು ಹಿಂಬದಿ ಸವಾರರಿಗೆ ಲಭ್ಯವಿರುವ ಹಲವಾರು ಹೆಲ್ಮೆಟ್‌ಗಳಲ್ಲಿ ಸುರಕ್ಷತೆಯ ಜೊತೆಗೆ ವಿನ್ಯಾಸ ಹಾಗೂ ಆರಾಮದಾಯಕತೆಯ ಕೊರತೆ ಕಂಡುಬರುತ್ತಿತ್ತು.

ಅದನ್ನು ಗಮನದಲ್ಲಿಟ್ಟುಕೊಂಡೇ ಟ್ವರ್ರಾ ಹುಟ್ಟಿಕೊಂಡಿತು. "ಹೈಪ್3" ರಾಜಿಯಿಲ್ಲದ ರಕ್ಷಣೆಯನ್ನು ನೀಡುವುದರ ಜೊತೆಗೆ ಹಗುರ ಮತ್ತು ಆರಾಮದಾಯಕ ಅನುಭವ ನೀಡುತ್ತದೆ. ಇದು ಕೇವಲ ಉತ್ಪನ್ನ ಬಿಡುಗಡೆ ಅಲ್ಲ, ಸುರಕ್ಷಿತ ಮತ್ತು ಅಂತರ್ಗತ ರಸ್ತೆ ಸುರಕ್ಷತಾ ಚಳವಳಿಯ ಆರಂಭವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ರಸ್ತೆ ಸುರಕ್ಷತೆ ಕುರಿತ ಗ್ರಾಫಿಟಿ ವಾಲ್ ಸೇರಿದಂತೆ ಹಲವು ಸಂವಾದಾತ್ಮಕ ಚಟುವಟಿಕೆಗಳು ಆಯೋಜಿಸಲ್ಪಟ್ಟಿದ್ದವು. ಉದಯೋನ್ಮುಖ ಯುವ ಕ್ರಿಕೆಟಿಗರು ಹಾಗೂ ಬೆಂಗಳೂರಿನ ದ್ವಿಚಕ್ರ ವಾಹನ ಸಮುದಾಯದ ಸದಸ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿದರು.

# ಅಪಘಾತಕ್ಕೆ ಕಾರಣವಾದ ವ್ಯಕ್ತಿಗೆ ಒಂದು ದಿನದ ಶಿಕ್ಷೆ

ಬೆಂಗಳೂರು

ರಸ್ತೆ ಅಪಘಾತದಲ್ಲಿ ವ್ಯಕ್ತಿಯೊಬ್ಬರ ಸಾವಿಗೆ ಕಾರಣವಾಗಿದ್ದ 71 ವರ್ಷದ ಅಪರಾಧಿಯೇ ಅನಾರೋಗ್ಯಕ್ಕೆ ತುತ್ತಾಗಿ ಗಾಲಿಕುರ್ಚಿಯಲ್ಲಿ ನ್ಯಾಯಾಲಯಕ್ಕೆ ಆಗಮಿಸಿದ್ದ ಅಂಶವನ್ನು ಪರಿಗಣಿಸಿರುವ ಹೈಕೋರ್ಟ್, ವಿಚಾರಣಾ ನ್ಯಾಯಾಲಯ ವಿಧಿಸಿದ್ದ ಒಂದು ವರ್ಷದ ಶಿಕ್ಷೆಯನ್ನು ಒಂದು ದಿನದ ಸರಳ ಕಾರಾಗೃಹ ಶಿಕ್ಷೆಗೆ ಇಳಿಕೆ ಮಾಡಿ ಮಹತ್ವದ ಆದೇಶ ಮಾಡಿದೆ.

ವಿಚಾರಣಾ ನ್ಯಾಯಾಲಯ ವಿಧಿಸಿದ್ದ ಶಿಕ್ಷೆಯ ಪ್ರಮಾಣವನ್ನು ಪ್ರಶ್ನಿಸಿ ಮೈಸೂರಿನ ಬನ್ನಿಮಂಟಪ ನಿವಾಸಿ 71 ವರ್ಷದ ಸೈಫುದ್ದೀನ್ ಎಂಬುವರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ವಿ.ಶ್ರೀಶಾನಂದ ಅವರಿದ್ದ ನ್ಯಾಯಪೀಠ ಈ ಆದೇಶ ನೀಡಿದೆ.

ಪ್ರಕರಣ ಸಂಬಂಧ ವಿಚಾರಣಾ ನ್ಯಾಯಾಲಯ ನೀಡಿದ್ದ ಆದೇಶ, ಆರೋಪಕ್ಕೆ ಸಂಬಂಧಿಸಿದಂತೆ ಸಾಕ್ಷ್ಯಾಧಾರಗಳನ್ನು ಗಮನಿಸಿದ ನ್ಯಾಯಪೀಠ, ಅರ್ಜಿದಾರರು ಗಾಲಿಕುರ್ಚಿಗೆ ಸೀಮಿತರಾಗಿದ್ದಾರೆ. ಅವರು ದಿನನಿತ್ಯದ ಚಟುವಟಿಕೆಗಳಿಗೆ ಮತ್ತೊಬ್ಬರನ್ನು ಅವಲಂಬಿಸಿದ್ದಾರೆ.

ಅವರ ವಿರುದ್ಧ ಆರೋಪಗಳಿದ್ದರೂ ಇಂತಹ ಅನಾರೋಗ್ಯ ಸ್ಥಿತಿಯಲ್ಲಿ ಜೈಲಿಗೆ ಕಳುಹಿಸಿದರೂ ಯಾವುದೇ ಪ್ರಯೋಜನವಾಗುವುದಿಲ್ಲ ಎಂದು ತಿಳಿಸಿದೆ. ಅಲ್ಲದೇ, ಆರೋಪಿ ಮಾಡಿದ ಕೃತ್ಯದಿಂದ ಸಾವಿಗೀಡಾಗಿದ್ದ ಸಂತ್ರಸ್ತರ ಕುಟುಂಬಕ್ಕೆ ಹೆಚ್ಚುವರಿಯಾಗಿ 5 ಲಕ್ಷ ರು.ಗಳನ್ನು 2026ರ ಮೇ 15ರೊಳಗೆ ಪಾವತಿಸಬೇಕು ಎಂದು ಆದೇಶಿಸಿದೆ.

# ಕಾನೂನು ಸಲಹೆಗಾರರ ಹುದ್ದೆಗೆ ಅರ್ಜಿ ಆಹ್ವಾನ

ಬೆಂಗಳೂರು

ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಬಾಕಿ ಇರುವ ಭೂ ಸ್ವಾಧೀನ ಹಾಗೂ ವಿವಿಧ ಸಿವಿಲ್ ವ್ಯಾಜ್ಯಗಳ ಪರಿಣಾಮಕಾರಿ ನಿರ್ವಹಣೆಗಾಗಿ ಗುತ್ತಿಗೆ ಆಧಾರದ ಮೇಲೆ ಕಾನೂನು ಸಲಹೆಗಾರರ ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಭೂ ಸ್ವಾಧೀನ ಪ್ರಕರಣಗಳಲ್ಲಿ ನ್ಯಾಯಾಲಯಗಳು ನೀಡುವ ಹೆಚ್ಚುವರಿ ಪರಿಹಾರದ ಆದೇಶಗಳ ವಿರುದ್ಧ ಮೇಲ್ಮನವಿ ಸಲ್ಲಿಸುವ ಮುನ್ನ ಕಾನೂನು ಅಧಿಕಾರಿಗಳ ಅಭಿಪ್ರಾಯ ಪಡೆಯುವುದು ಮತ್ತು ಆರ್ಥಿಕ ಹೊಣೆಗಾರಿಕೆಯನ್ನು ಲೆಕ್ಕ ಹಾಕುವುದು ಅತ್ಯಗತ್ಯವಾಗಿದೆ. ಜಿಲ್ಲಾಡಳಿತದ ಕಾರ್ಯಬಾಹುಳ್ಯದ ನಡುವೆ ಇಂತಹ ವ್ಯಾಜ್ಯಗಳ ಬಗ್ಗೆ ಹೆಚ್ಚಿನ ಗಮನ ಹರಿಸಲು ಸಾಧ್ಯವಾಗದಿರುವುದನ್ನು ಮನಗಂಡು ಸರ್ಕಾರವು ಈ ವಿಶೇಷ ಹುದ್ದೆಯನ್ನು ಸೃಜಿಸಿದೆ. ಸರ್ಕಾರದ ಆದೇಶದಂತೆ ಈ ಹುದ್ದೆಯ ಅವಧಿಯು 01/04/2026 ರಿಂದ 31/03/2028 ರವರೆಗೆ ಇರಲಿದೆ.

ಕರ್ನಾಟಕ ಉಚ್ಚ ನ್ಯಾಯಾಲಯ ಹಾಗೂ ಸರ್ವೋಚ್ಚ ನ್ಯಾಯಾಲಯಗಳಲ್ಲಿ ದಾಖಲಾಗಿರುವ ಪ್ರಕರಣಗಳಿಗೆ ಸಂಬಂಧಿಸಿದಂತೆ ಕಂಡಿಕವಾರು ಉತ್ತರಗಳು ಮತ್ತು ಆಕ್ಷೇಪಣೆಗಳನ್ನು ಸಿದ್ಧಪಡಿಸುವುದು. ದಾಖಲಾತಿಗಳನ್ನು ಕಾನೂನು ರೀತ್ಯಾ ಪರಿಶೀಲಿಸಿ ಜಿಲ್ಲಾಧಿಕಾರಿಗಳಿಗೆ ಸೂಕ್ತ ಸಲಹೆ ನೀಡುವುದು ಸೇರಿದಂತೆ ಜವಾಬ್ದಾರಿಗಳನ್ನು ಹೊರಿಸಲಾಗಿದೆ.

ನೇಮಕಾತಿ ಪಡೆಯುವ ಅಭ್ಯರ್ಥಿಗಳ ಅನುಭವದ ಆಧಾರದ ಮೇಲೆ ಮಾಸಿಕ ಸಂಚಿತ ವೇತನವನ್ನು ನಿಗದಿಪಡಿಸಲಾಗಿದೆ: ನಿವೃತ್ತ ನ್ಯಾಯಾಧೀಶರು ಅಥವಾ ನಿವೃತ್ತ ವಿಶೇಷ ಜಿಲ್ಲಾಧಿಕಾರಿಗಳಿಗೆ: ರೂ. 70,000/-. ನಿವೃತ್ತ ತಹಶೀಲ್ದಾರ್ ಅಥವಾ ನಿವೃತ್ತ ಉಪತಹಶೀಲ್ದಾರ್‌ಗಳಿಗೆ:ರೂ. 40,000/-.

ಅರ್ಜಿ ಸಲ್ಲಿಸುವ ವಿಧಾನ

ಆಸಕ್ತರು ತಮ್ಮ ಅರ್ಜಿಗಳನ್ನು ಮೇ 27ರ ಸಂಜೆ 5:00 ಗಂಟೆಯೊಳಗೆ ಸಲ್ಲಿಸಬಹುದು. ಅರ್ಜಿಗಳನ್ನು ಜಿಲ್ಲಾಧಿಕಾರಿಗಳ ಕಾರ್ಯಾಲಯ, ಜಿಲ್ಲಾಡಳಿತ ಭವನ, ಟಮಕ, ಕೋಲಾರ ಇಲ್ಲಿಗೆ ಖುದ್ದಾಗಿ ಅಥವಾ ನೋಂದಾಯಿತ ಅಂಚೆ ಮೂಲಕ ಕಳುಹಿಸಬಹುದು. ಅಂತಿಮ ಆಯ್ಕೆಯಲ್ಲಿ ಜಿಲ್ಲಾಧಿಕಾರಿಗಳ ನಿರ್ಧಾರವೇ ಅಂತಿಮವಾಗಿರುತ್ತದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಜನರ ಮನೆ ಬಾಗಿಲಲ್ಲೇ ನೀರಿನ ಸಮಸ್ಯೆಗೆ ಪರಿಹಾರ




ಬೆಂಗಳೂರು

ಹೋಬಳಿಯ ಗುಲ್ಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೊತ್ತೂರು ಗ್ರಾಮದಲ್ಲಿ ಆಯೋಜಿಸಿದ್ದ ಕುಡಿಯುವ ನೀರಿನ ಅದಾಲತ್ ಕಾರ್ಯಕ್ರಮದಲ್ಲಿ ತಾಲೂಕು ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರವಿಕುಮಾರ್ ಜನರ ನೀರಿನ ಸಮಸ್ಯೆಗಳಿಗೆ ತ್ವರಿತ ಪರಿಹಾರ ನೀಡುವ ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, "ಜನರಿಗೆ ಕುಡಿಯುವ ನೀರಿನ ಸಮಸ್ಯೆ ಉಂಟಾಗಬಾರದು. ಸಮಸ್ಯೆಗಳು ಕಂಡುಬಂದರೆ ತಕ್ಷಣ ನಮಗೆ ಮಾಹಿತಿ ನೀಡಿ. ನಿಮ್ಮ ಮನೆ ಬಾಗಿಲಲ್ಲಿಯೇ ಸಮಸ್ಯೆ ಪರಿಹರಿಸುವ ಕೆಲಸ ಮಾಡುತ್ತೇವೆ" ಎಂದು ತಿಳಿಸಿದರು.

ಈ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆಗಳನ್ನು ಸ್ಥಳದಲ್ಲೇ ಪರಿಶೀಲಿಸಿ ತಕ್ಷಣ ಪರಿಹಾರ ಕಲ್ಪಿಸುವ ಉದ್ದೇಶದಿಂದ ಅದಾಲತ್ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದ ಅವರು, ಶಾಸಕರ ಸೂಚನೆಯಂತೆ ಸಮಿತಿಯನ್ನು ರಚನೆ ಮಾಡಲಾಗಿದ್ದು, ಯಾವುದೇ ಗ್ರಾಮದಲ್ಲಿ ನೀರಿನ ಅಭಾವ ಉಂಟಾದ ತಕ್ಷಣ ಪರ್ಯಾಯ ವ್ಯವಸ್ಥೆ ಕಲ್ಪಿಸಲಾಗುವುದು ಎಂದು ಹೇಳಿದರು. "ನೀರು ಇರುವ ವೇಳೆ ಮಿತವಾಗಿ ಬಳಸುವ ಅಭ್ಯಾಸ ಬೆಳೆಸಿಕೊಳ್ಳಬೇಕು. ಮುಂದಿನ ಪೀಳಿಗೆಗಾಗಿ ನೀರನ್ನು ಉಳಿಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ. ಪ್ರತಿಯೊಬ್ಬ ವ್ಯಕ್ತಿಯೂ ದಿನಕ್ಕೆ 55 ಲೀಟರ್ ನೀರನ್ನು ಮಾತ್ರ ಬಳಕೆ ಮಾಡಬೇಕು" ಎಂದು ಅವರು ಸಲಹೆ ನೀಡಿದರು.

ಗ್ರಾಮಗಳ ಸ್ವಚ್ಛತೆ ಬಗ್ಗೆ ಮಾತನಾಡಿದ ಅವರು, ಚರಂಡಿ ಹಾಗೂ ಮನೆಗಳ ಸುತ್ತಮುತ್ತ ಕಸ ಬೀಳದಂತೆ ನೋಡಿಕೊಳ್ಳಬೇಕು. ಕಸದ ವಾಹನ ಬಂದಾಗ ಅದರಲ್ಲಿ ಕಸ ಹಾಕುವ ಮೂಲಕ ಗ್ರಾಮಗಳನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಎಇಇ ಎನ್. ಆನಂದ್ ಕುಮಾರ್, ಪಂಚಾಯಿತಿ ನೋಡಲ್ ಅಧಿಕಾರಿ ಶಶಿಕಲಾ, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಯುವರಾಜ್, ಇಸಿಓ ಸೋಮಶೇಖರ್, ಪಿಡಿಓ ಚಂದ್ರಕಲಾ, ವಿಶ್ವನಾಥ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ‘ಕರ್ನಾಟಕ ರಾಜ್ಯಾದ್ಯಂತ 5 ಕೋಟಿ ಸಸಿಗಳನ್ನು ನೆಡಲಾಗುವುದು’

ಬೆಂಗಳೂರು

ಪರಿಸರ ಸಂರಕ್ಷಣೆಗಾಗಿ ರಾಜ್ಯಾದ್ಯಂತ 5 ಕೋಟಿ ಸಸಿಗಳನ್ನು ನೆಡಲಾಗುವುದು ಎಂದು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್.ಶಶಿಧರ್ ಶೆಟ್ಟಿ ತಿಳಿಸಿದರು.

ಕರ್ನಾಟಕ ಉಚ್ಚ ನ್ಯಾಯಾಲಯದ ಕಾರ್ಯನಿರ್ವಾಹಕ ಅಧ್ಯಕ್ಷರ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ಧರೆ ಫೌಂಡೇಷನ್ ಅವರು ಸಂಯುಕ್ತವಾಗಿ ಪರಿಸರ ಸಂರಕ್ಷಣೆ ಮತ್ತು ಪರಿಸರ ಪುನರುಜೀವನಕ್ಕೆ ಸಂಬಂಧಿಸಿದಂತೆ ಮಾಡಿಕೊಂಡಿರುವ ಒಪ್ಪಂದದ ಕುರಿತು ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ಧರೆ ಫೌಂಡೇಶನ್ ಸಂಯುಕ್ತವಾಗಿ ರಾಜ್ಯದಲ್ಲಿ ಪರಿಸರ ಅಭಿಯಾನವನ್ನು ಆರಂಭಿಸುತ್ತಿದ್ದು, 5 ಕೋಟಿ ಸಸಿಗಳಲ್ಲಿ ಮೊದಲು 2 ಕೋಟಿ ಸಸಿಗಳನ್ನು



ಬೆಂಗಳೂರು ಹಾಗೂ ಅದರ ಸುತ್ತಮುತ್ತ "ಗ್ರೀನ್ ರಿಂಗ್ ಬೆಂಗಳೂರು' ಯೋಜನೆಯಡಿ ನೆಡಲಾಗುತ್ತದೆ. ಈ ಯೋಜನೆಯನ್ನು ವಿಧಾನಸೌಧವನ್ನು ಕೇಂದ್ರಬಿಂದುಗೊಳಿಸಿ 50 ಕಿ.ಮೀ ವ್ಯಾಪ್ತಿಯಲ್ಲಿ ಜಾರಿಗೆ ಬರುತ್ತದೆ. ಉಳಿದ 3 ಕೋಟಿ ಸಸಿಗಳನ್ನು ಜಿಲ್ಲೆಗಳಲ್ಲಿ, ತಾಲ್ಲೂಕು ಮಟ್ಟದಲ್ಲಿ ಹಾಗೂ ಹೋಬಳಿ ಮಟ್ಟದಲ್ಲಿ ನೆಡಲಾಗುವುದು.

ಸಮಾಜಕ್ಕೆ ಉತ್ತಮ ಕೆಲಸ ಮಾಡುವ ಉದ್ದೇಶದಿಂದ ಹಾಗೂ ಮುಂದಿನ ಪೀಳಿಗೆಗೆ ಮಾದರಿಯಾಗಿ ಉತ್ತಮ ಸಮಾಜ, ಒಳ್ಳೆಯ ಪರಿಸರ ನಿರ್ಮಿಸಬೇಕಾಗಿರುವುದು ನಮ್ಮ ಜವಾಬ್ದಾರಿಯಾಗಿರುವುದರಿಂದ ಸಸಿ ನೆಡುವ ಕಾರ್ಯದೊಂದಿಗೆ ರಾಜ್ಯಾದ್ಯಂತ ಕೆರೆ ಸಂರಕ್ಷಣೆ ಮಾಡಬೇಕು ಎಂದರು.

ರಾಜ್ಯದಲ್ಲಿ 45 ಸಾವಿರಕ್ಕೂ ಹೆಚ್ಚು ಕೆರೆಗಳಿದ್ದು, ಅವುಗಳಲ್ಲಿ ಸುಮಾರು 3471 ಕೆರೆಯಲ್ಲಿ ನೀರು ಇಲ್ಲ. 11918 ಕೆರೆಗಳಲ್ಲಿ ಶೇ.30 ರಷ್ಟು ನೀರು ಕಡಿಮೆ ಇದೆ. ಈ ಕೆರೆಗಳಲ್ಲಿ ಹೂಳೆತ್ತಿ ದಶಕಗಳೆ ಕಳೆದಿದ್ದು, ಹೂಳೆತ್ತಲು ಸರ್ಕಾರದಿಂದಲೇ ಸಾಧ್ಯವಾಗುವುದಿಲ್ಲ. ಜನರ ಸಹಭಾಗಿತ್ವವು ಅವಶ್ಯಕವಾಗಿರುವುದರಿಂದ ಜನಸಾಮಾನ್ಯರಿಗೆ ಕೆರೆ ಸಂರಕ್ಷಣೆ ಕುರಿತು ಅರಿವು ಮೂಡಿಸಬೇಕು. ಕೆರೆ ರಕ್ಷಣೆ ಮಾಡಿದರೆ ನೀರಿನ ಮಟ್ಟ ಜಾಸ್ತಿ ಆಗುವುದರ ಜೊತೆಗೆ ಪರಿಸರ ಸಂರಕ್ಷಣೆಯಾಗುತ್ತದೆ ಎಂದರು.

ಪ್ರತಿಯೊಬ್ಬ ನಾಗರೀಕರ ಸಹಕಾರ ಅಗತ್ಯವಾಗಿದ್ದು, "ನಮ್ಮ ಊರು-ನಮ್ಮ ಕೆರೆ" ಎಂಬ ಘೋಷಣೆಯೊಂದಿಗೆ ತಮ್ಮ ಊರಿನ ಕೆರೆಗಳು ಬತ್ತಿ ಹೋಗಿದ್ದಲ್ಲಿ ಅದನ್ನು ಸರ್ಕಾರದ ಅಧಿಕಾರಿಗಳ ಗಮನಕ್ಕೆ ತಂದು ಹೂಳೆತ್ತುವ ಕೆಲಸ ಮಾಡಬೇಕು ಎಂದರು.

ಧರೆ ಫೌಂಡೇಶನ್ ನಿರ್ದೇಶಕರಾದ ವೃಶಾಂಕ ಭಟ್ ಅವರು ಮಾತನಾಡಿ, ಬೆಂಗಳೂರಿನಲ್ಲಿ ವೇಗವಾದ ನಗರೀಕರಣದಿಂದ ಪ್ರಕೃತಿಯ ವಾಸಸ್ಥಾನಗಳು ಕಡಿಮೆಯಾಗುತ್ತಿವೆ. ಈ ಸಮಸ್ಯೆಯ ಪರಿಹಾರವಾಗಿ ಮಿಯಾವಾಕಿ ವಿಧಾನವನ್ನು ಬಳಸಲಾಗುತ್ತಿದೆ. ಮರಗಳನ್ನು ಬೆಳೆಸುವುದರಿಂದ ಆಕ್ಸಿಜನ್ ಬಿಡುಗಡೆಯಾಗುತ್ತದೆ. ನೀರಿನ ಹರಿವು ಜಾಸ್ತಿಯಾಗುತ್ತದೆ. ವಾಯುಮಾಲಿನ್ಯ ಕಡಿಮೆಯಾಗುತ್ತದೆ. ನಗರ ವಾಯು ಗುಣಮಟ್ಟವನ್ನು ಸುಧಾರಿಸುತ್ತದೆ ಎಂದರು.

ಕೆರೆಗಳ ಪುನರುಜ್ಜೀವನದಿಂದ ಭೂಗರ್ಭಜಲ ಹೆಚ್ಚಳವಾಗುತ್ತದೆ. ಜಲ ಜೀವಿಗಳ ಪುನರುಜ್ಜೀವನವಾಗುತ್ತದೆ. ರೈತರಿಗೆ ನೀರಿನ ಅನುಕೂಲವಾಗುವುದರ ಜೊತೆಗೆ ಪ್ರವಾಹ ನಿಯಂತ್ರಣ ಮತ್ತು ನೀರಿನ ಸಂರಕ್ಷಣೆಯಾಗುತ್ತದೆ.

ಈ ಯೋಜನೆಯು ಸಮೂಹದ ಸಹಭಾಗಿತ್ವದಿಂದ ಯಶಸ್ವಿಯಾಗಲಿದ್ದು, ಸಿಆರ್‌ಎಸ್ ಸಂಸ್ಥೆಗಳು, ದಾನಿಗಳು ಮತ್ತು ಸಾರ್ವಜನಿಕರು ಸಹಕರಿಸಬೇಕು. ದಾನಿಗಳ ಹೆಸರುಗಳನ್ನು ಸಸಿ ನೆಡುವ ಸ್ಥಳಗಳಲ್ಲಿ ಪ್ರದರ್ಶಿಸಲಾಗುವುದು. ಜಿಪಿಎಸ್ ಸ್ಥಳಾಂಶಗಳನ್ನು ವೆಬ್‌ಸೈಟ್‌ನಲ್ಲಿ ಸಾರ್ವಜನಿಕವಾಗಿ ಲಭ್ಯವಾಗುವಂತೆ ಮಾಡಲಾಗುತ್ತದೆ ಎಂದರು. ಪತ್ರಿಕಾಗೋಷ್ಠಿಯಲ್ಲಿ ಧರೆ ಪೌಂಡೇಶನ್‌ನ ನಿರ್ದೇಶಕರುಗಳಾದ ಡಿ.ಎಂ.ಪೂರ್ಣೇಶ್, ಅಶೋಕ ಕೆ.ಎಂ.ಗೌಡ ಉಪಸ್ಥಿತರಿದ್ದರು.

# ಮುದುಗುರ್ಕಿ ಗ್ರಾಮಕ್ಕೆ ಸಚಿವ ಕೆ.ಹೆಚ್.ಮುನಿಯಪ್ಪ ಭೇಟಿ

ಬೆಂಗಳೂರು

ಹೋಬಳಿಯ ವೆಂಕಟಗಿರಿಕೋಟೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮುದುಗುರ್ಕಿ ಗ್ರಾಮದ ಬಳಿ, ಅಪಘಾತದಲ್ಲಿ ಮೃತಪಟ್ಟಿದ್ದ, ಮುದುಗುರ್ಕಿ ಗ್ರಾಮದ ನಿವಾಸಿ ಸುಧಾಕರ್ ಅವರ ಮನೆಗೆ ಸಚಿವ ಕೆ.ಹೆಚ್.ಮುನಿಯಪ್ಪ ಅವರು, ಭೇಟಿ ನೀಡಿ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು.

ರಾಷ್ಟ್ರೀಯ ಹೆದ್ದಾರಿ 207 ರಲ್ಲಿ ನಡೆದಿದ್ದ ಅಪಘಾತದಿಂದಾಗಿ ಮೃತಪಟ್ಟಿದ್ದ ಸುಧಾಕರ್ ಅವರ ಶವವನ್ನು ರಸ್ತೆಗೆ ಅಡ್ಡಲಾಗಿ ಇಟ್ಟು, ಗ್ರಾಮಸ್ಥರು ಗುರುವಾರ ಪ್ರತಿಭಟನೆ ನಡೆಸಿದ್ದ ಹಿನ್ನೆಲೆಯಲ್ಲಿ ಶುಕ್ರವಾರ ಸಚಿವ ಕೆ.ಹೆಚ್.ಮುನಿಯಪ್ಪ ಅವರು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳೊಂದಿಗೆ ಭೇಟಿ ನೀಡಿ, ಮಾಹಿತಿ ಪಡೆದುಕೊಂಡರು.

ಈ ವೇಳೆ ಮಾತನಾಡಿದ ವೆಂಕಟಗಿರಿಕೋಟೆ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಆರ್.ಅಮರನಾಥ್ ಅವರು, ಹೆದ್ದಾರಿಯು ಈ ಗ್ರಾಮಗಳಿಗೆ ಮರಣಶಾಸನವನ್ನೆ ಬರೆಯುತ್ತಿದೆ. ಇದರಿಂದ ಅನುಕೂಲಕ್ಕಿಂತ



ಅನಾನುಕೂಲವೇ ಜಾಸ್ತಿಯಾಗಿದೆ. ಇದುವರೆಗೂ ಸುಮಾರು 50 ಕ್ಕೂ ಹೆಚ್ಚು ಮಂದಿ ಪ್ರಾಣ ಕಳೆದುಕೊಂಡಿದ್ದಾರೆ. ಒಂದೇ ವಾರದಲ್ಲಿ ಒಂದೇ ಕುಟುಂಬದ ಇಬ್ಬರು ಪ್ರಾಣ ಕಳೆದುಕೊಂಡಿದ್ದಾರೆ. ನಾವು ಹಲವಾರು ಬಾರಿ ಪ್ರತಿಭಟನೆ ಮಾಡಿದ್ದೇವೆ. ಮನವಿಗಳನ್ನೂ ಕೊಟ್ಟಿದ್ದೇವೆ. ಈಗಲಾದರೂ ಅಮಾಯಕರ ಪ್ರಾಣಗಳು ಹೋಗದಂತೆ ಅಗತ್ಯ ಕ್ರಮಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಮುದುಗುರ್ಕಿ ನಾರಾಯಣಸ್ವಾಮಿ ಮಾತನಾಡಿ, ಹೆದ್ದಾರಿಯನ್ನು ನಿರ್ಮಿಸುವಾಗಲೇ ನಾವು ವಿರೋಧ ವ್ಯಕ್ತಪಡಿಸಿದ್ದೇವು. ರಸ್ತೆಯ ಸಮೀಪದಲ್ಲಿನ ಹಳ್ಳಿಗಳ ಜನರು, ರಸ್ತೆ ದಾಟುವುದು ತುಂಬಾ ಕಷ್ಟವಾಗುತ್ತದೆ. ಸುರಕ್ಷತಾ ಕ್ರಮಗಳನ್ನು ಕೈಗೊಂಡ ನಂತರವೇ ರಸ್ತೆಯಲ್ಲಿ ಸಂಚಾರಕ್ಕೆ ಅವಕಾಶ ಕೊಡಿ ಎಂದು ಹೇಳಿದ್ದೆವು ಯಾರೂ ಕೇಳಲಿಲ್ಲ. ಪ್ರತಿ ಶನಿವಾರ ಚಿಕ್ಕಬಳ್ಳಾಪುರದ ಬಳಿಯಿರುವ ಈಶಾ ಫೌಂಡೇಷನ್ ಗೆ ಹೋಗುವುದಕ್ಕಾಗಿ ಬೆಂಗಳೂರು ಮುಂತಾದ ಕಡೆಗಳಿಂದ ಬರುವವರು, ಅತಿಯಾದ ವೇಗವಾಗಿ ವಾಹನಗಳು ಚಲಾಯಿಸುತ್ತಾರೆ. ಅವರಿಗೆ ಕಡಿವಾಣ ಹಾಕುವವರಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಮಾತನಾಡಿದ ಸಚಿವ ಕೆ.ಹೆಚ್.ಮುನಿಯಪ್ಪ ಅವರು, ರಾಷ್ಟ್ರೀಯ ಹೆದ್ದಾರಿಯ ಪಕ್ಕದಲ್ಲಿರುವ ಗ್ರಾಮಗಳ ಜನರಿಗೆ, ರಸ್ತೆ ದಾಟುವುದಕ್ಕೆ ಯಾವುದೇ ರೀತಿಯ ಸಮಸ್ಯೆ ಬಾರದಂತೆ ಅಗತ್ಯ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚನೆ ನೀಡಲಾಗುತ್ತದೆ. ಸ್ಕೈವಾಕ್ ನಿರ್ಮಾಣ ಮಾಡುವಂತೆಯೂ ಸೂಚನೆ ನೀಡಲಾಗಿದೆ.

ರಸ್ತೆಗೆ ಹಾಕುವ ದಪ್ಪ ಪೈಂಟಿನಿಂದ ರೋಡ್ ಹಮ್ಸ್ ನಿರ್ಮಿಸಿ, ವೇಗವಾಗಿ ಬರುವ ವಾಹನಗಳನ್ನು ನಿಧಾನಗತಿಯಲ್ಲಿ ಸಾಗುವಂತೆ ಕ್ರಮ ಕೈಗೊಳ್ಳುವ ಬಗ್ಗೆ, ರಾಷ್ಟ್ರೀಯ ಹೆದ್ದಾರಿ ಅಧಿಕಾರಿ ಜಯಕುಮಾರ್ ಅವರಿಗೆ ಸೂಚನೆ ನೀಡಿದರು.

ತಹಶೀಲ್ದಾರ್ ಅನಿಲ್ ಕುಮಾರ್, ಮುದುಗುರ್ಕಿ ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ಮಾರಪ್ಪ, ಮೋಹನ್ ಬಾಬು, ಸೇರಿದಂತೆ ಗ್ರಾಮಸ್ಥರು ಹಾಜರಿದ್ದರು.

# ಸರಕಾರಿ ಕಾಲೇಜಿಗೆ, ವಿದ್ಯಾರ್ಥಿಗಳನ್ನು ದಾಖಲು ಮಾಡುವಂತೆ ಮನವಿ

ಬೆಂಗಳೂರು

ಪಟ್ಟಣದ ಸರಕಾರಿ ಪದವಿ ಪೂರ್ವ ಕಾಲೇಜಿನಲ್ಲಿ, 2026-27ನೇ ಸಾಲಿಗೆ ದಾಖಲಾತಿಗಳು ಆರಂಭವಾಗಿದ್ದು, ಸಾರ್ವಜನಿಕರು ಈ ಅವಕಾಶವನ್ನು ಸದುಪಯೋಗ ಮಾಡಿಕೊಳ್ಳಬೇಕು ಎಂದು ಪ್ರಾಂಶುಪಾಲ ಬೈರೇಗೌಡ ಮನವಿ ಮಾಡಿದ್ದಾರೆ.

ಈ ಕುರಿತು, ಪತ್ರಿಕಾ ಹೇಳಿಕೆ ನೀಡಿರುವ ಅವರು, ಕಾಲೇಜಿನಲ್ಲಿ ವಿಷಯವಾರು ನುರಿತ ಉಪನ್ಯಾಸಕರಿದ್ದಾರೆ. ಉತ್ತಮ ಫಲಿತಾಂಶ ಬಂದಿದೆ. ಉತ್ತಮ ಕೊಠಡಿಗಳು, ವಿಜ್ಞಾನ ಪ್ರಯೋಗಾಲಯ, ಸುಸಜ್ಜಿತವಾದ ಶೌಚಾಲಯಗಳ ವ್ಯವಸ್ಥೆ, ಹೆಣ್ಣು ಮಕ್ಕಳ ಸುರಕ್ಷತೆಗಾಗಿ, ಪ್ರತಿಯೊಂದು ಕೊಠಡಿಗಳಲ್ಲಿ ಸಿ.ಸಿ.ಕ್ಯಾಮಾರಗಳ ಅಳವಡಿಕೆ ಮಾಡಲಾಗಿದೆ. ಗ್ರಂಥಾಲಯ ಮತ್ತು ವಾಚನಾಲಯವಿದೆ. ಮೌಲ್ಯಾಧಾರಿತ ಶಿಕ್ಷಣಕ್ಕೆ ಆಧ್ಯತೆ, ವಿಶಾಲವಾದ ಆಟದ ಮೈದಾನ, ಬುಕ್ ಬ್ಯಾಂಕ್ ಇದೆ. ಉಚಿತ ಪಠ್ಯಪುಸ್ತಕಗಳ ವಿತರಣೆ,

ವಿದ್ಯಾರ್ಥಿ ವೇತನಕ್ಕೆ ಆಧ್ಯತೆ, ಹೆಣ್ಣು ಮಕ್ಕಳಿಗೆ ವಿಶೇಷ ವಿದ್ಯಾರ್ಥಿ ವೇತನ, 30 ವಿದ್ಯಾರ್ಥಿನಿಯರಿಗೆ ತಲಾ 10 ಸಾವಿರ ವಿದ್ಯಾರ್ಥಿ ವೇತನ, ವ್ಯಕ್ತಿತ್ವ ವಿಕಸನಕ್ಕೆ ಆಧ್ಯತೆ, ಉತ್ತಮ ಅಂಕಗಳು ಗಳಿಸಿಕೊಂಡ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಕರ ಬಹುಮಾನ, ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಸರಕಾರದಿಂದ ಉಚಿತ ಲ್ಯಾಪ್ ಟಾಪ್ ವಿತರಣೆ, ಎನ್.ಎಸ್.ಎಸ್.ಕ್ಲಬ್, ಹಾಗೂ ವಿಜ್ಞಾನ ವಿಭಾಗ, ವಾಣಿಜ್ಯವಿಭಾಗ,ಕಲಾವಿಭಾಗದ ಕೋರ್ಸ್ ಗಳು ಲಭ್ಯವಿದೆ. ಡೊನೇಷನ್ ಇಲ್ಲ. ಸರಕಾರಿ ಶುಲ್ಕ ಮಾತ್ರ ಪಾವತಿಸಬಹುದು ಎಂದು ತಿಳಿಸಿದ್ದಾರೆ.

# ವಜ್ರ ವಿಸ್ತಾರ ಹವಾನಿಯಂತ್ರಿತ ಸಾರಿಗೆ ವಿಸ್ತರಣೆ

ಬೆಂಗಳೂರು

ಕೆಂಪೇಗೌಡ ಬಸ್ ನಿಲ್ದಾಣದಿಂದ ರಾಮನಗರಕ್ಕೆ ಈಗಾಗಲೇ ಸಂಚರಿಸುತ್ತಿರುವ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ವಜ್ರ ವಿಸ್ತಾರ ಹವಾನಿಯಂತ್ರಿತ ಸಾರಿಗೆಗಳನ್ನು ಸಾರ್ವಜನಿಕರ ಬೇಡಿಕೆಗೆ ಅನುಗುಣವಾಗಿ ಚನ್ನಪಟ್ಟಣದವರೆಗೆ ವಿಸ್ತರಿಸಲಾಗಿದೆ ಎಂದು ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಸಿ.ಪಿ. ಯೋಗೇಶ್ವರ್ ಅವರು ತಿಳಿಸಿದರು.

ಅವರು ಮೇ 8ರ ಶುಕ್ರವಾರ ಚನ್ನಪಟ್ಟಣ ಬಸ್ ನಿಲ್ದಾಣದಲ್ಲಿ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ವತಿಯಿಂದ ಕೆಂಪೇಗೌಡ ಬಸ್ ನಿಲ್ದಾಣ-ರಾಮನಗರಕ್ಕೆ ಸಂಚರಿಸುತ್ತಿದ್ದ ವಜ್ರ ವಿಸ್ತಾರ ಹವಾನಿಯಂತ್ರಿತ ಸಾರಿಗೆ ಸೇವೆಯನ್ನು ಚನ್ನಪಟ್ಟಣದವರೆಗೆ ವಿಸ್ತರಿಸಿದ ಮಾರ್ಗಗಳನ್ನು ಉದ್ಘಾಟಿಸಿ ಮಾತನಾಡಿದರು.



ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ಬೆಂಗಳೂರು ನಗರ ಹಾಗೂ ಹೊರವಲಯದ ಸಾರ್ವಜನಿಕ ಪ್ರಯಾಣಿಕರಿಗೆ ಉತ್ತಮ ಗುಣಮಟ್ಟದ ಸಾರಿಗೆ ಸೌಲಭ್ಯವನ್ನು ಕಲ್ಪಿಸುತ್ತಿದೆ. ಈ ಗುಣಮಟ್ಟವನ್ನು ಮತ್ತಷ್ಟು ಉತ್ಕೃಷ್ಟಗೊಳಿಸುವ ಸಲುವಾಗಿ ನಿರಂತರ ಶ್ರಮಿಸುತ್ತಿದೆ. ಈ ನಿಟ್ಟಿನಲ್ಲಿ 50 ಘಟಕಗಳಿಂದ ವಿವಿಧ ಮಾದರಿಯ ಬಸ್ಸುಗಳಲ್ಲಿ ಪ್ರತಿದಿನ 6,275 ಅನುಸೂಚಿಗಳಿಂದ 65,952 ಸುತ್ತುವಳಿಗಳನ್ನು 13.06 ಲಕ್ಷ ಕಿ.ಮೀ ಗಳಲ್ಲಿ ಸಾರಿಗೆ ಸೌಲಭ್ಯವನ್ನು ಒದಗಿಸುತ್ತಿದ್ದು, ಸರಾಸರಿ 45 ಲಕ್ಷ ಪ್ರಯಾಣಿಕರು ಸಂಸ್ಥೆಯ ಸಾರಿಗೆ ಸೌಲಭ್ಯವನ್ನು ಪಡೆದುಕೊಳ್ಳುತ್ತಿದ್ದಾರೆ. ಈ ಅನುಸೂಚಿಗಳಲ್ಲಿ 1,757 ಎಲೆಕ್ಟ್ರಿಕ್ ಬಸ್ಸುಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ ಎಂದರು.

ಈ ಸಂದರ್ಭದಲ್ಲಿ ಬಮೂಲ್ ಅಧ್ಯಕ್ಷರಾದ ಡಿ.ಕೆ. ಸುರೇಶ್, ಚನ್ನಪಟ್ಟಣ ನಗರಸಭೆ ಅಧ್ಯಕ್ಷರಾದ ನಾಗೇಶ್, ಚನ್ನಪಟ್ಟಣ ತಾಲ್ಲೂಕು ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷರಾದ ರಂಗನಾಥ್, ಸಾರಿಗೆ ಅಧಿಕಾರಿ ಪುರುಷೋತ್ತಮ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ‘ಭ್ರಷ್ಟ ಅಧಿಕಾರಿಗಳ ರಕ್ಷಣೆಯೇ ಕಾಂಗ್ರೆಸ್ ಸರ್ಕಾರಕ್ಕೆ ಮುಖ್ಯವಾಯಿತೇ’

ಬೆಂಗಳೂರು

ಲೈಂಗಿಕ ಹಗರಣದ ವಿಡಿಯೋ ಅಸಲಿ ಎಂದು ವರದಿ ಬಂದಿದ್ದರೂ, ಕಾಮುಕ ಅಧಿಕಾರಿಯನ್ನು ರಕ್ಷಿಸುತ್ತಿರುವ ಕಾಂಗ್ರೆಸ್ ಸರ್ಕಾರಕ್ಕೆ ನ್ಯಾಯದ ಮೇಲೆ ನಂಬಿಕೆ ಇಲ್ಲದಂತಾಗಿದೆ. ಪೊಲೀಸ್ ಮಹಾನಿರ್ದೇಶಕ ಶ್ರೇಣಿಯ ಅಧಿಕಾರಿಯೊಬ್ಬರ ಮೇಲೆ ಲೈಂಗಿಕ ದೌರ್ಜನ್ಯದ ಆರೋಪ ಕೇಳಿಬಂದಾಗ, ಅದನ್ನು ಗಂಭೀರವಾಗಿ ಪರಿಗಣಿಸಬೇಕಾದ ರಾಜ್ಯ ಸರ್ಕಾರ, ಅವರ ಅಮಾನತು ಆದೇಶವನ್ನೇ ಹಿಂಪಡೆದು ರೆಡ್ ಕಾರ್ಪೆಟ್ ಸ್ವಾಗತ ನೀಡಿದೆ ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕ್ ಆರೋಪಿಸಿದ್ದಾರೆ.

ನಿಮ್ಮ ಸರ್ಕಾರದ ಈ ನಡೆಯ ಹಿಂದಿನ ಮರ್ಮವೇನು? ಸಾಕ್ಷಿ ಇದ್ದರೂ ಸಲಾಮು ಹೊಡೆಯುತಿರುವುದೇಕೆ? ವಿಡಿಯೋ ಅಸಲಿ ಎಂದು ತಮ್ಮ ಸರ್ಕಾರವೇ ನೇಮಿಸಿದ ಸಮಿತಿ ವರದಿ ನೀಡಿದ ಮೇಲೂ ಆರೋಪಿತ ಅಧಿಕಾರಿಗೆ ಕ್ಲೀನ್ ಚಿಟ್ ಕೊಡುವ ಧಾವಂತವೇಕೆ? ಕಾನೂನಿಗಿಂತ ವ್ಯಕ್ತಿ ದೊಡ್ಡವರೇ? ನಿವೃತ್ತಿಯ ಹೊಸ್ತಿಲಲ್ಲಿರುವ ಅಧಿಕಾರಿಗೆ ಇಷ್ಟು ಆತುರವಾಗಿ 'ರಿಲೀಫ್' ನೀಡುವ ಮೂಲಕ ನೀವು ಸಂತ್ರಸ್ತ ಮಹಿಳೆಯರಿಗೆ ಯಾವ ಸಂದೇಶ ನೀಡುತ್ತಿದ್ದೀರಿ ಎಂದರು.

# ಜೆಡಿಎಸ್‌ನ ಜೆಪಿಎಲ್ ಪೋಸ್ಟರ್ ಬಿಡುಗಡೆ

ಬೆಂಗಳೂರು

ಜಾತ್ಯತೀತ ಜನತಾದಳದ ಬೆಳ್ಳಿಹಬ್ಬ ಹಾಗೂ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರ ಹುಟ್ಟುಹಬ್ಬದ ಅಂಗವಾಗಿ ಜೆಡಿಎಸ್ ರಾಜ್ಯ ಯುವ ಜನತಾದಳ ಹಾಗೂ ಸಾಮಾಜಿಕ ಜಾಲತಾಣ ಈ ತಿಂಗಳ 15ರಿಂದ 3 ದಿನಗಳ ಕಾಲ ಬೆಂಗಳೂರಿನಲ್ಲಿ ಜೆಪಿಎಲ್(ಜನತಾ ಪ್ರೀಮಿರ್ ಲೀಗ್) ಕ್ರಿಕೆಟ್ ಪಂದ್ಯಾವಳಿ ಆಯೋಜಿಸಿದೆ.

ಶನಿವಾರ ನಗರದ ಜಿಲ್ಲಾ ಜೆಡಿಎಸ್ ಕಚೇರಿಯಲ್ಲಿ ಪಕ್ಷದ ಜಿಲ್ಲಾದ್ಯಕ್ಷ ಹೆಚ್.



ನಿಂಗಪ್ಪ ಅವರು ಪಂದ್ಯಾವಳಿಯ ಪೋಸ್ಟರ್ ಬಿಡುಗಡೆ ಮಾಡಿದರು.

ಈ ವೇಳೆ ಮಾತನಾಡಿದ ಹೆಚ್.ನಿಂಗಪ್ಪ, ಪಕ್ಷದ ಬೆಳ್ಳಿ ಹಬ್ಬದ ಸಂಭ್ರಮ ಹಾಗೂ ವರಿಷ್ಠರಾದ ದೇವೇಗೌಡರ ಜನ್ಮದಿನ ಆಚರಣೆ ಗೌರವಾರ್ಥ ಏರ್ಪಡಿಸಿರುವ ಜೆಪಿಎಲ್ ಕ್ರಿಕೆಟ್ ಪಂದ್ಯಾವಳಿ ಯುವಕರಲ್ಲಿ ಉತ್ಸಾಹ ತುಂಬಿ ಪಕ್ಷ ಸಂಘಟನೆಗೆ ಸಹಾಯವಾಗುತ್ತದೆ. ಜಿಲ್ಲೆಯ ಕಲ್ಪತರುನಾಡು ಕ್ರಿಕೆಟರ್ಸ್ ತಂಡ ಟೂರ್ನಿಯಲ್ಲಿ ಭಾಗವಹಿಸುತ್ತಿದ್ದು, ತಂಡ ಜಯಗಳಿಸಲಿ ಎಂದು ಶುಭ ಕೋರಿದರು.

ಜಿಲ್ಲಾ ಜೆಡಿಎಸ್ ಕಾರ್ಯಾಧ್ಯಕ್ಷ ಟಿ.ಆರ್. ನಾಗರಾಜು, ರಾಜ್ಯ ಎಸ್.ಟಿ. ಘಟಕ ಉಪಾಧ್ಯಕ್ಷ ಸೋಲಾರ್ ಕೃಷ್ಣಮೂರ್ತಿ, ನಗರ ಅಧ್ಯಕ್ಷ ಟಿ.ಹೆಚ್. ಜಯರಾಮ್, ನಗರಸಭೆ ಮಾಜಿ ಸದಸ್ಯರಾದ ಟಿ.ಜಿ. ನರಸಿಂಹರಾಜು, ಮೋಹನ್‌ಕುಮಾರ್, ಸಾಮಾಜಿಕ ಜಾಲತಾಣದ ರಾಜ್ಯ ಉಪಾಧ್ಯಕ್ಷರಾದ ಮಂಜುನಾಥ್, ರಾಧಾ ಎಲ್.ಗೌಡ, ಹರ್ಷ ದಳಪತಿ, ಹರೀಶ್‌ಗೌಡ, ದಿವಾಕರ್, ಪ್ರತಾಪ್, ಲಕ್ಷ್ಮೀನರಸಿಂಹ ಮೊದಲಾದವರು ಭಾಗವಹಿಸಿದ್ದರು.

# ನೀರನ್ನು ಮಿತವಾಗಿ ಬಳಸಿ: ಪಿಡಿಓ ವಸಂತ್‌ಕುಮಾರ್ ಕರೆ

ಬೆಂಗಳೂರು

ಹೋಬಳಿಯ ಆಲಂಬಾಡಿ ಜೋತೇನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಜುಂಜುನಹಳ್ಳಿ ಗ್ರಾಮದಲ್ಲಿ ಆಯೋಜಿಸಿದ್ದ ಕುಡಿಯುವ ನೀರಿನ ಅದಾಲತ್ ಕಾರ್ಯಕ್ರಮದಲ್ಲಿ ವಸಂತ್ ಕುಮಾರ್ ಜನರಿಗೆ ನೀರಿನ ಸಂರಕ್ಷಣೆ ಕುರಿತು ಜಾಗೃತಿ ಮೂಡಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, "ಹಣ ಮತ್ತು ಆಸ್ತಿಯನ್ನು ಮುಂದಿನ ಪೀಳಿಗೆಗಾಗಿ ಉಳಿಸುತ್ತೇವೆ. ಆದರೆ ಅದಕ್ಕಿಂತ ಮುಖ್ಯವಾಗಿ ನೀರು ಮತ್ತು ಪ್ರಕೃತಿ ಸಂಪತ್ತನ್ನು ಉಳಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ" ಎಂದು ಹೇಳಿದರು.

"ಗಿಡಗಳನ್ನು ನೆಟ್ಟು ಅವುಗಳನ್ನು ಮರಗಳನ್ನಾಗಿ ಬೆಳೆಸುವ ಅಭ್ಯಾಸವನ್ನು ಪ್ರತಿಯೊಬ್ಬರೂ ರೂಢಿಸಿಕೊಳ್ಳಬೇಕು. ನೀರು ಜೀವನದಲ್ಲಿ ಅತ್ಯಮೂಲ್ಯವಾದ ಸಂಪತ್ತು. ಸರ್ಕಾರದ ನಿಯಮದಂತೆ ಪ್ರತಿಯೊಬ್ಬ




ವ್ಯಕ್ತಿಯೂ ದಿನಕ್ಕೆ 55 ಲೀಟರ್ ನೀರನ್ನು ಮಾತ್ರ ಬಳಕೆ ಮಾಡಬೇಕು. ಆದ್ದರಿಂದ ನೀರನ್ನು ಮಿತವಾಗಿ ಬಳಸಿ" ಎಂದು ಮನವಿ ಮಾಡಿದರು.

ನೀರಿನ ಸಮಸ್ಯೆ ಕಂಡುಬಂದಲ್ಲಿ ಪಂಚಾಯಿತಿ ಸಹಾಯವಾಣಿಗೆ ಕರೆ ಮಾಡಿ ಮಾಹಿತಿ ನೀಡಬಹುದು. ತಕ್ಷಣ ಸ್ಪಂದಿಸಿ ನೀರು ಪೂರೈಸುವ ವ್ಯವಸ್ಥೆ ಮಾಡಲಾಗುವುದು ಎಂದು ತಿಳಿಸಿದರು.

"ಒಂದು ಕಾಲದಲ್ಲಿ ಕೆರೆ ಹಾಗೂ ಕಾಲುವೆಗಳಲ್ಲಿ ನೀರು ಹರಿಯುವುದನ್ನು ನೋಡುತ್ತಿದ್ದೆವು. ಆದರೆ ಈಗ ನೀರಿನ ಮಟ್ಟ ಕಡಿಮೆಯಾಗುತ್ತಿದೆ. ಹೀಗಾಗಿ ನೀರಿನ ಮೌಲ್ಯ ಅರಿತು ಮುಂದಿನ ಪೀಳಿಗೆಗಾಗಿ ಸಂರಕ್ಷಿಸುವ ಕೆಲಸ ಮಾಡಬೇಕು" ಎಂದು ಹೇಳಿದರು.

ಗ್ರಾಮಗಳ ಸ್ವಚ್ಛತೆಗೂ ಆದ್ಯತೆ ನೀಡಬೇಕು ಎಂದು ಕರೆ ನೀಡಿದ ಅವರು, "ಪ್ರತಿಯೊಬ್ಬರೂ ತಮ್ಮ ಮನೆಗಳ ಸುತ್ತಮುತ್ತ ಸ್ವಚ್ಛತೆ ಕಾಪಾಡಿಕೊಂಡರೆ ಗ್ರಾಮವೇ ಸ್ವಚ್ಛವಾಗುತ್ತದೆ" ಎಂದರು.

ಜಲ ಜೀವನ್ ಮಿಷನ್ ಯೋಜನೆಯಡಿ ಪ್ರತಿಯೊಂದು ಮನೆಗೂ ನೀರು ಪೂರೈಸುವ ಕೆಲಸ ನಡೆಯುತ್ತಿದ್ದು, ನೀರಿನ ಮೀಟರ್‌ಗಳನ್ನೂ ಅಳವಡಿಸಲಾಗುತ್ತಿದೆ. ಆದರೆ ಕೆಲವರು ಮೀಟರ್ ತೆಗೆದು ನೇರ ಸಂಪರ್ಕ ಪಡೆಯುತ್ತಿರುವುದು ಗಮನಕ್ಕೆ ಬಂದಿದೆ. ಇದು ಅಕ್ರಮವಾಗಿದ್ದು, ಸಂಬಂಧಿಸಿದ ಇಲಾಖೆ ದಂಡ ವಿಧಿಸುವ ಸಾಧ್ಯತೆ ಇದೆ. ಇಂತಹ ಕ್ರಮಗಳನ್ನು ಕೈಗೊಳ್ಳಬಾರದು ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಕರ ವಸೂಲಿಗಾರ ನಾರಾಯಣಸ್ವಾಮಿ ಅಂಬರೀಶ್, ಗ್ರಾಮದ ಮುಖಂಡರಾದ ರಾಮಕೃಷ್ಣಪ್ಪ, ಮುನಿಕೃಷ್ಣಪ್ಪ, ರಸಪ್ಪ, ಗಂಗಪ್ಪ ಕೃಷ್ಣಪ್ಪ ಸೇರಿದಂತೆ ಹಲವರು ಉಪಸ್ಥಿತರಿದ್ದರು.

12/05/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಚಕ್ರವ್ಯೂಹ ಪೌರಾಣಿಕ ಯಕ್ಷಗಾನ ಪ್ರದರ್ಶನ



ಬೆಂಗಳೂರು

ನಗರದ ಕೆ.ಆರ್. ಬಡಾವಣೆಯಲ್ಲಿರುವ ಬಯಲು ರಂಗಮಂದಿರದಲ್ಲಿ ಕ್ಲಾಸಿ ದೀವಾಸ್ ಡ್ಯಾನ್ಸ್ ಅಕಾಡೆಮಿ ತಿಪಟೂರು ಮತ್ತು ಯಕ್ಷಭೂಮಿ (ರಿ) ಯಕ್ಷಗಾನ ಅಧ್ಯಯನ ಕೇಂದ್ರ ತೀರ್ಥಹಳ್ಳಿ ಇವರ ಸಹಯೋಗದಲ್ಲಿ ಗುರು ಶೈಲೇಶ್ ನಿರ್ದೇಶನದಲ್ಲಿ ಚಕ್ರವ್ಯೂಹ (ವೀರ ಅಭಿಮನ್ಯು) ಪೌರಾಣಿಕ ಯಕ್ಷಗಾನ ಕಥಾ ಭಾಗದ ಪ್ರದರ್ಶನದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ವೈದ್ಯ ಡಾ.ಜಿ.ಎಸ್.ಶ್ರೀಧರ್ ರವರು, ಇತ್ತೀಚಿನ ದಿನಗಳಲ್ಲಿ ಮೊಬೈಲ್ ಬಳಕೆಯಿಂದ ನಾಟಕ, ರಂಗಭೂಮಿ ಮತ್ತು ಯಕ್ಷಗಾನ ಸೇರಿದಂತೆ ಇನ್ನುಳಿದ ಜಾನಪದ ಕಲಾತಂಡಗಳ ಮೆರಗುಗಳು ಮತ್ತು ಪ್ರದರ್ಶನಗಳು ನಶಿಸಿ ಹೋಗುತ್ತಿದ್ದು, ಕಲ್ಪತರು ನಾಡು ತನ್ನದೇ ಆದ ಚಟುವಟಿಕೆಗಳಿಂದ ನಾಟಕ ಮತ್ತು ರಂಗಭೂಮಿಯ ಚಟುವಟಿಕೆಗಳು ನಿರಂತರ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದರ ಮೂಲಕ ತಾಲೂಕಿನಲ್ಲಿ ಸಂಘ-ಸಂಸ್ಥೆಗಳು ಹಮ್ಮಿಕೊಂಡು,ಇಂದಿನ ಯುವ ಸಮೂಹಕ್ಕೆ ರಂಗಭೂಮಿ ಮತ್ತು ಯಕ್ಷಗಾನಗಳ ಮಹತ್ವವನ್ನು ತಿಳಿಸಿ, ಪ್ರದರ್ಶಿಸುವುದರ ಮೂಲಕ ಕಲೆಯನ್ನು ಹಾಗೂ ಕಲಾಭಿಮಾನಿಗಳನ್ನು ಕಲಾಸಕ್ತರು ಉಳಿಸಿ,ಬೆಳೆಸುವ ನಿಟ್ಟಿನಲ್ಲಿ ಆಯೋಜಿಸುತ್ತಿದ್ದಾರೆ. ಸಾರ್ವಜನಿಕರು, ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ರಂಗಭೂಮಿ ಮತ್ತು ಯಕ್ಷಗಾನ ಸೇರಿದಂತೆ ಗ್ರಾಮಾಂತರ ಸೊಗಡಿನ ಜಾನಪದ ಚಟುವಟಿಕೆಗಳನ್ನು ಉಳಿಸುವಲ್ಲಿ ಕಾರ್ಯಪ್ರವೃತ್ತರಾಗಬೇಕೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕ್ಲಾಸಿ ದೀವಾಸ್ ಡ್ಯಾನ್ಸ್ ಅಕಾಡೆಮಿಯ ಡಾ.ಎ.ಎಸ್.ದೀಪ,ಕಸಾಪ ಅಧ್ಯಕ್ಷ ಬಸವರಾಜು ಮತ್ತು ನಿವೃತ್ತ ಎಸ್. ಬಿ.ಐ.ಬ್ಯಾಂಕ್ ವ್ಯವಸ್ಥಾಪಕ ಸಿದ್ಧನಾಯಕ್ ಸೇರಿದಂತೆ ಮುಖಂಡರುಗಳು, ಯಕ್ಷಗಾನ ಅಧ್ಯಯನ ಕೇಂದ್ರದ ಪದಾಧಿಕಾರಿಗಳು ಮತ್ತು ಅಕಾಡೆಮಿಯ ವಿದ್ಯಾರ್ಥಿಗಳು ಹಾಜರಿದ್ದರು.

# ‘ಒತ್ತಡ ಕಡಿಮೆ ಮಾಡಿಕೊಳ್ಳಲು ಕಲೆ ಸಹಕಾರಿ’

ಬೆಂಗಳೂರು

ಕಲ್ಪತರು ತಾಂತ್ರಿಕ ಮಹಾವಿದ್ಯಾಲಯ ವತಿಯಿಂದ ಆಯೋಜಿಸಲಾದ ವಾರ್ಷಿಕ ಸಾಂಸ್ಕೃತಿಕ ಉತ್ಸವ “ಕಲ್ಪೋತ್ಸವ-2026” ಕಾರ್ಯಕ್ರಮವು ಕಾಲೇಜು ಆವರಣದಲ್ಲಿ ಸಂಭ್ರಮ ಮತ್ತು ಸಡಗರದ ನಡುವೆ ಉದ್ಘಾಟನೆಯಾಯಿತು.

ಖ್ಯಾತ ಕನ್ನಡ ಲೇಖಕಿ ಹಾಗೂ ಪತ್ರಕರ್ತೆ ಸಂಧ್ಯಾರಾಣಿ ಎನ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, “ಕಲೆ ಪ್ರತಿಯೊಬ್ಬರ ಜೀವನದಲ್ಲೂ ಅಗತ್ಯವಾದ ಅಭಿವ್ಯಕ್ತಿ ಮಾಧ್ಯಮವಾಗಿದೆ. ವಿಶೇಷವಾಗಿ ಇಂಜಿನಿಯರಿಂಗ್ ವಿದ್ಯಾರ್ಥಿಗಳಲ್ಲಿ ಓದಿನ ಒತ್ತಡವನ್ನು ಕಡಿಮೆ ಮಾಡಲು ಕಲೆ ಮಹತ್ವದ ಪಾತ್ರವಹಿಸುತ್ತದೆ” ಎಂದು ಹೇಳಿದರು.

“ಕಲೆಗೆ ಲಾಜಿಕ್ ಅವಶ್ಯಕತೆಯಿಲ್ಲ. ಆದರೆ ಅದು ಲ್ಯಾಟರಲ್ ಥಿಂಕಿಂಗ್‌ನಂತಹ ಕೌಶಲ್ಯಗಳನ್ನು ಬೆಳೆಸಲು ನೆರವಾಗುತ್ತದೆ. ಆತ್ಮವಿಶ್ವಾಸದ ಕೊರತೆಯಿರುವವರು ಕಲಾ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು. ಇದರಿಂದ ವೇದಿಕೆ ಭಯ ದೂರವಾಗಿ ಆತ್ಮವಿಶ್ವಾಸ ಹೆಚ್ಚುತ್ತದೆ” ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಕುವೆಂಪು ಹಾಗೂ ಡಾ. ರಾಜ್‌ಕುಮಾರ್ ಅವರನ್ನು ಉಲ್ಲೇಖಿಸಿದ ಅವರು, “ಕುವೆಂಪು ವಿದ್ಯಾವಂತರಿಗೆ ದಾರಿದೀಪವಾದರೆ, ಡಾ. ರಾಜ್‌ಕುಮಾರ್ ಓದು ಬರಹವಿಲ್ಲದವರಿಗೂ ದಾರಿದೀಪವಾಗಿದ್ದರು. ಇದು ಕಲೆಯ ಶಕ್ತಿ” ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ತಿಪಟೂರು ಸಾರ್ವಜನಿಕ ಆಸ್ಪತ್ರೆಯ ವೈದ್ಯಾಧಿಕಾರಿ ಡಾ. ರಕ್ಷಿತ್‌ಗೌಡ ಮಾತನಾಡಿ, “ಈ ಕಾರ್ಯಕ್ರಮ ನನ್ನ ಕಾಲೇಜು ದಿನಗಳನ್ನು ನೆನಪಿಸಿತು. ವಿದ್ಯಾರ್ಥಿಗಳು ಓದಿನ ಒತ್ತಡದ ನಡುವೆ ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು” ಎಂದು ಹೇಳಿದರು.

“ಪ್ರತಿದಿನ ಒಂದು ಗಂಟೆ ವ್ಯಾಯಾಮ, ಎಂಟು ಗಂಟೆ ನಿದ್ರೆ ಹಾಗೂ ಶಿಸ್ತುಬದ್ಧ ಜೀವನಶೈಲಿ ಅತ್ಯಗತ್ಯ. ಗುರುಗಳು ಮತ್ತು ತಂದೆ-ತಾಯಿಗಳನ್ನು ಸದಾ ಗೌರವಿಸಬೇಕು. ಜೀವನದಲ್ಲಿ ಹಣಕ್ಕಿಂತ ಮನಃಸಂತೋಷ ಮುಖ್ಯ” ಎಂದು ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕೆವಿಎಸ್ ಉಪಾಧ್ಯಕ್ಷ ಬಾಗೇಪಲ್ಲಿ ನಟರಾಜು ಮಾತನಾಡಿ, “ನಮ್ಮ ಕಾಲೇಜಿನ ವಿದ್ಯಾರ್ಥಿಗಳು ವಿವಿಧ ಕ್ಷೇತ್ರಗಳಲ್ಲಿ ಉನ್ನತ ಸ್ಥಾನಕ್ಕೇರಿದ್ದಾರೆ. ವಿದ್ಯಾರ್ಥಿಗಳು ಓದಿನ ಜೊತೆಗೆ ತಮ್ಮ ಕಲಾ ಪ್ರತಿಭೆಯನ್ನು ಇಂತಹ ವೇದಿಕೆಗಳ ಮೂಲಕ ಪ್ರದರ್ಶಿಸಬೇಕು” ಎಂದು ಹೇಳಿದರು.

ಕಾಲೇಜಿನ ಪ್ರಾಂಶುಪಾಲ ಡಾ. ಹೆಚ್.ಸಿ. ಸತೀಶ್‌ಕುಮಾರ್ ಮಾತನಾಡಿ, ಪಠ್ಯ ಚಟುವಟಿಕೆಗಳ ಜೊತೆಗೆ ಪಠ್ಯೇತರ ಚಟುವಟಿಕೆಗಳಿಗೂ ಸಮಾನ ಮಹತ್ವವಿದೆ ಎಂದರು.

ಈ ಸಂದರ್ಭದಲ್ಲಿ ಕೆವಿಎಸ್ ಅಧ್ಯಕ್ಷ ಪಿ.ಕೆ. ತಿಪ್ಪೇರುದ್ರಪ್ಪ, ಉಪಾಧ್ಯಕ್ಷರಾದ ಜಿ.ಪಿ. ದೀಪಕ್, ಬಿ.ಎಸ್. ಉಮೇಶ್, ಟಿ.ಎಸ್. ಬಸವರಾಜು, ಕಾರ್ಯದರ್ಶಿಗಳಾದ ಜಿ.ಎಸ್. ಉಮಾಶಂಕರ್, ಎಂ.ಆರ್. ಸಂಗಮೇಶ್, ಸುಧಾಕರ್ ಹೆಚ್.ಜಿ., ಟಿ.ಯು. ಜಗದೀಶಮೂರ್ತಿ ಹಾಗೂ ಖಜಾಂಚಿ ಟಿ.ಎಸ್. ಶಿವಪ್ರಸಾದ್ ಉಪಸ್ಥಿತರಿದ್ದು ವಿದ್ಯಾರ್ಥಿಗಳಿಗೆ ಶುಭ ಹಾರೈಸಿದರು.

# ‘ಸಮಾಜದಲ್ಲಿ ಶಿಕ್ಷಕರ ಪಾತ್ರ ಅತ್ಯಂತ ಮಹತ್ವದ್ದು’

ಬೆಂಗಳೂರು

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ವತಿಯಿಂದ ಇತ್ತೀಚೆಗೆ ನಡೆದ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ನಿರ್ದೇಶಕರ ಚುನಾವಣೆಯಲ್ಲಿ ಸಹಕಾರ ನೀಡಿದ ಸಮಾಜ ಸೇವಕರು ಹಾಗೂ ಜೆಡಿಎಸ್ ಮುಖಂಡರಾದ ಬಿ.ವಿ. ಶಿವಾರೆಡ್ಡಿ ಅವರಿಗೆ ಅಭಿನಂದನ ಸಮಾರಂಭವನ್ನು ಹಮ್ಮಿಕೊಳ್ಳಲಾಯಿತು.



ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಸಮಾಜ ಸೇವಕ ಹಾಗೂ ಜೆಡಿಎಸ್ ಮುಖಂಡ ಬಿ.ವಿ.ಶಿವಾರೆಡ್ಡಿ ಅವರು, ಸಮಾಜದಲ್ಲಿ ಶಿಕ್ಷಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಹೇಳಿದರು. ವಿದ್ಯಾರ್ಥಿಗಳಿಗೆ ಕೇವಲ ಪಾಠ್ಯಭ್ಯಾಸವಷ್ಟೇ ಅಲ್ಲದೆ ಶಿಸ್ತು, ಸಂಸ್ಕಾರ ಹಾಗೂ ಉತ್ತಮ ನಾಗರಿಕತ್ವದ ಮೌಲ್ಯಗಳನ್ನು ಬೆಳೆಸುವಲ್ಲಿ ಶಿಕ್ಷಕರು ಪ್ರಮುಖ ಪಾತ್ರ ವಹಿಸುತ್ತಾರೆ ಎಂದು ಅವರು ಅಭಿಪ್ರಾಯಪಟ್ಟರು.

ಶಿಕ್ಷಕರು ಸಮಾಜದ ನಿಜವಾದ ಶಿಲ್ಪಿಗಳು ಎಂದು ಹೇಳಿದ ಅವರು, ಅವರ ಪರಿಶ್ರಮದಿಂದಲೇ ವಿದ್ಯಾರ್ಥಿಗಳು ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಸಾಧ್ಯವಾಗುತ್ತದೆ. ಇಂದಿನ ಯುವಜನತೆ ಸರಿಯಾದ ದಾರಿಯಲ್ಲಿ ಸಾಗಲು ಶಿಕ್ಷಕರ ಮಾರ್ಗದರ್ಶನ ಅತ್ಯಗತ್ಯವಾಗಿದೆ ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ನೌಕರರ ಸಂಘದ ಪ್ರಧಾನ ಕಾರ್ಯದರ್ಶಿ ಕಾಳಚಾರಿ, ಮಾವು ಬೆಳೆಗಾರರ ಜಿಲ್ಲಾ ಅಧ್ಯಕ್ಷ ಚಿನ್ನಪ್ಪರೆಡ್ಡಿ, ಒಕ್ಕಲಿಗರ ಸಂಘದ ತಾಲೂಕು ಅಧ್ಯಕ್ಷ ವೇಣು, ಮುಖಂಡರಾದ ಪ್ರಸನ್ನ, ಆನಂದ್, ನಾಗರಾಜ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಶಿಕ್ಷಕರ ಪರವಾಗಿ ಶಿವಣ್ಣ, ಬೈಯ್ಯರೆಡ್ಡಿ, ದಿವಾಕರ್, ವೆಂಕಟೇಶ್, ರಘುನಾಥ್ ರೆಡ್ಡಿ, ಸಿ.ವಿ. ಶಿವಣ್ಣ, ವೆಂಕಟರಾಮರೆಡ್ಡಿ, ಅನುರಾಧ, ತನುಜಾ, ಟಿ.ಎಸ್. ಅನಿತಾ, ನಾಗರತ್ನ ಹಾಗೂ ಇತರರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ರೈತರ ಒಗ್ಗಟ್ಟಿನಿಂದ ರಸ್ತೆ ನಿರ್ಮಾಣ

ಬೆಂಗಳೂರು

ಸಮೀಪದ ಟಿ.ಗೊಲ್ಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಐಸಂದ್ರ ಮಿಟ್ಟೂರು ಗ್ರಾಮದಲ್ಲಿ ದಶಕಗಳಿಂದ ಕಾಡುತ್ತಿದ್ದ ರಸ್ತೆ ಸಮಸ್ಯೆಗೆ ಕೊನೆಗೂ ಶಾಶ್ವತ ಪರಿಹಾರ ದೊರೆತಿದೆ. ರೈತರು ತಮ್ಮ ತೋಟಗಳಿಗೆ ತೆರಳಲು ಸರಿಯಾದ ರಸ್ತೆ ಇಲ್ಲದೆ ಹಲವು ವರ್ಷಗಳಿಂದ ಸಂಕಷ್ಟ ಅನುಭವಿಸುತ್ತಿದ್ದ ಸಂದರ್ಭದಲ್ಲಿ, ಜೈಭೀಮ್ ಶ್ರೀನಿವಾಸ್ ಅವರ ನೇತೃತ್ವದಲ್ಲಿ ಗ್ರಾಮಸ್ಥರು ಹಾಗೂ ರೈತರು ಒಂದಾಗಿ ಹೊಸ ರಸ್ತೆ ನಿರ್ಮಾಣ ಮಾಡಿರುವುದು ಗ್ರಾಮದಲ್ಲಿ ಸಂತಸದ ವಾತಾವರಣ ಮೂಡಿಸಿದೆ.



ಮಳೆಗಾಲ ಬಂದಾಗ ರೈತರು ಗೊಬ್ಬರ ಸಾಗಾಟ, ಕೃಷಿ ಉತ್ಪನ್ನಗಳನ್ನು ಮಾರುಕಟ್ಟೆಗೆ ಕೊಂಡೊಯ್ಯುವುದು ಸೇರಿದಂತೆ ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದರು. ಹಲವು ಬಾರಿ ಮನವಿ ಸಲ್ಲಿಸಿದರೂ ಸಮಸ್ಯೆ ಬಗೆಹರಿಯದ ಹಿನ್ನೆಲೆ, ರೈತರು ಜೈಭೀಮ್ ಶ್ರೀನಿವಾಸ್ ಅವರ ಗಮನಕ್ಕೆ ವಿಷಯ ತಂದರು. ಬಳಿಕ ಅವರು ರೈತರೊಂದಿಗೆ ಹಾಗೂ ರಸ್ತೆ ಹಾದು ಹೋಗುವ ಜಾಗದ ಮಾಲೀಕರೊಂದಿಗೆ ಮಾತುಕತೆ ನಡೆಸಿ ಎಲ್ಲರನ್ನು ಒಂದೇ ವೇದಿಕೆಗೆ ತರಲು ಯಶಸ್ವಿಯಾದರು.

ನಂತರ ರೈತರ ಸಮ್ಮುಖದಲ್ಲೇ ಜೆಸಿಬಿ ಯಂತ್ರದ ಮೂಲಕ ಸುಮಾರು 14 ಅಡಿ ಅಗಲ ಹಾಗೂ ಒಂದು ಕಿಲೋಮೀಟರ್ ಉದ್ದದ ರಸ್ತೆಯನ್ನು ನಿರ್ಮಿಸಲಾಯಿತು. ರಸ್ತೆ ನಿರ್ಮಾಣವಾಗುತ್ತಿದ್ದಂತೆ ನೂರಾರು ಎಕರೆ ತೋಟಗಳಿಗೆ ವಾಹನ ಸಂಚಾರ ಸುಗಮವಾಗಿದ್ದು, ರೈತರ ಮುಖದಲ್ಲಿ ಹೊಸ ಭರವಸೆ ಮೂಡಿದೆ.

“ಹತ್ತು ವರ್ಷಗಳಿಂದ ಕಂಡ ಕನಸು ಇಂದು ನನಸಾಗಿದೆ. ಈಗ ನಮ್ಮ ತೋಟಗಳಿಗೆ ಸುಲಭವಾಗಿ ಹೋಗಬಹುದು. ಬೆಳೆ ಸಾಗಾಟಕ್ಕೂ ಅನುಕೂಲವಾಗಿದೆ,” ಎಂದು ಸ್ಥಳೀಯ ರೈತರು ಸಂತಸ ವ್ಯಕ್ತಪಡಿಸಿದರು.

ಗ್ರಾಮದ ಅಭಿವೃದ್ಧಿಗೆ ಜನರ ಒಗ್ಗಟ್ಟು ಮತ್ತು ಸಮಾಜಮುಖಿ ನಾಯಕತ್ವ ಇದ್ದರೆ ಯಾವುದೇ ಸಮಸ್ಯೆಗೂ ಪರಿಹಾರ ಕಂಡುಕೊಳ್ಳಬಹುದು ಎಂಬುದಕ್ಕೆ ಈ ಕಾರ್ಯ ಮಾದರಿಯಾಗಿದೆ ಎಂದು ಗ್ರಾಮಸ್ಥರು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಸಂಘಟನೆಯ ಜಿಲ್ಲಾಧ್ಯಕ್ಷ ಗೋವಿಂದ್, ಯುವ ಘಟಕ ಅಧ್ಯಕ್ಷ ಕಿಶೋರ್, ಹೋಬಳಿ ಅಧ್ಯಕ್ಷ ಸಂಜು ಸೇರಿದಂತೆ ಹಲವು ರೈತರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಕಳಪೆ ಕಾಮಗಾರಿ: ಗ್ರಾಮಸ್ಥರ ಆಕ್ರೋಶ



ಬೆಂಗಳೂರು

ತಾಲೂಕಿನ ವಿಟ್ಟಪ್ಪನಹಳ್ಳಿ ಗ್ರಾಮದಲ್ಲಿ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಜಲ ಜೀವನ್ ಮಿಷನ್ ಕಾಮಗಾರಿಯಲ್ಲಿ ಕಳಪೆ ಗುಣಮಟ್ಟ ಹಾಗೂ ಅವ್ಯವಸ್ಥೆ ಆರೋಪ ಕೇಳಿಬಂದ ಹಿನ್ನೆಲೆ ಗ್ರಾಮಸ್ಥರು ತೀವ್ರ ಆಕ್ರೋಶ ವ್ಯಕ್ತಪಡಿಸಿ ಅಧಿಕಾರಿಗಳು ಮತ್ತು ಗುತ್ತಿಗೆದಾರರನ್ನು ಗ್ರಾಮದಿಂದಲೇ ವಾಪಸ್ ಕಳುಹಿಸಿದ ಘಟನೆ ಗುರುವಾರ ನಡೆದಿದೆ.

ಗ್ರಾಮಕ್ಕೆ ಭೇಟಿ ನೀಡಿದ್ದ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರ ಜಬೀವುಲ್ಲಾ, ಇಂಜಿನಿಯರ್ ಅರವಿಂದ್ ಹಾಗೂ ಗುತ್ತಿಗೆದಾರರನ್ನು ಗ್ರಾಮಸ್ಥರು ಅಡ್ಡಗಟ್ಟಿ ಕಾಮಗಾರಿಯಲ್ಲಿನ ಲೋಪಗಳನ್ನು ತೋರಿಸಿ ತರಾಟೆಗೆ ತೆಗೆದುಕೊಂಡರು.

ಮನೆ ಮನೆಗೆ ಶುದ್ಧ ಕುಡಿಯುವ ನೀರು ಪೂರೈಸುವ ಯೋಜನೆಯೇ ಕಳಪೆ ಕಾಮಗಾರಿಯಿಂದ ಜನರಿಗೆ ತೊಂದರೆ ಉಂಟುಮಾಡುತ್ತಿದೆ ಎಂದು ಗ್ರಾಮಸ್ಥರು ಆಕ್ರೋಶ ಹೊರಹಾಕಿದರು.

ಗ್ರಾಮಸ್ಥರ ಪ್ರಕಾರ, ಕಾಮಗಾರಿ ಅಂದಾಜುಪಟ್ಟಿ ಪ್ರಕಾರ ನಡೆಯದೆ, ಕಳಪೆ ಗುಣಮಟ್ಟದ ಪೈಪ್ ಹಾಗೂ ಸಾಮಗ್ರಿಗಳನ್ನು ಬಳಸಲಾಗುತ್ತಿದೆ. ಯೋಜನೆಯ ನಿಯಮಾನುಸಾರ ಕನಿಷ್ಠ ಮೂರು ಅಡಿ ಆಳದಲ್ಲಿ ಪೈಪ್‌ಲೈನ್ ಅಳವಡಿಸಬೇಕಾದರೆ, ಹಲವು ಕಡೆ ಕೇವಲ ಒಂದು ರಿಂದ ಒಂದೂವರೆ ಅಡಿ ಆಳದಲ್ಲಿ ಪೈಪ್ ಹೂತು ಮುಚ್ಚಲಾಗಿದೆ ಎಂಬುದು ಪರಿಶೀಲನೆ ವೇಳೆ ಬೆಳಕಿಗೆ ಬಂದಿದೆ.

ಇದಲ್ಲದೆ, ಯೋಜನೆಗೆ ಬಳಸಲಾಗಿರುವ ಪೈಪ್‌ಗಳು ಎರಡು-ಮೂರು ವರ್ಷಗಳಲ್ಲೇ ಹಾಳಾಗುವಷ್ಟು ಕಳಪೆಯಾಗಿವೆ ಎಂದು ಗ್ರಾಮಸ್ಥರು ಆರೋಪಿಸಿದರು. ಜೆಜೆಎಂ ಯೋಜನೆಯಡಿ ಅಳವಡಿಸುವ ಪೈಪ್‌ಗಳು ಕನಿಷ್ಠ 35 ವರ್ಷಗಳ ಕಾಲ ಬಾಳಿಕೆ ಬರುವಂತಿರಬೇಕು ಎಂಬ ನಿಯಮವನ್ನು ಸಂಪೂರ್ಣ ನಿರ್ಲಕ್ಷಿಸಲಾಗಿದೆ ಎಂದು ದೂರಿದರು.

ಗ್ರಾಮದಲ್ಲಿ ನಿರ್ಮಾಣವಾಗುತ್ತಿರುವ ಓವರ್‌ಹೆಡ್ ಟ್ಯಾಂಕ್ ಕಾಮಗಾರಿಯಲ್ಲಿಯೂ ಕಳಪೆ ಗುಣಮಟ್ಟ ಕಂಡುಬಂದಿದೆ ಎಂದು ಸಾರ್ವಜನಿಕರು ಆರೋಪಿಸಿದರು. ಟ್ಯಾಪ್ ಅಳವಡಿಸಲು ನಿರ್ಮಿಸಿರುವ ಸಿಮೆಂಟ್ ಕಂಬಗಳು ಹಾಗೂ ಫೌಂಡೇಶನ್ ದುರ್ಬಲವಾಗಿದ್ದು, ನೀರು ಬರುವ ಮುನ್ನವೇ ಕೆಲವು ಕಡೆ ಬಿರುಕು ಕಾಣಿಸಿಕೊಂಡಿದೆ ಎಂದು ಗ್ರಾಮಸ್ಥರು ತಿಳಿಸಿದರು.

ಕೆಲ ದಿನಗಳ ಹಿಂದೆಯೇ ಕಾಮಗಾರಿ ಕಳಪೆಯಾಗಿರುವ ಕಾರಣ ಗ್ರಾಮಸ್ಥರು ಕೆಲಸ ಸ್ಥಗಿತಗೊಳಿಸಿದ್ದರು. ಇದೇ ವೇಳೆ, ಕಾಮಗಾರಿ ಪ್ರಶ್ನಿಸಿದ್ದ ಹುತ್ತೂರು ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಹಾಗೂ ಎಂಪಿಸಿಎಸ್ ಅಧ್ಯಕ್ಷ ವಿ.ಆರ್. ಮಂಜುನಾಥ್ ಅವರಿಗೆ ಗುತ್ತಿಗೆದಾರರಿಂದ ಧಮ್ಕಿ ಹಾಗೂ ಕೊಲೆ ಬೆದರಿಕೆ ಬಂದಿರುವ ಆರೋಪವೂ ಕೇಳಿಬಂದಿದೆ.

ದೂರುಗಳ ಹಿನ್ನೆಲೆಯಲ್ಲಿ ಗ್ರಾಮಕ್ಕೆ ಬಂದ ಅಧಿಕಾರಿಗಳು ಆರಂಭದಲ್ಲಿ ಪರಿಶೀಲನೆ ನಡೆಸದೆ ರಾಜಿಗೆ ಮುಂದಾಗಿದ್ದಾರೆ ಎಂದು ಯುವಕರು ಅಸಮಾಧಾನ ವ್ಯಕ್ತಪಡಿಸಿದರು. ಬಳಿಕ ಗ್ರಾಮಸ್ಥರ ಒತ್ತಡಕ್ಕೆ ಮಣಿದ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿದ ವೇಳೆ ಕಳಪೆ ಕಾಮಗಾರಿ ಬಹಿರಂಗವಾಗಿದೆ.

ಈ ಸಂದರ್ಭದಲ್ಲಿ ಕೋಟೆ ನಾರಾಯಣಸ್ವಾಮಿ, ವಿ. ಮುನಿರಾಜು, ಮನೋಹರ್, ರಾಘವೇಂದ್ರ, ಸಂತೋಷ್, ಶಿವರಾಜ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಮಳೆಗಾಗಿ ಕುಣಿಗಲ್ ಪಟ್ಟಣದಲ್ಲಿ ಯುವಕರ ವಿನೂತನ ಮೆರವಣಿಗೆ

ಬೆಂಗಳೂರು

ತೀವ್ರ ಬಿಸಿಲು, ಕುಡಿಯುವ ನೀರಿನ ಅಭಾವ ಮತ್ತು ಒಣಗುತ್ತಿರುವ ತೋಟಗಳ ನಡುವೆಯೇ ಕುಣಿಗಲ್ ಪಟ್ಟಣದಲ್ಲಿ ಯುವಕರು ಮಳೆಗಾಗಿ ವಿನೂತನವಾಗಿ ಪ್ರಾರ್ಥನೆ ನಡೆಸಿದ ಘಟನೆ ಗಮನ ಸೆಳೆಯಿತು.

ಪಟ್ಟಣದ ಕೆಆರ್‌ಎಸ್ ಅಗ್ರಹಾರದ ಗಣಪತಿ ದೇವಾಲಯದಿಂದ ಮಣ್ಣಿನಿಂದ ನಿರ್ಮಿಸಿದ “ಮಳೆರಾಯ”ನ ವಿಗ್ರಹವನ್ನು ತಲೆಯ ಮೇಲೆ ಹೊತ್ತು ಹತ್ತಾರು ಯುವಕರು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಿ ಮಳೆಗಾಗಿ ದೇವರಲ್ಲಿ ಪ್ರಾರ್ಥಿಸಿದರು.



“ಉಯ್ಯೋ ಹುಯ್ಯೋ ಮಳೆರಾಯ ಹೂವಿನ ತೋಟಕ್ಕೆ ನೀರಿಲ್ಲ ಬಾರೋ ಬಾರೋ ಮಳೆರಾಯ ಬಾಳೆ ಗಿಡಕ್ಕೆ ನೀರಿಲ್ಲ ” ಎಂದು ಗ್ರಾಮೀಣ ಶೈಲಿಯ ಹಾಡುಗಳನ್ನು ಹಾಡುತ್ತ ಯುವಕರು ಮೆರವಣಿಗೆ ನಡೆಸಿದ ದೃಶ್ಯ ಸಾರ್ವಜನಿಕರ ಗಮನ ಸೆಳೆಯಿತು.

ಕಳೆದ ಹಲವು ದಿನಗಳಿಂದ ಪಟ್ಟಣ ಹಾಗೂ ಗ್ರಾಮೀಣ ಭಾಗಗಳಲ್ಲಿ ಸಮರ್ಪಕ ಕುಡಿಯುವ ನೀರು ಪೂರೈಕೆ ಇಲ್ಲದಿರುವುದರಿಂದ ಜನರು ಹಾಗೂ ಜಾನುವಾರುಗಳು ಸಂಕಷ್ಟ ಎದುರಿಸುತ್ತಿವೆ. ಬಿಸಿಲಿನ ತಾಪ ಹೆಚ್ಚಾಗಿರುವ ಪರಿಣಾಮ ಬಾಳೆ, ತೆಂಗು, ಅಡಿಕೆ ಸೇರಿದಂತೆ ವಿವಿಧ ತೋಟಗಳು ಒಣಗುತ್ತಿದ್ದು, ರೈತರು ಮಳೆಯ ನಿರೀಕ್ಷೆಯಲ್ಲಿ ಕಂಗಾಲಾಗಿದ್ದಾರೆ ಎಂದು ಯುವಕರು ಆತಂಕ ವ್ಯಕ್ತಪಡಿಸಿದರು.

ಅರಣ್ಯ ಪ್ರದೇಶದಲ್ಲಿಯೂ ಪಕ್ಷಿ ಮತ್ತು ಪ್ರಾಣಿಗಳಿಗೆ ಕುಡಿಯುವ ನೀರು ಹಾಗೂ ಆಹಾರದ ಕೊರತೆ ಉಂಟಾಗಿದ್ದು, ಪರಿಸ್ಥಿತಿ ದಿನದಿಂದ ದಿನಕ್ಕೆ ಗಂಭೀರವಾಗುತ್ತಿದೆ ಎಂದು ಅವರು ಹೇಳಿದರು.

ಮೆರವಣಿಗೆಯ ವೇಳೆ ಅಂಗಡಿ ಹಾಗೂ ಹೋಟೆಲ್‌ಗಳ ಮುಂದೆ ಮಳೆರಾಯನ ವಿಗ್ರಹಕ್ಕೆ ನೀರು ಸುರಿದು “ಮಳೆ ಬರಲಿ” ಎಂದು ವಿಶೇಷವಾಗಿ ಪ್ರಾರ್ಥಿಸಲಾಯಿತು. ಗ್ರಾಮೀಣ ಸಂಪ್ರದಾಯದಂತೆ ಮಣ್ಣಿನ ವಿಗ್ರಹ ನಿರ್ಮಿಸಿ ಮಳೆಗಾಗಿ ಪ್ರಾರ್ಥಿಸುವ ಹಳೆಯ ಆಚರಣೆಯನ್ನು ಪುನರುಜ್ಜೀವನಗೊಳಿಸಿರುವುದು ಸಾರ್ವಜನಿಕರಲ್ಲಿ ವಿಶೇಷ ಆಸಕ್ತಿ ಮೂಡಿಸಿತು.

ಸುಡು ಬಿಸಿಲಿನ ತಾಪಕ್ಕೆ ಸರ್ಕಾರಿ ಕಚೇರಿಗಳು, ರಸ್ತೆಗಳಲ್ಲಿ ಜನ ಸಂಚಾರ ಕಡಿಮೆಯಾಗಿದ್ದು, ಪ್ರಾಣಿ-ಪಕ್ಷಿಗಳೂ ಸಹ ತೊಂದರೆ ಅನುಭವಿಸುತ್ತಿವೆ. ಮಾನವಕುಲ ಹಾಗೂ ಜಾನುವಾರುಗಳ ರಕ್ಷಣೆಗಾಗಿ ಮಳೆ ಸುರಿಯಲಿ ಎಂದು ದೇವರಲ್ಲಿ ಮನವಿ ಮಾಡಲಾಯಿತು.

ಈ ಸಂದರ್ಭದಲ್ಲಿ ಐ.ಕೆ. ಸಿದ್ದಗಂಗಯ್ಯ, ನಾರಾಯಣ, ಹೇರೂರು ಶಂಕರ್, ಕುಮಾರ್ ಗೌಡ, ಉಮೇಶ್ ಸೇರಿದಂತೆ ಹಲವರು ಭಾಗವಹಿಸಿದ್ದರು.

# ಹಾಲಿ ಸಂಸದ ಮಲ್ಲೇಶ್‌ಬಾಬು ವಿರುದ್ಧ ಸಾಮಾಜಿಕ ಜಾಲತಾಣಗಳಲ್ಲಿ ಅಸಮಾಧಾನದ ಪೋಸ್ಟ್ ವೈರಲ್!

ಬೆಂಗಳೂರು

ಮಲ್ಲೇಶ್ ಬಾಬು ವಿರುದ್ಧ ಅಸಮಾಧಾನ ವ್ಯಕ್ತಪಡಿಸುವ ಬರಹವೊಂದು ಇತ್ತೀಚೆಗೆ ಫೇಸ್‌ಬುಕ್ ಹಾಗೂ ವಾಟ್ಸಾಪ್ ಸೇರಿದಂತೆ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ಕೋಲಾರ ರಾಜಕೀಯ ವಲಯದಲ್ಲಿ ಚರ್ಚೆಗೆ ಗ್ರಾಸವಾಗಿದೆ. ವಿಶೇಷವಾಗಿ, ಈ ಬರಹವನ್ನು ಜೆಡಿಎಸ್ ಕಾರ್ಯಕರ್ತರೇ ಹೆಚ್ಚು ಹಂಚಿಕೊಳ್ಳುತ್ತಿದ್ದಾರೆ ಎನ್ನುವ ಮಾತುಗಳು ರಾಜಕೀಯ ಕುತೂಹಲ ಹೆಚ್ಚಿಸಿವೆ.



ವೈರಲ್ ಆಗಿರುವ ಪೋಸ್ಟ್‌ನಲ್ಲಿ, ಸಂಸದರಾದ ನಂತರ ಮಲ್ಲೇಶ್ ಬಾಬು ಅವರು ಕ್ಷೇತ್ರದಲ್ಲಿ ನಿರೀಕ್ಷಿತ ಮಟ್ಟದಲ್ಲಿ ಸಕ್ರಿಯರಾಗಿಲ್ಲ ಎಂಬ ಆರೋಪ ಮಾಡಲಾಗಿದೆ. ಪಕ್ಷ ಸಂಘಟನೆ, ಕಾರ್ಯಕರ್ತರ ಸಭೆಗಳು, ಸಾರ್ವಜನಿಕ ಸಮಸ್ಯೆಗಳ ಬಗ್ಗೆ ಧ್ವನಿ ಎತ್ತುವಲ್ಲಿ ಅವರು ಹಿಂದೆ ಬಿದ್ದಿದ್ದಾರೆ ಎಂದು ಟೀಕಿಸಲಾಗಿದೆ. “ಮದುವೆ ಹಾಗೂ ಸಮಾರಂಭಗಳಿಗೆ ಹೋಗಿ ಹಾರ ಹಾಕಿಸಿಕೊಳ್ಳುವುದರಲ್ಲೇ ಸೀಮಿತರಾಗಿದ್ದಾರೆ” ಎಂಬ ವ್ಯಂಗ್ಯವನ್ನೂ ಪೋಸ್ಟ್‌ನಲ್ಲಿ ಉಲ್ಲೇಖಿಸಲಾಗಿದೆ.

ಕಳೆದ ಲೋಕಸಭಾ ಚುನಾವಣೆಯಲ್ಲಿ ಜೆಡಿಎಸ್–ಬಿಜೆಪಿ ಮೈತ್ರಿಯ ಭಾಗವಾಗಿ ಕೋಲಾರ ಕ್ಷೇತ್ರವನ್ನು ಜೆಡಿಎಸ್‌ಗೆ ಬಿಟ್ಟುಕೊಡಲಾಗಿತ್ತು. ಆಗ ಹಾಲಿ ಸಂಸದರಾಗಿದ್ದ ಎಸ್. ಮುನಿಸ್ವಾಮಿ ಅವರಿಗೆ ಟಿಕೆಟ್ ನಿರಾಕರಿಸಿ ಮಲ್ಲೇಶ್ ಬಾಬು ಅವರಿಗೆ ಅವಕಾಶ ನೀಡಲಾಗಿತ್ತು. ಟಿಕೆಟ್ ಕೈ ತಪ್ಪಿದರೂ ಮುನಿಸ್ವಾಮಿ ಅವರು ಪಕ್ಷದ ಅಭ್ಯರ್ಥಿಯಂತೆ ಶ್ರಮಿಸಿ ಮಲ್ಲೇಶ್ ಬಾಬು ಅವರ ಗೆಲುವಿಗೆ ಕಾರಣರಾದರು ಎಂದು ಪೋಸ್ಟ್‌ನಲ್ಲಿ ಉಲ್ಲೇಖಿಸಲಾಗಿದೆ.

ಇದೇ ವೇಳೆ, ಮುನಿಸ್ವಾಮಿ ಅವರ ಹಿಂದಿನ ಕಾರ್ಯವೈಖರಿಯನ್ನು ಹೊಗಳಿರುವ ಪೋಸ್ಟ್‌ನಲ್ಲಿ, “ಮೋದಿಗಾಗಿ ಬಿಜೆಪಿ ಎನ್ನುವವರನ್ನು ಮುನಿಸ್ವಾಮಿಗಾಗಿ ಬಿಜೆಪಿ ಎನ್ನುವ ಮಟ್ಟಕ್ಕೆ ಸಂಘಟನೆ ಮಾಡಿದ್ದರು” ಎಂದು ಹೇಳಲಾಗಿದೆ. ಜೊತೆಗೆ, “ಅನುಭವದ ಕೊರತೆ ಇದ್ದರೆ ಮಾಜಿ ಸಂಸದ ಮುನಿಸ್ವಾಮಿ ಅವರಿಂದಲೇ ತರಬೇತಿ ಪಡೆಯಲಿ” ಎಂಬ ಸಲಹೆಯನ್ನೂ ನೀಡಲಾಗಿದೆ.

ಇತ್ತೀಚೆಗೆ ಕೋಲಾರದ ಒಬ್ಬ ಶಾಸಕ ಕೇಂದ್ರ ಸರ್ಕಾರದ ಯೋಜನೆ ಕುರಿತು ನೀಡಿದ್ದ ವಿವಾದಾತ್ಮಕ ಹೇಳಿಕೆಯನ್ನು ಬಿಜೆಪಿ ಹಾಗೂ ಜೆಡಿಎಸ್‌ನ ಹಲವು ನಾಯಕರು ಖಂಡಿಸಿದ್ದರೂ, ಮಲ್ಲೇಶ್ ಬಾಬು ಅವರು ಮೌನ ವಹಿಸಿದ್ದರು ಎಂಬ ಆರೋಪವೂ ವೈರಲ್ ಬರಹದಲ್ಲಿ ಕಾಣಿಸಿಕೊಂಡಿದೆ.

ಈ ಬೆಳವಣಿಗೆ ರಾಜಕೀಯ ವಲಯದಲ್ಲಿ ಹಲವು ಪ್ರಶ್ನೆಗಳನ್ನು ಹುಟ್ಟುಹಾಕಿದೆ. ಜೆಡಿಎಸ್ ಕಾರ್ಯಕರ್ತರಲ್ಲೇ ಅಸಮಾಧಾನ ಹೆಚ್ಚಾಗಿದೆಯೇ? ಕೋಲಾರದಲ್ಲಿ ಮುನಿಸ್ವಾಮಿ ಅವರ ಪ್ರಭಾವ ಇನ್ನೂ ಮುಂದುವರಿದಿದೆಯೇ? ಮೈತ್ರಿ ಪಕ್ಷಗಳಲ್ಲೇ ಹಾಲಿ ಸಂಸದರ ಕಾರ್ಯವೈಖರಿ ಬಗ್ಗೆ ಅಸಮಾಧಾನ ವ್ಯಕ್ತವಾಗುತ್ತಿದೆಯೇ? ಎಂಬ ಚರ್ಚೆಗಳು ಜೋರಾಗಿವೆ.

ಆದರೆ, ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ಈ ರೀತಿಯ ಪೋಸ್ಟ್‌ಗಳು ವೈಯಕ್ತಿಕ ಅಭಿಪ್ರಾಯ ಅಥವಾ ಕಾರ್ಯಕರ್ತರ ಅಸಮಾಧಾನವನ್ನು ಪ್ರತಿಬಿಂಬಿಸಬಹುದೇ ಹೊರತು, ಅದು ಪಕ್ಷದ ಅಧಿಕೃತ ನಿಲುವು ಎಂದು ಹೇಳಲು ಸಾಧ್ಯವಿಲ್ಲ. ಆದರೂ, ಈ ವೈರಲ್ ಬರಹ ಕೋಲಾರ ರಾಜಕೀಯದಲ್ಲಿ ಹೊಸ ಚರ್ಚೆಗೆ ಕಾರಣವಾಗಿರುವುದು ಮಾತ್ರ ನಿಜ.

# ದೇಶ, ರಾಜ್ಯಕ್ಕೆ ಒಳಿತಾಗಲಿ: ಡಿಸಿಎಂ ಡಿಕೆಶಿ

ಬೆಂಗಳೂರು

"ದುಷ್ಟ ಶಕ್ತಿಗಳಿಂದ ರಕ್ಷಣೆ ಸಿಗಲಿ ಎಂದು ಪ್ರಾರ್ಥಿಸಲು ಬಂದಿದ್ದೇನೆ. ದೇವರಲ್ಲಿ ಪ್ರಾರ್ಥನೆಗೆ ಇದು ಸೂಕ್ತ ಸಮಯ ಎಂದು ಬಂದಿರುವೆ. ದೇಶ ಹಾಗೂ ರಾಜ್ಯಕ್ಕೆ ಒಳಿತಾಗಲಿ ಎಂದು ಬೇಡಿಕೊಂಡಿರುವೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದರು.

ತಮಿಳುನಾಡಿನ ಕಾರೈಕಲ್ ಜಿಲ್ಲೆಯ ತಿರುನಲ್ಲಾರ್ ಶನೇಶ್ವರ ಸ್ವಾಮಿ ದೇಗುಲದ ಭೇಟಿ ಬಗ್ಗೆ ಮಾಧ್ಯಮಗಳು ಪ್ರಶ್ನಿಸಿದಾಗ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಶನಿವಾರ ಈ ರೀತಿ ಪ್ರತಿಕ್ರಿಯೆ ನೀಡಿದರು. ಟಿವಿಕೆ ಜೊತೆಗಿನ ಮೈತ್ರಿ ಬಗ್ಗೆ ಕೇಳಿದಾಗ, "ಜಾತ್ಯಾತೀತ, ಪ್ರಜಾಪ್ರಭುತ್ವ ತತ್ವ ಉಳಿಯಬೇಕು ಎಂದು ಕಾಂಗ್ರೆಸ್ ಪಕ್ಷ ಮೈತ್ರಿ ಮಾಡಿಕೊಂಡಿದೆ. ನಾವು ನಮ್ಮ ನಿಲುವಿಗೆ ಬದ್ಧವಾಗಿದ್ದೇವೆ" ಎಂದು ಹೇಳಿದರು.

# ಹಿಂದೂಗಳು ಕನಿಷ್ಠ ಎರಡು ಮಕ್ಕಳಿಗೆ ಜನ್ಮ ನೀಡಬೇಕು: ಮಿಲಿಂದ್‌ಪರಾಂಡೆ ಕರೆ

ಕನಕಪುರ

ಹಿಂದೂ ಧರ್ಮ ಹಾಗೂ ದೇಶದ ಉಳಿವಿಗಾಗಿ ಹಿಂದೂ ಕುಟುಂಬಗಳು ಕನಿಷ್ಠ ಎರಡು ಮಕ್ಕಳಿಗೆ ಜನ್ಮ ನೀಡಬೇಕು ಎಂದು ಮಿಲಿಂದ್ ಪರಾಂಡೆ ಕರೆ ನೀಡಿದರು.

ನಗರದ ದೇಗುಲಮಠದಲ್ಲಿ ವಿಶ್ವ ಹಿಂದೂ ಪರಿಷದ್ ಹಾಗೂ ಬಜರಂಗದಳ ದಕ್ಷಿಣ ಪ್ರಾಂತ ವತಿಯಿಂದ ಹತ್ತು ದಿನಗಳ ಕಾಲ ಆಯೋಜಿಸಿದ್ದ ಶೌರ್ಯ ಪ್ರಶಿಕ್ಷಣ ಶಿಬಿರದ ಸಮಾರೋಪ ಸಮಾರಂಭ ಹಾಗೂ ಗಣ್ಯ ನಾಗರಿಕರೊಂದಿಗೆ ನಡೆದ ಸಂವಾದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

“ಕಳೆದ ಇಪ್ಪತ್ತು ವರ್ಷಗಳಿಂದ ದೇಶದಲ್ಲಿ ಹಿಂದೂಗಳ ಜನಸಂಖ್ಯೆ ಇಳಿಮುಖವಾಗುತ್ತಿರುವುದು ಆತಂಕಕಾರಿ ಬೆಳವಣಿಗೆ. ಇದೇ ಪರಿಸ್ಥಿತಿ ಮುಂದುವರಿದರೆ ಮುಂದಿನ ಪೀಳಿಗೆ ಗಂಭೀರ ಪರಿಣಾಮಗಳನ್ನು ಎದುರಿಸಬೇಕಾಗುತ್ತದೆ” ಎಂದು ಅವರು ಅಭಿಪ್ರಾಯಪಟ್ಟರು.

ಭಾರತ ದೇಶ ಹಿಂದೂಗಳ ರಾಷ್ಟ್ರವಾಗಿದ್ದು, ಭಾರತೀಯರೆಲ್ಲರೂ ಹಿಂದೂಗಳೇ ಎಂಬ ಮನೋಭಾವದೊಂದಿಗೆ ಬದುಕಬೇಕು ಎಂದು ಹೇಳಿದ ಅವರು, ಜಾತಿ ಮತ್ತು ಜನಾಂಗ ಭೇದಗಳನ್ನು ಬದಿಗೊತ್ತಿ ಎಲ್ಲರೂ ಭಾರತೀಯರು ಎಂಬ ಭಾವನೆ ಬೆಳೆಸಿಕೊಳ್ಳಬೇಕು ಎಂದರು.

ಈ ನಿಟ್ಟಿನಲ್ಲಿ ದೇಶದ ನಾಗರಿಕರು ಮೂರು ಪ್ರಮುಖ ಅಂಶಗಳನ್ನು ಗಮನಿಸಬೇಕೆಂದು ಕರೆ ನೀಡಿದ ಅವರು, “ಹಿಂದೂಗಳ ಸಂಖ್ಯೆ ಕಡಿಮೆಯಾಗುತ್ತಿರುವ ಹಿನ್ನೆಲೆ ಕುಟುಂಬಗಳು ಕನಿಷ್ಠ ಎರಡು ಮಕ್ಕಳನ್ನು ಹೊಂದಿ ಅವರಿಗೆ ಉತ್ತಮ ಶಿಕ್ಷಣ ನೀಡಿ ಸ್ವಾವಲಂಬಿಗಳನ್ನಾಗಿ ಬೆಳೆಸಬೇಕು” ಎಂದು ಹೇಳಿದರು.

ಇನ್ನೂ, ಕೇಂದ್ರ ಸರ್ಕಾರದ ಜನಗಣತಿ ಪ್ರಕ್ರಿಯೆ ಸಂಪೂರ್ಣ ಆನ್‌ಲೈನ್ ಆಗಿರುವ ಹಿನ್ನೆಲೆಯಲ್ಲಿ ಧರ್ಮದ ಕಾಲಂನಲ್ಲಿ ‘ಹಿಂದೂ’ ಎಂದು ಮಾತ್ರ ನಮೂದಿಸುವಂತೆ ಮನವಿ ಮಾಡಿದರು.

ದೇಶದಲ್ಲಿ ಮಾದಕ ವಸ್ತುಗಳ ಬಳಕೆ ಮತ್ತು ಮಾರಾಟ ದೊಡ್ಡ ಪಿಡುಗಾಗಿ ಪರಿಣಮಿಸಿದ್ದು, ಯುವ ಸಮುದಾಯ ಇದಕ್ಕೆ ಹೆಚ್ಚು ಬಲಿಯಾಗುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದ ಅವರು, ಪೋಷಕರು, ಶಿಕ್ಷಕರು ಹಾಗೂ ಸಂಘ ಸಂಸ್ಥೆಗಳು ಜಾಗೃತಿ ಮೂಡಿಸುವ ಮೂಲಕ ಆರೋಗ್ಯವಂತ ಯುವ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ವಿಶ್ವ ಹಿಂದೂ ಪರಿಷದ್ ತಾಲೂಕು ಮುಖಂಡ ಕೆ.ಆರ್. ಸುರೇಶ್, ಬಜರಂಗದಳ ತಾಲೂಕು ಮುಖಂಡ ಕಿರಣ್, ಪ್ರಾಂತ ಕಾರ್ಯದರ್ಶಿ ಸುರೇಶ್, ಪ್ರಾಂತ ಸಂಯೋಜಕ ಪ್ರಭಂಜನ್ ಸೂರ್ಯ ಸೇರಿದಂತೆ ಸಂಘಟನೆಯ ಕಾರ್ಯಕರ್ತರು ಹಾಗೂ ಗಣ್ಯರು ಉಪಸ್ಥಿತರಿದ್ದರು.

# ‘ಪಕ್ಷ ಹೇಳಿದಂತೆ ಕೇಳುವೆ, ತಮಿಳುನಾಡು ವಿಚಾರ ನನಗೆ ಗೊತ್ತಿಲ್ಲ’


ಬೆಂಗಳೂರು

"ತಮಿಳುನಾಡಿನ ಕಾಂಗ್ರೆಸ್ ಶಾಸಕರು ಬೆಂಗಳೂರಿಗೆ ಬಂದಿದ್ದಾರೆ ಎಂಬುದು ಸುಳ್ಳು. ನಾನು ಪಕ್ಷ ಹೇಳಿದಂತೆ ಕೇಳುವೆ, ತಮಿಳುನಾಡು ವಿಚಾರ ನನಗೆ ಗೊತ್ತಿಲ್ಲ" ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಸ್ಪಷ್ಟಪಡಿಸಿದರು.

ಸದಾಶಿವನಗರ ನಿವಾಸದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಶನಿವಾರ ಪ್ರತಿಕ್ರಿಯೆ ನೀಡಿದರು.

ತಮಿಳುನಾಡಿನ ಶಾಸಕರು ಈಗಲ್ ಟನ್ ರೆಸಾರ್ಟ್‌ಗೆ ಬಂದಿದ್ದಾರೆಯೇ ಎಂದು ಕೇಳಿದಾಗ, "ಯಾವ ಶಾಸಕರೂ ಈಗಲ್ ಟನ್ ರೆಸಾರ್ಟ್ ಗೆ ಬಂದಿಲ್ಲ. ಈ ಬಗ್ಗೆ ನನಗೆ ಗೊತ್ತಿಲ್ಲ. ಮಾಹಿತಿ ಇದ್ದಿದ್ದರೆ ನಾನು ಹೇಳುತ್ತಿದ್ದೆ. ನವೀಕರಣ ಹಿನ್ನೆಲೆಯಲ್ಲಿ ಈಗಲ್ ಟನ್ ರೆಸಾರ್ಟ್ ಮುಚ್ಚಲಾಗಿದೆ.

ಕೆಲವರು ಹೈದರಾಬಾದ್ ಗೆ ಹೋಗಿದ್ದಾರೆ ಎಂದರೆ ಮತ್ತೆ ಕೆಲವರು ಬೆಂಗಳೂರಿಗೆ ಬಂದಿದ್ದಾರೆ ಎಂದು ಹೇಳುತ್ತಿದ್ದಾರೆ. ಈ ಬಗ್ಗೆ ಮಾಧ್ಯಮಗಳಲ್ಲಿ ನೋಡಿದೆ. ಪಕ್ಷದ ಹೈಕಮಾಂಡ್ ನಾಯಕರು ಏನಾದರೂ ನಿರ್ದೇಶನ ನೀಡಿದರೆ ನಾನು ಅದನ್ನು ಪಾಲಿಸುವೆ. ಆದರೆ ಈವರೆಗೆ ಹೈಕಮಾಂಡ್ ನಾಯಕರು ನನ್ನ ಜೊತೆ ಏನೂ ಮಾತನಾಡಿಲ್ಲ. ಪಕ್ಷದ ನಾಯಕರ ನಿರ್ದೇಶನದಂತೆ ನಾನು ತಮಿಳುನಾಡಿನಲ್ಲಿ ಪ್ರಣಾಳಿಕೆ ಬಿಡುಗಡೆ ಹಾಗೂ ಪ್ರಚಾರಕ್ಕೆ ಹೋಗಿದ್ದೆ. ಅದಾದ ನಂತರ ನನಗೆ ಯಾವುದೇ ಮಾಹಿತಿ ಇಲ್ಲ" ಎಂದರು.



ತಮಿಳುನಾಡಿನಲ್ಲಿ ಕ್ಷಣ ಕ್ಷಣಕ್ಕೂ ಪರಿಸ್ಥಿತಿ ಬದಲಾಗುತ್ತಿದೆಯಲ್ಲ ಎಂದಾಗ, "ನನಗೆ ಈ ಬಗ್ಗೆ ಯಾವುದೇ ಮಾಹಿತಿ ಇಲ್ಲ" ಎಂದರು.

ಯಡಿಯೂರಪ್ಪ ಅವರ ಅಭಿಮಾನೋತ್ಸವ ಕಾರ್ಯಕ್ರಮದ ಬಗ್ಗೆ ಕೇಳಿದಾಗ, "ಅವರು ರಾಜ್ಯದ ಸೇವೆ ಮಾಡಿದ್ದಾರೆ. ಅವರ ಜನ್ಮದಿನವಿದ್ದರೆ ಅವರಿಗೆ ಒಳ್ಳೆಯದಾಗಲಿ. ಅವರ ಪಕ್ಷದವರು ಪಕ್ಷ ಸಂಘಟನೆ ಹಾಗೂ ಅವರಿಗೆ ಗೌರವ ನೀಡುತ್ತಿದ್ದಾರೆ. ಅದರಲ್ಲಿ ತಪ್ಪೇನಿಲ್ಲ. ಅವರಿಗೆ ಉತ್ತಮ ಆರೋಗ್ಯ ಸಿಗಲಿ ಎಂದು ಆಶಿಸುತ್ತೇನೆ. ಭಗವಂತ ಅವರಿಗೆ ಹೆಚ್ಚಿನ ಆಯಸ್ಸು ನೀಡಲಿ. ರಾಜಕೀಯವಾಗಿ ಅವರ ವಿಚಾರಧಾರೆ ಬೇರೆ, ನಮ್ಮ ವಿಚಾರಧಾರೆ ಬೇರೆ" ಎಂದು ತಿಳಿಸಿದರು.

ಪುದುಚೆರಿ ಪ್ರವಾಸದ ಬಗ್ಗೆ ಕೇಳಿದಾಗ, "ನಾನು ಬಹಳ ದಿನಗಳಿಂದ ದೇವಾಲಯಕ್ಕೆ ಹೋಗಿರಲಿಲ್ಲ. ಹೀಗಾಗಿ ಶನೇಶ್ವರ ದೇವಾಲಯಕ್ಕೆ ಹೋಗುತ್ತಿದ್ದೇನೆ" ಎಂದು ತಿಳಿಸಿದರು.

ಕೇರಳಂ ಸಿಎಂ ಆಯ್ಕೆ ವಿಚಾರವಾಗಿ ಕೇಳಿದಾಗ, "ನಮ್ಮ ಎಲ್ಲಾ ನಾಯಕರ ಜೊತೆ ಚರ್ಚೆ ಮಾಡಿ ತೀರ್ಮಾನ ಮಾಡುತ್ತಾರೆ. ಅದು ಎಲ್ಲಾ ಪಕ್ಷಗಳಲ್ಲೂ ನಡೆಯುವ ಪ್ರಕ್ರಿಯೆ" ಎಂದು ತಿಳಿಸಿದರು.

ನಗರದಲ್ಲಿ ಮರಗಳ ತೆರವಿಗೆ ಸಮಯವಿಲ್ಲ ಎಂಬ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರ ಟೀಕೆ ಬಗ್ಗೆ ಕೇಳಿದಾಗ, "ಬಿದ್ದಿರುವ ಎಲ್ಲಾ ಮರಗಳ ತೆರವು ಮಾಡಲಾಗುತ್ತಿದೆ. ಅರಮನೆ ಮೈದಾನ ಸುತ್ತಮುತ್ತ ಸೇರಿದಂತೆ ಎಲ್ಲೆಡೆ ಈ ಕಾರ್ಯ ಮಾಡಲಾಗುತ್ತಿದೆ. ದುರ್ಬಲವಾಗಿರುವ ಮರಗಳ ತೆರವಿಗೂ ಸೂಚಿಸಲಾಗಿದೆ. 480 ಮರಗಳ ಪಟ್ಟಿ ನೀಡಿದ್ದು, ಅವುಗಳ ರೆಂಬೆ ಕತ್ತರಿಸಲು ಅನುಮತಿ ನೀಡಲಾಗಿದೆ. ಅಶೋಕ್ ಅವರು ಹೇಳಿರುವ ಎಲ್ಲಾ ಕೆಲಸ ಮಾಡಲಾಗುತ್ತಿದೆ" ಎಂದರು.

"ಆರ್. ಅಶೋಕ್ ಅವರು ಶಾಸಕರಾದ ಕಾಶಪ್ಪನವರು ಐಪಿಎಲ್ ಟಿಕೆಟ್ ಕೇಳಿದ್ದರು. ಈಗ ಅದನ್ನು ನನ್ನ ಮೇಲೆಯೇ ಹಾಕಿಕೊಂಡಿದ್ದೇನೆ. ಗುಜರಾತಿನವರಿಗೆ ಟಿಕೆಟ್ ಗಳು ಹೆಚ್ಚಾಗಿ ಬೇಕಾಗಿತ್ತು, ವ್ಯಾಪಾರ ಜಾಸ್ತಿ ಆಗಬೇಕಿತ್ತು. ಅದಕ್ಕೆ ಈ ರೀತಿ ರಾಜಕೀಯ ಮಾಡುತ್ತಿದ್ದಾರೆ.

ಅವರಿಗೆ ನಾವು ಕೇಳಿದ್ದ 300 ಟಿಕೆಟ್ ದೊಡ್ಡದಾಯ್ತಾ? ಬೇರೆ ರಾಜ್ಯಗಳಲ್ಲಿ 60% ಟಿಕೆಟ್ ಅನ್ನು ರಾಜ್ಯ ಸರ್ಕಾರಗಳಿಗೆ ಕೊಡುತ್ತಿದ್ದಾರೆ. ನಾನು ಕರ್ನಾಟಕದ ಪ್ರತಿನಿಧಿಯಾಗಿ ಶಾಸಕರು ಏನು ಹೇಳುತ್ತಾರೋ ಅದನ್ನು ಮಾಡಿದ್ದೇನೆ. ಎಲ್ಲಾ ಪಕ್ಷದವರು ಸೇರಿ ಬೇಡಿಕೆ ಇಟ್ಟರಲ್ಲವೇ? ದಳದವರಿಗೆ ಬೇಡವಾದರೆ ತಮ್ಮ ಪಕ್ಷದ ಶಾಸಕರಿಗೆ ಟಿಕೆಟ್ ಬೇಡ ಎಂದು ವಾಪಸ್ ನೀಡಲಿ. ನಾನು ನನಗಾಗಿ ಟಿಕೆಟ್ ಕೇಳಿದ್ದೀನಾ? ನಮ್ಮ ಜನಪ್ರತಿನಿಧಿಗಳು ಮನವಿ ಮಾಡಿದ್ದಕ್ಕೆ ಕೇಳಿದೆ. ಈ ಹಿಂದೆ ಶಾಸಕರಿಗೆ 2 ಟಿಕೆಟ್ ನೀಡುತ್ತಿದ್ದರು. ಈಗ ಮೂರು ಟಿಕೆಟ್ ನೀಡಿ ಎಂದು ಹೇಳಿರುವೆ" ಎಂದು ಸ್ಪಷ್ಟಪಡಿಸಿದರು.

# ಬಜೆಟ್-ಟು-ಆಕ್ಷನ್ ಕಾರ್ಯಾಗಾರ




ಬೆಂಗಳೂರು

ಅಭಿಯಂತರರು ‘ನಮ್ಮ ವಾರ್ಡ್ ನಮ್ಮ ಹೆಮ್ಮೆ’ ಎಂಬ ಭಾವನೆಯಿಂದ, ದೊಡ್ಡಮಟ್ಟದ ಸಾರ್ವಜನಿಕ ಹಿತಾಸಕ್ತಿಯೊಂದಿಗೆ ಕೆಲಸ ಮಾಡಬೇಕು. ಮುಂದಿನ 30 ವರ್ಷಗಳನ್ನು ಗಮನದಲ್ಲಿಟ್ಟುಕೊಂಡು ನಗರ ಸೌಂದರ್ಯೀಕರಣ, ನಗರ ಯೋಜನೆ ಬಗ್ಗೆ ಯೋಚಿಸಿ ಕಾರ್ಯಪ್ರವೃತ್ತರಾಗಬೇಕು ಎಂದು ಬೆಂಗಳೂರು ಪಶ್ಚಿಮ ನಗರ ಪಾಲಿಕೆ ಆಯುಕ್ತರಾದ ಡಾ. ರಾಜೇಂದ್ರ ಕೆ.ವಿ. ಸೂಚಿಸಿದರು.

ಬೆಂಗಳೂರು ಪಶ್ಚಿಮ ನಗರ ಪಾಲಿಕೆಯ 2026–27 ನೇ ಸಾಲಿನ 4,732 ಕೋಟಿ ರೂ. ಬಜೆಟ್ ಅನುದಾನವನ್ನು ಸಮರ್ಪಕವಾಗಿ ಹಾಗೂ ಪರಿಣಾಮಕಾರಿಯಾಗಿ ಬಳಸುವ ಉದ್ದೇಶದಿಂದ ಅಧಿಕಾರಿಗಳಿಗೆ ಮೇ 8ರಂದು ಆಯೋಜಿಸಿದ ಬಜೆಟ್–ಟು–ಆಕ್ಷನ್ ಪ್ಲಾನ್ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಪಶ್ಚಿಮ ನಗರ ಪಾಲಿಕೆಯ ಆಸ್ತಿ ನಿರ್ವಹಣೆಗೆ ಹೆಚ್ಚು ಹಣ ವಿನಿಯೋಗಿಸುವ ಬದಲು, ಅವುಗಳನ್ನು ಸಮರ್ಥವಾಗಿ ಬಳಸಿಕೊಳ್ಳುವ ನಿಟ್ಟಿನಲ್ಲಿ ಯೋಚಿಸಬೇಕು. ಇರುವ ಆಸ್ತಿಯನ್ನು ಸರಿಯಾಗಿ ಬಳಸುವ, ಬಾಳಿಕೆ ಹೆಚ್ಚಿಸುವ ಹಾಗೂ ಆ ಮೂಲಕ ಸೂಕ್ಷ್ಮ ಎಕಾನಮಿ ಮೂಲಕ ಜನರಿಗೆ ಹೇಗೆ ಪ್ರಯೋಜನ ಒದಗಿಸಬಹುದು ಎಂಬ ಬಗ್ಗೆ ಚಿಂತಿಸಬೇಕು. ಈ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಅಗತ್ಯ. ಹೂಳೆತ್ತುವಿಕೆ, ರಸ್ತೆ, ಪಾರ್ಕ್ ಅಭಿವೃದ್ಧಿ ಇತ್ಯಾದಿ ಅಭಿವೃದ್ಧಿ ಕಾರ್ಯಗಳನ್ನು ಮೂವತ್ತು ವರ್ಷಗಳನ್ನು ಗಮನದಲ್ಲಿಟ್ಟುಕೊಂಡು ಯೋಜಿಸಬೇಕು ಎಂದರು.

4,732 ಕೋಟಿ ರೂ. ಬಜೆಟ್ ಇದ್ದು, ಹಣಕಾಸು ಶಿಸ್ತು ತಪ್ಪದೆ, ಸಮಸ್ಯೆಗಳಿಗೆ ಉತ್ತರ ಕಂಡುಕೊಳ್ಳಿ. ಆಸ್ತಿ (ಕೆರೆ ಇತ್ಯಾದಿ) ಗಳನ್ನು ಸಮರ್ಪಕವಾಗಿ ಬಳಸಿಕೊಳ್ಳುವ ಬಗ್ಗೆ ಯೋಚಿಸಿ. ನನ್ನ ಅವಧಿಯಲ್ಲಿ ನನ್ನ ವ್ಯಾಪ್ತಿಯ ಕಟ್ಟಡ, ರಸ್ತೆ, ಫುಟ್ ಪಾತ್ ರಕ್ಷಿಸಿದ್ದೇನೆ ಎಂಬ ತೃಪ್ತಿ ಹೊಂದಿ. ಪ್ರೈವೇಟ್ ಪಬ್ಲಿಕ್ ಪಾರ್ಟ್ನರ್‌ಶಿಪ್ ನಲ್ಲಿ ನಗರದ ವ್ಯವಸ್ಥೆ ಸರಿಪಡಿಸಲು ಪ್ರಯತ್ನಿಸಿ. ನನ್ನ ವಾರ್ಡ್ ಉತ್ತಮಗೊಳ್ಳಬೇಕು ಎಂಬ ಆಲೋಚನೆ ಬರಲಿ. ಹೊಂದಾಣಿಕೆಯೊಂದಿಗೆ ಕೆಲಸ ಮಾಡಿ ಎಂದು ಕಿವಿಮಾತು ಹೇಳಿದರು.

ಕಲಿಕೆ ನಿರಂತರವಾಗಿ ನಡೆಯುತ್ತಿರಬೇಕು. ಇಂಜಿನಿಯರಿಂಗ್ ಕಲಿಕೆಗೂ ವಾಸ್ತವಕ್ಕೂ ವ್ಯತ್ಯಾಸ ಕಂಡುಬರಬಹುದು. ಹಾಗಾಗಿ ಕ್ರಾಸ್ ಲರ್ನಿಂಗ್ ಅಗತ್ಯ. ಆ ನಿಟ್ಟಿನಲ್ಲಿ ಇಂತಹ ಕಾರ್ಯಾಗಾರಗಳು ಅಗತ್ಯ. ಎಲ್ಲ ಇಂಜಿನಿಯರ್ ಗಳು ಮುಕ್ತವಾಗಿ ಚರ್ಚಿಸಿ, ಉತ್ತಮ ಕ್ರಮಗಳನ್ನು ಅಳವಡಿಸಿಕೊಳ್ಳಿ ಎಂದು ಸಲಹೆ ನೀಡಿದರು.

## ಕೆರೆಗಳ ಒಡಲು ಖಾಲಿ ಮಾಡುತ್ತಿರುವ

# ಮರಳು ಮಾಫಿಯಾ

• ಕೋಲಾರ

ಮುಳಬಾಗಲು ತಾಲ್ಲೂಕಿನ ವಿವಿಧ ಕೆರೆಗಳಲ್ಲಿ ನಡೆಯುತ್ತಿರುವ ಅಕ್ರಮ ಮರಳು ಸಾಗಾಟ ಇದೀಗ ನಿಯಂತ್ರಣ ತಪ್ಪಿದ ಸ್ಥಿತಿಗೆ ತಲುಪಿದೆ.

ರಾತ್ರಿ 11 ಗಂಟೆಯಿಂದ ಮುಂಜಾನೆ 4 ಗಂಟೆಯವರೆಗೆ ಎರಡು–ಮೂರು ಟಿಪ್ಪರ್ ವಾಹನಗಳು ಹಾಗೂ ಹಿಟಾಚಿ ಯಂತ್ರಗಳ ಮೂಲಕ ಕೆರೆಗಳಿಂದ ರಾಜಾರೋಷವಾಗಿ ಮರಳು ಎತ್ತಲಾಗುತ್ತಿದ್ದು, ಸಂಬಂಧಿಸಿದ ಇಲಾಖೆಗಳ ನಿರ್ಲಕ್ಷ್ಯಕ್ಕೆ ಸಾರ್ವಜನಿಕರು ತೀವ್ರ ಅಸಮಾಧಾನ ವ್ಯಕ್ತಪಡಿಸುತ್ತಿದ್ದಾರೆ.

ಅಕ್ರಮ ಮರಳು ಸಾಗಾಟವನ್ನು ತಡೆಯಬೇಕಾದ ಕಂದಾಯ ಇಲಾಖೆ ಮತ್ತು ಪೊಲೀಸ್ ಇಲಾಖೆ ಅಧಿಕಾರಿಗಳು ಕೇವಲ ಪ್ರಚಾರಾತ್ಮಕ ಕ್ರಮಗಳಿಗೆ ಸೀಮಿತರಾಗಿದ್ದಾರೆ ಎಂಬ ಆರೋಪ ಕೇಳಿಬರುತ್ತಿದೆ. ಕೆಲವು ಆಯ್ದ ಕೆರೆಗಳ ಬಳಿ ವಾಹನಗಳನ್ನು ವಶಪಡಿಸಿಕೊಂಡು ಫೋಟೋಗಳಿಗೆ ಪೋಸ್ ನೀಡುವುದನ್ನು ಬಿಟ್ಟರೆ, ಸಮಗ್ರ ಕ್ರಮ ಕೈಗೊಳ್ಳಲಾಗುತ್ತಿಲ್ಲ ಎಂದು ಸ್ಥಳೀಯರು ದೂರಿದ್ದಾರೆ.

ತಾಲ್ಲೂಕಿನ ಪುಟ್ಟೇನಹಳ್ಳಿ ಗ್ರಾಮದ ಕೆರೆಯಿಂದ ಅಕ್ರಮವಾಗಿ ಮರಳು ಸಾಗಿಸುತ್ತಿದ್ದ ವೇಳೆ ಆಂಧ್ರಪ್ರದೇಶ ನೋಂದಣಿ ಹೊಂದಿದ ವಾಹನಗಳ ಫೋಟೋಗಳು ಲಭ್ಯವಾಗಿದ್ದು, ಈ ದಂಧೆಯಲ್ಲಿ ಅಂತರರಾಜ್ಯ ಜಾಲದ ಕೈವಾಡವಿರುವ ಶಂಕೆ ಮತ್ತಷ್ಟು ಗಟ್ಟಿಯಾಗಿದೆ.



ಸ್ಥಳೀಯರ ಪ್ರಕಾರ, ಕೆರೆಗಳಿಂದ ಸಂಗ್ರಹವಾಗುವ ಮರಳನ್ನು ದೊಡ್ಡ ಪ್ರಮಾಣದ ಲಾರಿಗಳ ಮೂಲಕ ಸಾಗಿಸಲಾಗುತ್ತಿದೆ. ಈ ಮರಳು ನೆರೆಯ ಆಂಧ್ರಪ್ರದೇಶಕ್ಕೋ ಅಥವಾ ಬೆಂಗಳೂರು ಮಹಾನಗರಕ್ಕೋ ಸಾಗುತ್ತಿದೆ ಎಂಬ ಅನುಮಾನ ವ್ಯಕ್ತವಾಗುತ್ತಿದೆ. ಆದರೆ ಇಷ್ಟೊಂದು ದೊಡ್ಡ ಮಟ್ಟದ ಅಕ್ರಮ ನಡೆಯುತ್ತಿದ್ದರೂ ಅಧಿಕಾರಿಗಳು ಕೆಲವೇ ಪ್ರಕರಣಗಳನ್ನು ದಾಖಲಿಸುವುದನ್ನು ಬಿಟ್ಟರೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುತ್ತಿಲ್ಲ ಎಂಬ ಟೀಕೆ ಕೇಳಿಬರುತ್ತಿದೆ.

ವಕೀಲ ಮಂಡಿಕಲ್ ಪುರುಷೋತ್ತಮ್ ಮಾತನಾಡಿ, “ಅಕ್ರಮ ಮರಳು ಸಾಗಾಟ ತಡೆಯಲು ಕೇವಲ ಕಂದಾಯ ಇಲಾಖೆ ಸಾಕಾಗುವುದಿಲ್ಲ. ತಹಸೀಲ್ದಾರ್ ನೇತೃತ್ವದಲ್ಲಿ ಪೊಲೀಸ್, ಗ್ರಾಮ ಪಂಚಾಯಿತಿ ಸೇರಿದಂತೆ ವಿವಿಧ ಇಲಾಖೆಗಳ ಸಮನ್ವಯ ಸಮಿತಿ ರಚಿಸಿ ಕಾರ್ಯಾಚರಣೆ ನಡೆಸಬೇಕು” ಎಂದು ಅಭಿಪ್ರಾಯಪಟ್ಟರು.

ಗ್ರಾಮಸ್ಥರ ಸಹಕಾರವಿಲ್ಲದೆ ಮರಳು ದಂಧೆಗೆ ಕಡಿವಾಣ ಹಾಕಲು ಸಾಧ್ಯವಿಲ್ಲ ಎಂದು ಅವರು ಹೇಳಿ, “ಗ್ರಾಮಸಭೆಗಳ ಮೂಲಕ ಜನರಲ್ಲಿ ಕೆರೆಗಳ ಮಹತ್ವ ಮತ್ತು ಮರಳಿನ ನೈಸರ್ಗಿಕ ಮೌಲ್ಯದ ಬಗ್ಗೆ ಜಾಗೃತಿ ಮೂಡಿಸಬೇಕು. ಮನೆ ನಿರ್ಮಾಣದಂತಹ ಅಗತ್ಯಗಳಿಗೆ ನಿಯಮಾನುಸಾರ ಮರಳು ಪಡೆಯುವ ವ್ಯವಸ್ಥೆ ಮಾಡಿಕೊಟ್ಟರೆ ಅಕ್ರಮ ಸಾಗಾಟ ಕಡಿಮೆಯಾಗಬಹುದು” ಎಂದರು.

ಕೆರೆಗಳ ಒಡಲಿನ ನೈಸರ್ಗಿಕ ಸಂಪನ್ಮೂಲವಾಗಿರುವ ಮರಳಿನ ಅತಿಯಾದ ದೋಚಾಟದಿಂದ ಪರಿಸರ ಸಮತೋಲನ ಹದಗೆಡುವ ಅಪಾಯವಿದ್ದು, ಭೂಗರ್ಭ ಜಲಮಟ್ಟಕ್ಕೂ ಹೊಡೆತ ಬೀಳುವ ಸಾಧ್ಯತೆ ಇದೆ. ಸರ್ಕಾರ ಮತ್ತು ಸಂಬಂಧಿಸಿದ ಇಲಾಖೆಗಳು ತಕ್ಷಣ ಎಚ್ಚೆತ್ತುಕೊಂಡು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳದಿದ್ದರೆ ಮುಂದಿನ ದಿನಗಳಲ್ಲಿ ಕೆರೆಗಳ ಅಸ್ತಿತ್ವವೇ ಸಂಕಷ್ಟಕ್ಕೆ ಸಿಲುಕುವ ಭೀತಿ ವ್ಯಕ್ತವಾಗಿದೆ.

# ಬಿಟ್‌ಕಾಯಿನ್ ಆರೋಪಿಗಳು ಇಡಿ ಕಸ್ಟಡಿಗೆ

ಬೆಂಗಳೂರು

ಬಿಟ್‌ಕಾಯಿನ್ ಹಗರಣಕ್ಕೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಬಂಧಿತರಾಗಿರುವ ಹ್ಯಾಕರ್ ಶ್ರೀಕೃಷ್ಣ ರಮೇಶ್ ಅಲಿಯಾಸ್ ಶ್ರೀಕಿ, ಸುನೀಶ್ ಹೆಗಡೆ ಮತ್ತು ರಾಬಿನ್ ಖಂಡೇಲವಾಲ್ ಅವರನ್ನು ಬೆಂಗಳೂರಿನ ವಿಶೇಷ ನ್ಯಾಯಾಲಯವು ಹತ್ತು ದಿನ ಜಾರಿ ನಿರ್ದೇಶನಾಲಯದ ಕಸ್ಟಡಿಗೆ ನೀಡಿದೆ.

ಬೆಂಗಳೂರಿನ ಪ್ರಧಾನ ಸಿಟಿ ಸಿವಿಲ್ ಮತ್ತು ಸತ್ರ ನ್ಯಾಯಾಲಯದ ಉಸ್ತುವಾರಿ ನ್ಯಾಯಾಧೀಶರಾದ ಶಂಕರಪ್ಪ ನಿಂಬಣ್ಣ ಕಲ್ಕಣಿ ಅವರು ಆರೋಪಿಗಳನ್ನು ಮೇ 19ರವರೆಗೆ ಇ ಡಿ ಕಸ್ಟಡಿಗೆ ನೀಡಿದ್ದಾರೆ.

ಬಂಧಿತರನ್ನು ಇಂದು ಬೆಳಿಗ್ಗೆ ರಾಷ್ಟ್ರೀಯ ಕ್ರೀಡಾ ಗ್ರಾಮದಲ್ಲಿರುವ ನ್ಯಾಯಾಧೀಶರ ಗೃಹ ಕಚೇರಿಯಲ್ಲಿ ಹಾಜರುಪಡಿಸಲಾಗಿತ್ತು. ವಿಚಾರಣೆಯ ವೇಳೆ ಶ್ರೀಕಿ ಪರ ವಕೀಲರು ವೈದ್ಯಕೀಯ ದಾಖಲೆಗಳನ್ನು ಸಲ್ಲಿಸಿ, ಆರೋಪಿಯು ಮಾನಸಿಕ ಆರೋಗ್ಯ ಸಮಸ್ಯೆಯಿಂದ ಬಳಲುತ್ತಿದ್ದಾರೆ ಎಂದು ವಾದಿಸಿದರು. ಇದನ್ನು ಗಣನೆಗೆ ತೆಗೆದುಕೊಳ್ಳದ ನ್ಯಾಯಾಲಯವು ಎಲ್ಲಾ ಆರೋಪಿಗಳನ್ನು ಕೇಂದ್ರ ತನಿಖಾ ಸಂಸ್ಥೆಯ ಸುಪರ್ದಿಗೆ ನೀಡಿದ್ದಾರೆ.

ಕರ್ನಾಟಕ ಸರ್ಕಾರ ಇ–ಪ್ರಕ್ಯೂರ್‌ಮೆಂಟ್ ಪೋರ್ಟಲ್‌ನಿಂದ ರೂ.11.5 ಕೋಟಿ ಕದ್ದಿರುವುದು, ಭಾರತದ ಗೇಮಿಂಗ್ ವೆಬ್‌ಸೈಟ್‌ಗಳ ಹ್ಯಾಕಿಂಗ್ ಮತ್ತು ವಿದೇಶದಲ್ಲಿ ಕ್ರಿಪ್ಟೊ ಕರೆನ್ಸಿ ಬದಲಾವಣೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ಪ್ರಕರಣವನ್ನು ಇ ಡಿಯು ತನಿಖೆ ನಡೆಸುತ್ತಿದೆ.

ಇತ್ತೀಚೆಗೆ ಶ್ರೀಕಿ ಸ್ನೇಹಿತ ಎನ್ನಲಾದ ಮೊಹಮ್ಮದ್ ಹ್ಯಾರಿಸ್ ನಲಪಾಡ್ ಮನೆಯಲ್ಲಿಯೂ ಇ ಡಿ ಶೋಧ ನಡೆಸಿತ್ತು. ಯುನೋಕಾಯಿನ್ ಹ್ಯಾಕಿಂಗ್ ಮತ್ತು ಕದ್ದಿರುವ ಆರೋಪಕ್ಕೆ ಸಂಬಂಧಿಸಿದಂತೆ ಸಿಐಡಿಯು ಶ್ರೀಕಿ ಮತ್ತಿತರರ ವಿರುದ್ಧ ತನಿಖೆ ನಡೆಸಿತ್ತು.

# ‘ಮುಂದಿನ ತಿಂಗಳಿಂದ ‘ಇಂದಿರಾಕಿಟ್’ ವಿತರಣೆ ಸಿದ್ಧತೆ’

ಬೆಂಗಳೂರು

ಮುಂದಿನ ತಿಂಗಳಿಂದ “ಇಂದಿರಾ ಕಿಟ್” ವಿತರಣೆ ಕಾರ್ಯಕ್ರಮ ಆರಂಭಿಸಲು ಸರ್ಕಾರ ಸಿದ್ಧತೆ ನಡೆಸುತ್ತಿದೆ ಎಂದು ಆಹಾರ ಸಚಿವ ಕೆ.ಹೆಚ್. ಮುನಿಯಪ್ಪ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಮಾಧ್ಯಮ ಪ್ರತಿನಿಧಿಗಳನ್ನುದ್ದೇಶಿಸಿ ಮಾತನಾಡಿದ ಅವರು, ಅರ್ಹ ಕುಟುಂಬಗಳಿಗೆ ಅಗತ್ಯ ವಸ್ತುಗಳನ್ನು ಒಳಗೊಂಡ ಈ ಯೋಜನೆ ಜನಸಾಮಾನ್ಯರಿಗೆ ನೆರವಾಗಲಿದೆ ಎಂದು ಹೇಳಿದರು.

ಈ ವೇಳೆ ದೇಶಾದ್ಯಂತ ಚರ್ಚೆಯಾಗುತ್ತಿರುವ ಮತಪಟ್ಟಿ ಪರಿಷ್ಕರಣೆ ಮತ್ತು ಎಸ್‌ಐಆರ್ ಪ್ರಕ್ರಿಯೆ ಕುರಿತೂ ಸಚಿವರು ಪ್ರತಿಕ್ರಿಯಿಸಿದರು. ಮತದಾರರ ಪಟ್ಟಿಯಿಂದ ಕೆಲವು ಸಮುದಾಯಗಳ ಹೆಸರುಗಳನ್ನು ಉದ್ದೇಶಪೂರ್ವಕವಾಗಿ ಕೈಬಿಡಲಾಗುತ್ತಿದೆ ಎಂಬ ಆರೋಪಗಳ ಹಿನ್ನೆಲೆ ಕಾಂಗ್ರೆಸ್ ಪಕ್ಷ ಎಚ್ಚರಿಕೆಯಿಂದ ಕಾರ್ಯನಿರ್ವಹಿಸಲಿದೆ ಎಂದು ತಿಳಿಸಿದರು.

“ಬೂತ್ ಮಟ್ಟದಲ್ಲಿ ಬಿಎಲ್‌ಒ–1 ಹಾಗೂ ಬಿಎಲ್‌ಒ–2 ವ್ಯವಸ್ಥೆಯನ್ನು ಜವಾಬ್ದಾರಿಯಿಂದ ನಿರ್ವಹಿಸುವಂತೆ ಸೂಚಿಸಲಾಗಿದೆ. ಮತದಾರರ ಹಕ್ಕುಗಳಿಗೆ ಧಕ್ಕೆಯಾಗದಂತೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು,” ಎಂದು ಹೇಳಿದರು.



ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಅವರ ಹೇಳಿಕೆಯನ್ನು ಉಲ್ಲೇಖಿಸಿದ ಸಚಿವರು, “ಲಕ್ಷಾಂತರ ಮತಗಳನ್ನು ಪಟ್ಟಿಯಿಂದ ತೆಗೆದುಹಾಕುವ ಘಟನೆಗಳು ಪ್ರಜಾಪ್ರಭುತ್ವಕ್ಕೆ ಅಪಾಯಕಾರಿಯಾಗಿವೆ. ಹಣಬಲ, ತೋಳ್ಬಲ ಅಥವಾ ತಿರುಚಿದ ಕ್ರಮಗಳಿಂದ ಜನರ ತೀರ್ಪು ಬದಲಾಗಬಾರದು,” ಎಂದು ಆತಂಕ ವ್ಯಕ್ತಪಡಿಸಿದರು.

ಕೇರಳ ರಾಜ್ಯದ ಉದಾಹರಣೆ ನೀಡಿದ ಅವರು, “ಅಲ್ಲಿ ಶೇ.100ರಷ್ಟು ಶಿಕ್ಷಣ ಪ್ರಮಾಣ ಇರುವುದರಿಂದ ಮತದಾರರಲ್ಲಿ ಹೆಚ್ಚಿನ ಜಾಗೃತಿ ಇದೆ. ಕರ್ನಾಟಕದಲ್ಲಿಯೂ ಜನರು ಶಿಕ್ಷಣ ಮತ್ತು ಹಕ್ಕುಗಳ ಬಗ್ಗೆ ಅರಿವು ಹೊಂದಿದ್ದಾರೆ. ಸಾಮಾನ್ಯ ಕಾರ್ಮಿಕರೂ ಸಹ ಉನ್ನತ ಶಿಕ್ಷಣ ಪಡೆದಿರುವುದು ರಾಜ್ಯದ ಶಕ್ತಿಯಾಗಿದೆ,” ಎಂದು ಹೇಳಿದರು.

ರಾಜಕೀಯ ಪಾರದರ್ಶಕತೆ ಮತ್ತು ಮತದಾರರ ಹಕ್ಕುಗಳ ರಕ್ಷಣೆಗೆ ಸರ್ಕಾರ ಹಾಗೂ ಕಾಂಗ್ರೆಸ್ ಪಕ್ಷ ವಿಶೇಷ ಗಮನ ಹರಿಸಲಿದೆ ಎಂದು ಸಚಿವರು ಸ್ಪಷ್ಟಪಡಿಸಿದರು.

ನಾಳೆ ಸಭೆ: ರಾಜ್ಯ ಮಟ್ಟದ ಕರ್ನಾಟಕ ಮಾದರ ಮಹಾಸಭಾದ ಕಾರ್ಯಕಾರಿಣಿ ಸಭೆ ನಾಳೆ ನಡೆಯಲಿದ್ದು, ಸಭೆಗೆ ಅಧ್ಯಕ್ಷತೆಯನ್ನು ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಹೆಚ್.ಮುನಿಯಪ್ಪ ವಹಿಸಲಿದ್ದಾರೆ. ಸಭೆಯಲ್ಲಿ ವಿವಿಧ ಸಾಮಾಜಿಕ, ರಾಜಕೀಯ ಹಾಗೂ ಜನಪರ ವಿಚಾರಗಳ ಕುರಿತು ಚರ್ಚೆ ನಡೆಯಲಿದ್ದು, ಮುಂದಿನ ಕಾರ್ಯಕ್ರಮಗಳ ರೂಪುರೇಷೆಗಳನ್ನು ಅಂತಿಮಗೊಳಿಸಲಾಗುತ್ತದೆ ಎಂದು ತಿಳಿದುಬಂದಿದೆ.

# ಮಡೆನೂರಿನ 100 ಎಕರೆ ಅರಣ್ಯ ಭೂಮಿ ಸ್ವಾಧೀನಕ್ಕೆ ಈಶ್ವರಖಂಡೆ ಸೂಚನೆ

ಬೆಂಗಳೂರು

ಹಾಸನ ನಗರಕ್ಕೆ ಹೊಂದಿಕೊಂಡಂತೆ ಇರುವ ಶಾಂತಿಗ್ರಾಮ ಹೋಬಳಿಯ ಮಡೆನೂರಿನ ಸರ್ವೆ ನಂ. 298ರಲ್ಲಿರುವ 100 ಎಕರೆ ಅರಣ್ಯ ಭೂಮಿಯನ್ನು ಕೂಡಲೇ ವಶಕ್ಕೆ ಪಡೆದು ನೆಡುತೋಪು ಬೆಳೆಸಲು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸೂಚಿಸಿದ್ದಾರೆ.

ಬೆಂಗಳೂರಿನಲ್ಲಿಂದು ಹಿರಿಯ ಅರಣ್ಯಾಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ನಿನ್ನೆ ತಾವು ಬೇಲೂರು ಪ್ರವಾಸದ ವೇಳೆ ಹಾಸನದ ಕೃಷಿ ಸಂಶೋಧನಾ ಕೇಂದ್ರ ಮತ್ತು ಜೈವಿಕ ಇಂಧನ ಘಟಕದ ಸಮೀಪ ಇರುವ ಕೋಟ್ಯಂತರ ರೂ. ಬೆಲೆಬಾಳುವ ಭೂಮಿಯ ವೀಕ್ಷಣೆ ಮಾಡಿದ್ದು ಬೆಲೆ ಬಾಳುವ ಈ ಅರಣ್ಯ ಭೂಮಿ ಸಂರಕ್ಷಣೆಗೆ ಆದೇಶ ನೀಡಿದರು.



ನೂರು ಎಕರೆ ಭೂಮಿಯನ್ನು 2015–16ರಲ್ಲಿ ಅರಣ್ಯ ಇಲಾಖೆ ಪರವಾಗಿ ಮ್ಯುಟೇಷನ್ ಮಾಡಿ ಪಹಣಿ ಆಗಿರುತ್ತದೆ. ಆದಾಗ್ಯೂ ಇಲ್ಲಿ ಈವರೆಗೆ ಅರಣ್ಯೀಕರಣ ಮಾಡಿ ಉತ್ತಮ ಶ್ವಾಸತಾಣ ನಿರ್ಮಿಸದ ಬಗ್ಗೆ ಬೇಸರ ವ್ಯಕ್ತಪಡಿಸಿದರು.

2024ರಲ್ಲೇ ತಾವು ಸದರಿ ಜಮೀನನ್ನು ವಶಕ್ಕೆ ಪಡೆದು ಸ್ಥಳೀಯ ಪ್ರಭೇದದ ಗಿಡ ನೆಡುವಂತೆ ಸೂಚಿಸಿದ್ದರೂ ಈವರೆಗೆ ಕ್ರಮ ವಹಿಸದೆ ವಿಳಂಬ ಮಾಡಿರುವ ಬಗ್ಗೆ ವರದಿ ನೀಡಲು ಸಚಿವರು ಸೂಚಿಸಿದರು.

2015ರ ನಂತರ ಆಗಿರುವ ಎಲ್ಲ ಅರಣ್ಯಭೂಮಿ ಒತ್ತುವರಿ ತೆರವಿಗೆ ತಾವು ಹಲವು ಬಾರಿ ಸೂಚಿಸಿದ್ದರೂ ಕ್ರಮ ಏಕೆ ಆಗಿಲ್ಲ ಎಂದು ಪ್ರಶ್ನಿಸಿದ ಅವರು, ಪ್ರಸ್ತುತ ಖಾಲಿ ಇರುವ ಅರಣ್ಯ ಭೂಮಿಯನ್ನು ಕೂಡಲೇ ವಶಕ್ಕೆ ಪಡೆದು ಬೇಲಿ ಹಾಕಲು ಮತ್ತು ಒತ್ತುವರಿ ಆಗಿರುವ ಅರಣ್ಯ ಭೂಮಿ ತೆರವಿಗೆ ಕರ್ನಾಟಕ ಅರಣ್ಯ ಕಾಯಿದೆಯ ಸೆಕ್ಷನ್ 64 ಎ ಪ್ರಕ್ರಿಯೆ ನಡೆಸುವಂತೆಯೂ ನಿರ್ದೇಶನ ನೀಡಿದರು.

ಜಾಗತಿಕ ತಾಪಮಾನ ಏರಿಕೆ ಮತ್ತು ಹವಾಮಾನ ಬದಲಾವಣೆಯ ಕಾಲಘಟ್ಟದಲ್ಲಿ ನಾವು ಅನೇಕ ಪ್ರಕೃತಿ ವಿಕೋಪ ಎದುರಿಸುತ್ತಿದ್ದು, ನಗರ ಪ್ರದೇಶದ ಬಳಿ ಇರುವ ಬೆಲೆಬಾಳುವ ಅರಣ್ಯ ಭೂಮಿಯಲ್ಲಿ ಗಿಡಮರ ಬೆಳೆಸದಿದ್ದರೆ ಮುಂದಿನ ಪೀಳಿಗೆ ಉಸಿರಾಡಲೂ ಕಷ್ಟಪಡಬೇಕಾಗುತ್ತದೆ. ಪ್ರಕೃತಿ ಪರಿಸರ ಉಳಿಸಲು ರಾಜ್ಯದ ಎಲ್ಲ ನಗರ ಮತ್ತು ಪಟ್ಟಣ ಪ್ರದೇಶದ ಸಮೀಪ ಇರುವ ಅರಣ್ಯ ಭೂಮಿ ಒತ್ತುವರಿ ಆಗದಂತೆ ಕಟ್ಟೆಚ್ಚರ ವಹಿಸುವಂತೆ ಸೂಚಿಸಿದರು.

ಈ ಸಂದರ್ಭದಲ್ಲಿ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ಅರಣ್ಯ ಪಡೆ ಮುಖ್ಯಸ್ಥರಾದ ಮೀನಾಕ್ಷಿ ನೇಗಿ, ಹೆಚ್ಚುವರಿ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಜಾಗೃತದಳ ಮತ್ತು ಸಾಮಾಜಿಕ ಅರಣ್ಯ) ಮನೋಜ್ ತ್ರಿಪಾಠಿ, ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಶಿವಶಂಕರ್, ಡಿಸಿಎಫ್ ರವೀಂದ್ರ ಕುಮಾರ್ ಮತ್ತಿತರರು ಹಾಜರಿದ್ದರು.

# ಕೇಸರಿ ಕಹಳೆ

ಬೆಂಗಳೂರು

ಕೇಂದ್ರ ಸಚಿವರಾದ ನರಾಮ್ ಮೋಹನ್ ನಾಯ್ಡು, ಧರ್ಮೇಂದ್ರ ಪ್ರಧಾನ್ ಬಿಜೆಪಿ ಆಡಳಿತ ರಾಜ್ಯಗಳ ಸಿಎಂಗಳಾದ ಗುಜರಾತ್ ಮುಖ್ಯಮಂತ್ರಿ ಭೂಪೇಂದ್ರ ಪಟೇಲ್, ಆಂಧ್ರಪ್ರದೇಶ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಮತ್ತು ಉತ್ತರಾಖಂಡ ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ, ದೆಹಲಿ ಸಿಎಂ ರೇಖಾ ಗುಪ್ತಾ ಭಾಗಿಯಾಗಿದ್ದಾರೆ.

ಶುಕ್ರವಾರದಂದು ನಡೆದ ಬಿಜೆಪಿ ಸಭೆಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಸುವೇಂದು ಅಧಿಕಾರಿಯನ್ನು ಪಶ್ಚಿಮ ಬಂಗಾಳದ ಮುಂದಿನ ಮುಖ್ಯಮಂತ್ರಿಯಾಗಿ ಅಧಿಕೃತವಾಗಿ ಘೋಷಿಸಿದ್ದರು.

ರಾಜ್ಯದಲ್ಲಿ ಮೊದಲ ಬಿಜೆಪಿ ಸರ್ಕಾರದ ಪ್ರಮಾಣವಚನ ಸ್ವೀಕಾರ ಸಮಾರಂಭಕ್ಕೆ ಸಾಕ್ಷಿಯಾಗಲು ಉತ್ತರ ಬಂಗಾಳ ಮತ್ತು ಜಾರ್ಖಂಡ್‌ನಂತಹ ನೆರೆಯ ರಾಜ್ಯಗಳು ಸೇರಿದಂತೆ ಸಾವಿರಾರು ಬಿಜೆಪಿ ಬೆಂಬಲಿಗರು ಆಗಮಿಸಿದ್ದಾರೆ.

ಪ್ರಮಾಣ ವಚನ ಹಿನ್ನೆಲೆ ನಗರದ ವಿವಿಧೆಡೆ ಬಿಜೆಪಿ ಧ್ವಜಗಳು ಮತ್ತು ಕೇಸರಿ ಬ್ಯಾನರ್‌ಗಳನ್ನು ಹಿಡಿದ ಬೆಂಬಲಿಗರ ಗುಂಪುಗಳು ಕಾರ್ಯಕ್ರಮದ ಸ್ಥಳಕ್ಕೆ ಬಂದು, ಜೈ ಶ್ರೀ ರಾಮ್ ಘೋಷಣೆಗಳು ಮತ್ತು ಬಿಜೆಪಿ ನಾಯಕರ ಪರ ಘೋಷಣೆಗಳು ಕೇಳಿ ಬಂದವು.

ಕಾರ್ಯಕ್ರಮದ ವೇದಿಯಲ್ಲಿ ಪ್ರಧಾನಿ ಮೋದಿ ಅವರು ನೊಬೆಲ್ ಪ್ರಶಸ್ತಿ ಪುರಸ್ಕೃತ ರವೀಂದ್ರನಾಥ್ ಟ್ಯಾಗೋರ್ ಅವರ 165ನೇ ಜಯಂತಿ ಹಿನ್ನೆಲೆ ಅವರ ಫೋಟೋಗೆ ನಮಿಸಿದರು. ಜೊತೆಗೆ ರಾಜ್ಯದ ಹಿರಿಯ ಬಿಜೆಪಿ ಕಾರ್ಯಕರ್ತ ಮಖನ್ಲಾಲ್ ಸರ್ಕಾರ್ ಅವರ ಆಶೀರ್ವಾದ ಪಡೆದರು. ಪಶ್ಚಿಮ ಬಂಗಾಳದಲ್ಲಿ ಇತ್ತೀಚೆಗೆ ಪ್ರಕಟವಾದ ವಿಧಾನಸಭೆ ಫಲಿತಾಂಶದಲ್ಲಿ ಬಿಜೆಪಿ 207 ಸ್ಥಾನಗಳೊಂದಿಗೆ ಭಾರೀ ಬಹುಮತದೊಂದಿಗೆ ಜಯಭೇರಿ ಬಾರಿಸಿದೆ.

# ಪ್ರಮಾಣವಚನ

ಬೆಂಗಳೂರು

ಏಪ್ರಿಲ್ 23ರಂದು ನಡೆದ ವಿಧಾನಸಭೆ ಚುನಾವಣೆಯಲ್ಲಿ ಟಿವಿಕೆ 108 ಸ್ಥಾನಗಳನ್ನು ಗೆದ್ದು ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮಿದರೂ, ಬಹುಮತಕ್ಕೆ 10 ಸ್ಥಾನಗಳ ಕೊರತೆಯಿತ್ತು. ಆದರೆ ಈಗ ವಿಸಿಕೆ, ಸಿಪಿಐ, ಸಿಪಿಐ(ಎಂ) ಹಾಗೂ ಕಾಂಗ್ರೆಸ್ ಬೆಂಬಲದಿಂದ ಮೈತ್ರಿಕೂಟದ ಬಲ 120ಕ್ಕೆ ಏರಿದೆ.

ಎರಡು ಕ್ಷೇತ್ರಗಳಲ್ಲಿ ಗೆದ್ದಿರುವ ವಿಜಯ್ ಒಂದು ಸ್ಥಾನ ತ್ಯಜಿಸಬೇಕಿರುವುದರಿಂದ ಟಿವಿಕೆ ಬಲ 107ಕ್ಕೆ ಇಳಿಯಲಿದೆ. ಕಾಂಗ್ರೆಸ್‌ನ 5 ಶಾಸಕರು ಹಾಗೂ ಸಿಪಿಐ, ಸಿಪಿಐ(ಎಂ), ವಿಟಿಕೆ ಮತ್ತು ಐಯುಎಂಎಲ್ ಪಕ್ಷಗಳ ತಲಾ 2 ಶಾಸಕರು ವಿಜಯ್‌ರನ್ನು ಬೆಂಬಲಿಸಿದ್ದಾರೆ.

ಈ ನಡುವೆ ಟಿವಿಕೆಗೆ ಬೆಂಬಲ ಘೋಷಣೆ ಮಾಡಿರುವ ಬಗ್ಗೆ ಚೆನ್ನೈನಲ್ಲಿ ವಿಸಿಕೆ ಮುಖ್ಯಸ್ಥ ತೋಳ್ ತಿರುಮಾವಳವನ್ ಸ್ಪಷ್ಟನೆ ನೀಡಿದ್ದಾರೆ. ನಮ್ಮಿಂದ ವಿಜಯ್‌ಗೆ ಅಧಿಕಾರ ತಪ್ಪಿತೆಂಬ ಅಪವಾದ ಬರಬಾರದು. ಅಲ್ಲದೆ ರಾಷ್ಟ್ರಪತಿ ಆಡಳಿತ ತಪ್ಪಿಸಬೇಕಿರುವ ಕಾರಣ ವಿಜಯ್‌ಗೆ ಭೇಷರತ್ ಬೆಂಬಲ ಘೋಷಿಸಿದ್ದೇವೆ ಎಂದು ಸುದ್ದಿಗೋಷ್ಠಿ ನಡೆಸಿ ಮಾಹಿತಿ ನೀಡಿದ್ದಾರೆ.

## ಸಮಸ್ಯೆಗಳ ತ್ವರಿತ ಪರಿಹಾರಕ್ಕೆ ಸೂಚನೆ



ಬೆಂಗಳೂರು

ಸಾರಕ್ಕಿ ಕೆರೆ ಹಾಗೂ ಅದರ ಸುತ್ತಮುತ್ತಲಿನ ನಾಗರಿಕ ಸಮಸ್ಯೆಗಳ ತ್ವರಿತ ಪರಿಹಾರಕ್ಕೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಬೆಂಗಳೂರು ದಕ್ಷಿಣ ನಗರ ಪಾಲಿಕೆಯ ಆಯುಕ್ತ ಕೆ.ಎನ್.ರಮೇಶ್ ಅಧಿಕಾರಿಗಳಿಗೆ ಸ್ಪಷ್ಟ ಸೂಚನೆ ನೀಡಿದ್ದಾರೆ.

ನಿನ್ನೆ ಸಾರಕ್ಕಿ ಕೆರೆ ವ್ಯಾಪ್ತಿಯಲ್ಲಿ ದೀರ್ಘ ಪಾದಯಾತ್ರೆ ಹಾಗೂ ಸ್ಥಳ ಪರಿಶೀಲನೆ ನಡೆಸಿದ ಆಯುಕ್ತರು, ಕೆರೆಯ ಪ್ರಸ್ತುತ ಪರಿಸ್ಥಿತಿ, ಮೂಲಸೌಕರ್ಯಗಳ ಕೊರತೆ ಹಾಗೂ ಸಾರ್ವಜನಿಕರ ಅಹವಾಲುಗಳನ್ನು ಸ್ವತಃ ಪರಿಶೀಲಿಸಿದರು. ಈ ವೇಳೆ ಅವರು ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳಿಗೆ ತಕ್ಷಣ ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದರು.

ಕೆರೆಯ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಒಳಚರಂಡಿ ನೀರು ಹಿಮ್ಮುಖವಾಗಿ ಹರಿಯುತ್ತಿರುವುದು ಹಾಗೂ ಪೈಪ್‌ಲೈನ್‌ಗಳಲ್ಲಿ ಉಂಟಾಗಿರುವ ಅಡಚಣೆ ಕುರಿತು ಸಾರ್ವಜನಿಕರು ಗಮನ ಸೆಳೆದರು. ಇದಕ್ಕೆ ಪ್ರತಿಕ್ರಿಯಿಸಿದ ಆಯುಕ್ತರು, ಇಡೀ ಯುಜಿಡಿ ಜಾಲದ ತಾಂತ್ರಿಕ ಸಾಮರ್ಥ್ಯ, ಹೂಳು ತೆಗೆಯುವ ಕಾರ್ಯ ಹಾಗೂ ಎಸ್‌ಟಿಪಿ ಘಟಕಗಳ ಕಾರ್ಯಕ್ಷಮತೆಯ ಕುರಿತು ಸಮಗ್ರ ವೈಜ್ಞಾನಿಕ ಸಮೀಕ್ಷೆ ನಡೆಸಿ ತಕ್ಷಣ ವರದಿ ಸಲ್ಲಿಸಲು ಬೆಂಗಳೂರು ಜಲಮಂಡಳಿ ಅಧಿಕಾರಿಗಳಿಗೆ ಸೂಚಿಸಿದರು.

ಕೆರೆಯ ಆವರಣದಲ್ಲಿ ದೀರ್ಘಕಾಲದಿಂದ ಬಾಕಿಯಿರುವ ಸಾರ್ವಜನಿಕ ಶೌಚಾಲಯ ಕಾಮಗಾರಿಯನ್ನು ಗಂಭೀರವಾಗಿ ಪರಿಗಣಿಸಿದ ಆಯುಕ್ತರು, ಸ್ಥಳದಲ್ಲೇ ಗುತ್ತಿಗೆದಾರರನ್ನು ತರಾಟೆಗೆ ತೆಗೆದುಕೊಂಡರು. ನೀರಿನ ಸಂಪರ್ಕದ ಕಾರಣ ನೀಡಿ ವಿಳಂಬ ಮಾಡುತ್ತಿರುವುದನ್ನು ಸಹಿಸಲಾಗುವುದಿಲ್ಲ ಎಂದು ಸ್ಪಷ್ಟಪಡಿಸಿ, ತಕ್ಷಣವೇ ನೀರಿನ ಸಂಪರ್ಕ ಕಲ್ಪಿಸಿ ಶೌಚಾಲಯವನ್ನು ಸಾರ್ವಜನಿಕ ಬಳಕೆಗೆ ಮುಕ್ತಗೊಳಿಸುವಂತೆ ಆದೇಶಿಸಿದರು.

ಅಷ್ಟಲಕ್ಷ್ಮಿ ಲೇಔಟ್ ಹಾಗೂ ಕೆರೆಯ ಬದು ಪ್ರದೇಶಗಳಲ್ಲಿ ಅನಿಯಂತ್ರಿತವಾಗಿ ಕಸ ಸುರಿಯುತ್ತಿರುವುದನ್ನು ಗಮನಿಸಿದ ಅವರು, ಕಸ ವಿಲೇವಾರಿ ಗುತ್ತಿಗೆದಾರರ ವಿರುದ್ಧ ದಂಡಾತ್ಮಕ ಕ್ರಮ ಕೈಗೊಳ್ಳಲು ಸೂಚಿಸಿದರು.

ಜೊತೆಗೆ ಕೆರೆ ಪ್ರದೇಶದಲ್ಲಿ ಸಂಗ್ರಹವಾಗಿರುವ ಕಟ್ಟಡ ತ್ಯಾಜ್ಯ ಹಾಗೂ ಹಳೆಯ ಕಾಂಕ್ರೀಟ್ ಸ್ಲ್ಯಾಬ್‌ಗಳನ್ನು ತಕ್ಷಣ ತೆರವುಗೊಳಿಸುವಂತೆ ಪಾಲಿಕೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಎಲಿಟಾ ಅಪಾರ್ಟ್‌ಮೆಂಟ್ ಬಳಿ ನಿಂತಿರುವ ನೀರಿನ ಮೂಲ ಹಾಗೂ ಅಲ್ಲಿನ ಹರಿವಿನ ಬಗ್ಗೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ನಿಯಮಗಳ ಪಾಲನೆ ನಡೆಯುತ್ತಿದೆಯೇ ಎಂಬುದನ್ನು ಪರಿಶೀಲಿಸಲು ಆಯುಕ್ತರು ಸೂಚಿಸಿದರು. ಅಲ್ಲದೆ, ಕೆರೆ ಆವರಣದಲ್ಲಿರುವ ವಿದ್ಯುತ್ ಟ್ರಾನ್ಸ್‌ಫಾರ್ಮರ್‌ಗಳ ಮಾಲೀಕತ್ವ ಹಾಗೂ ಸುರಕ್ಷತಾ ಕ್ರಮಗಳ ಕುರಿತು ವರದಿ ಸಲ್ಲಿಸಲು ಬೆಸ್ಕಾಂ ಅಧಿಕಾರಿಗಳಿಗೆ ಆದೇಶ ನೀಡಿದರು.

ಪಾದಯಾತ್ರೆಯ ವೇಳೆ ಸಾರಕ್ಕಿ ವಾಕರ್ಸ್ ಗ್ರೂಪ್‌ನ ಶ್ರೀ ಉಮೇಶ್ ಗೌಡ ಸೇರಿದಂತೆ ನೂರಾರು ಸ್ಥಳೀಯ ನಿವಾಸಿಗಳು ಭಾಗವಹಿಸಿ ತಮ್ಮ ಸಮಸ್ಯೆಗಳನ್ನು ಆಯುಕ್ತರ ಮುಂದೆ ಮಂಡಿಸಿದರು. ಎಲ್ಲಾ ದೂರುಗಳನ್ನು ದಾಖಲಿಸಿಕೊಂಡು ತಕ್ಷಣ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಆಯುಕ್ತರು ಸ್ಪಷ್ಟ ಸೂಚನೆ ನೀಡಿದರು. ಈ ಪರಿಶೀಲನಾ ಸಂದರ್ಭದಲ್ಲಿ ಕಾರ್ಯಪಾಲಕ ಅಭಿಯಂತರರಾದ ರವಿ, ದೀಪಶ್ರೀ ಸೇರಿದಂತೆ ಹಲವು ಇಲಾಖಾ ಅಧಿಕಾರಿಗಳು ಉಪಸ್ಥಿತರಿದ್ದರು.

## ಹೋಟೆಲ್‌ಗೆ ಬೆಂಕಿ: ಓರ್ವ ಸಾವು

ಬೆಂಗಳೂರು

ನಾಗರಬಾವಿಯ ರಿಂಗ್ ರೋಡ್ ಬಳಿಯ ಸರ್ವೀಸ್ ರೋಡ್‌ನಲ್ಲಿರುವ ದುರ್ಗಾಶ್ರೀ ಹೋಟೆಲ್‌ಗೆ ಬೆಂಕಿ ತಗುಲಿ, ಓರ್ವ ಸಿಬ್ಬಂದಿ ಸಾವನ್ನಪ್ಪಿದ್ದು, ನಾಲ್ವರ ಸ್ಥಿತಿ ಗಂಭೀರವಾಗಿದೆ.

ಮೃತ ಸಿಬ್ಬಂದಿಯನ್ನು ರಾಜ್‌ಕುಮಾರ್ ಎಂದು ಗುರುತಿಸಲಾಗಿದ್ದು, ನಾಲ್ವರು ಸಿಬ್ಬಂದಿ ಗಂಭೀರವಾಗಿ ಗಾಯಗೊಂಡಿದ್ದಾರೆ ಎಂದು ತಿಳಿದುಬಂದಿದೆ.

ತಡರಾತ್ರಿ ಹೋಟೆಲ್‌ನಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಹೋಟೆಲ್‌ನಲ್ಲಿ ಕೆಲಸ ಮಾಡುವ ಎಂಟು ಜನ ಸಿಬ್ಬಂದಿ ಅದೇ ಹೋಟೆಲ್‌ನ ಮೇಲಿನ ಫ್ಲೋರ್‌ನಲ್ಲಿ ವಾಸವಿದ್ರು. ಬೆಂಕಿಯ ಕೆನ್ನಾಲಿಗೆ ಮೇಲಿನ ಮಹಡಿಗೂ ಹಬ್ಬಿದ್ದು, ತಕ್ಷಣ ಅಲ್ಲಿದ್ದ ಸಿಬ್ಬಂದಿ ಕೆಳಗೆ ಇಳಿಯೋಕೆ ಯತ್ನಿಸಿದ್ದಾರೆ. ಅಷ್ಟರಲ್ಲಿ ಬೆಂಕಿ ಸಂಪೂರ್ಣ ಅವರಿಸಿಕೊಂಡು ಓರ್ವ ಸಿಬ್ಬಂದಿ ಮೃತಪಟ್ಟಿದ್ದಾರೆ.

ಇನ್ನುಳಿದಂತೆ ನಾಲ್ವರು ಗಂಭೀರವಾಗಿ ಗಾಯಗೊಂಡಿದ್ದು, ಮೂವರು ಪ್ರಾಣಾಪಾಯದಿಂದ ಪಾರಾಗಿದ್ದಾರೆ.

12/05/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಗುಡಿಬಂಡೆಯಲ್ಲಿ ಮೂಕಪ್ರಾಣಿಗಳಿಗೆ ಹಣ್ಣು-ಹಂಪಲು ವಿತರಣೆ

ಗುಡಿಬಂಡೆ

ಬೇಸಿಗೆಯ ಬಿಸಿಲಿನಿಂದ ಕಂಗೆಟ್ಟಿರುವ ಮೂಕಪ್ರಾಣಿಗಳ ಹಸಿವು ನೀಗಿಸುವ ಉದ್ದೇಶದಿಂದ, ಗುಡಿಬಂಡೆ ಹೊರವಲಯದ ಕಣಿವೆಯಲ್ಲಿ ಪರಿಸರ ವೇದಿಕೆ ಹಾಗೂ ಬೆಂಗಳೂರು ಮಹಿಳಾ ಮಂಡಳಿಯ ಜಂಟಿ ಆಶ್ರಯದಲ್ಲಿ ಕೋತಿಗಳಿಗೆ ಬನ್ನು ಮತ್ತು ಬಾಳೆಹಣ್ಣುಗಳನ್ನು ವಿತರಿಸಲಾಯಿತು.

ಈ ವೇಳೆ ಮಾತನಾಡಿದ ಜಿಲ್ಲಾ ಪರಿಸರ ವೇದಿಕೆ ಅಧ್ಯಕ್ಷ ಡಾ. ಗುಂಪು ಮರದ ಆನಂದ್, ಗುಡಿಬಂಡೆಯಲ್ಲಿ ಬೇಸಿಗೆಯ ಬಿಸಿಲಿನ ಝಳ ಹೆಚ್ಚಾಗಿರುವುದರಿಂದ ಪ್ರಾಣಿ-ಪಕ್ಷಿಗಳಿಗೆ ತೀವ್ರವಾದ ಆಹಾರ ಮತ್ತು ನೀರಿನ ಕೊರತೆ ಎದುರಾಗಿದೆ ಎಂದು ಕಳವಳ ವ್ಯಕ್ತಪಡಿಸಿದರು. ಬಿಸಿಲಿನ ತಾಪಕ್ಕೆ ನಲುಗಿ ಮೂಕಪ್ರಾಣಿಗಳು ಪ್ರಾಣ ಕಳೆದುಕೊಳ್ಳುತ್ತಿವೆ. ಆದ್ದರಿಂದ ಸಾರ್ವಜನಿಕರು ಪ್ರಾಣಿಗಳ ಮೇಲೆ ದಯೆ ತೋರಬೇಕು. ಪ್ರತಿಯೊಬ್ಬರೂ ತಮ್ಮ ಮನೆಯ ಮಹಡಿಯ ಮೇಲೆ ಮಣ್ಣಿನ ಗಡಿಗೆಯಲ್ಲಿ ನೀರು ಮತ್ತು ಅಕ್ಕಿಯನ್ನು ಇಡುವ ಮೂಲಕ ಅವುಗಳ ಜೀವ ಉಳಿಸಲು ಮುಂದಾಗಬೇಕು. ಹೆಚ್ಚೆಚ್ಚು ಗಿಡಮರಗಳನ್ನು ಬೆಳೆಸಿ ಪ್ರಾಣಿ-ಪಕ್ಷಿಗಳಿಗೆ ಆಶ್ರಯ ನೀಡಿದಾಗ ಮಾತ್ರ ನಮ್ಮ ಬದುಕು ಸಾರ್ಥಕವಾಗುತ್ತದೆ ಎಂದು ಕರೆ ನೀಡಿದರು.

ಮಹಿಳಾ ಮಂಡಳಿಯ ಅಧ್ಯಕ್ಷರಾದ ರತ್ನಮ್ಮ ಮಾತನಾಡಿ, ಪ್ರತಿಯೊಬ್ಬರೂ ದಯೆ, ಕರುಣೆಯಂತಹ ಸದ್ಗುಣಗಳನ್ನು ಮೈಗೂಡಿಸಿಕೊಳ್ಳಬೇಕು. ಮೂಕ ಪ್ರಾಣಿ-ಪಕ್ಷಿಗಳನ್ನು ರಕ್ಷಿಸಿ, ಅವುಗಳಿಗೆ ಸಾಧ್ಯವಾದಷ್ಟು ಆಹಾರ ಹಾಗೂ ನೀರು ಒದಗಿಸಿದರೆ ನಮಗೆ ಪುಣ್ಯ ಲಭಿಸುತ್ತದೆ ಮತ್ತು ಜೀವನಕ್ಕೆ ಒಂದು ಅರ್ಥ ಸಿಗುತ್ತದೆ ಎಂದು ತಿಳಿಸಿದರು.

ಪರಿಸರ ವೇದಿಕೆಯ ನಿತಿನ್ ಸಿಂಗ್ ಅವರು ಮಾತನಾಡಿ, ಪರಿಸರ ವೇದಿಕೆ ವತಿಯಿಂದ ಪ್ರತಿ ವರ್ಷ ಗುಡಿಬಂಡೆಯಲ್ಲಿ ಹತ್ತು-ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದ್ದು, ಅದರ ಭಾಗವಾಗಿ ಇಂದು ಪ್ರಾಣಿ-ಪಕ್ಷಿಗಳಿಗೆ ನೀರು ಮತ್ತು ಆಹಾರ ಒದಗಿಸುವ ಈ ಕಾರ್ಯವನ್ನು ಮಾಡಿದ್ದೇವೆ. ಮನುಷ್ಯರಾಗಿ ಹುಟ್ಟಿದ ಮೇಲೆ ನಮ್ಮಲ್ಲಿ ಮೂಕಪ್ರಾಣಿಗಳ ಬಗ್ಗೆ ಕರುಣೆ ಇರಬೇಕು ಮತ್ತು ಅವುಗಳ ಹಸಿವು ನೀಗಿಸುವುದು ನಮ್ಮ ಆದ್ಯ ಕರ್ತವ್ಯವಾಗಬೇಕು ಎಂದು ಹೇಳಿದರು.

ಈ ಅರ್ಥಪೂರ್ಣ ಕಾರ್ಯಕ್ರಮದಲ್ಲಿ ಬೆಂಗಳೂರು ಮಹಿಳಾ ಮಂಡಳಿಯ ಕಾರ್ಯದರ್ಶಿ ಮಂಜುಳಾ ಸೇರಿದಂತೆ ಹಲವರು ಇದ್ದರು.

# ಅಭಿಮಾನೋತ್ಸವಕ್ಕೆ ಭಾರೀ ಸಂಖ್ಯೆಯಲ್ಲಿ ಹೊರಟ ಜನತೆ

ಬಂಗಾರಪೇಟೆ

ರಾಜ್ಯ ರಾಜಕೀಯದಲ್ಲಿ ಹಿರಿಯ ನಾಯಕ ಬಿ.ಎಸ್.ಯಡಿಯೂರಪ್ಪ ಅವರ ಐವತ್ತು ವರ್ಷಗಳ ರಾಜಕೀಯ ಸಾಧನೆ ಹಿನ್ನೆಲೆ ನಡೆದ ಸಮಾವೇಶಕ್ಕೆ ಕೋಲಾರ ಜಿಲ್ಲೆಯ ಬಂಗಾರಪೇಟೆ ಬಿಜೆಪಿ ಕಾರ್ಯಕರ್ತರು ಭಾರೀ ಸಂಖ್ಯೆಯಲ್ಲಿ ಭಾಗವಹಿಸಿರುವುದು ಸ್ಥಳೀಯ ರಾಜಕೀಯ ವಲಯದಲ್ಲಿ ಗಮನ ಸೆಳೆದಿದೆ. ಆದರೆ ಈ ಸಮಾವೇಶವು ಕೇವಲ ರಾಜಕೀಯ ಕಾರ್ಯಕ್ರಮವಾಗಿಯೇ ಉಳಿಯದೆ, ಬಂಗಾರಪೇಟೆ ಬಿಜೆಪಿ ಘಟಕದ ಒಳಗಿನ ಬಣ ರಾಜಕೀಯವನ್ನು ಬಹಿರಂಗಪಡಿಸಿದ ವೇದಿಕೆಯಾಗಿ ಮಾರ್ಪಟ್ಟಿದೆ.

ಬಂಗಾರಪೇಟೆಯಲ್ಲಿ ಬಿಜೆಪಿ ಪಕ್ಷವು ಹಲವು ವರ್ಷಗಳಿಂದ ವ್ಯಕ್ತಿನಿಷ್ಠ ರಾಜಕೀಯ ಹಾಗೂ ಸ್ಥಳೀಯ ನಾಯಕತ್ವದ ಪ್ರಭಾವದ ಆಧಾರದ ಮೇಲೆ ಬೆಳೆಯುತ್ತಾ ಬಂದಿದೆ. ಮುಂದಿನ ವಿಧಾನಸಭಾ ಚುನಾವಣೆಯ ಲೆಕ್ಕಾಚಾರ, ಪಕ್ಷದೊಳಗಿನ ಸ್ಥಾನಮಾನ ಹಾಗೂ ಪ್ರಭಾವ ವಿಸ್ತರಣೆಯ ಉದ್ದೇಶದಿಂದ ವಿವಿಧ ಬಣಗಳು ತಮ್ಮ ಶಕ್ತಿಯನ್ನು ಪ್ರದರ್ಶಿಸುವ ಪ್ರಯತ್ನ ಮಾಡುತ್ತಿವೆ. ಇದೇ ಚಿತ್ರ ಯಡಿಯೂರಪ್ಪ ಸಮಾವೇಶದ ಸಂದರ್ಭದಲ್ಲಿಯೂ ಸ್ಪಷ್ಟವಾಗಿ ಗೋಚರಿಸಿದೆ.

ಮಾಜಿ ಸಂಸದ ಎಸ್. ಮುನಿಸ್ವಾಮಿ ಅವರ ಬೆಂಬಲಿಗರು ಪ್ರತ್ಯೇಕವಾಗಿ ವಾಹನಗಳ ಮೂಲಕ ಕಾರ್ಯಕರ್ತರನ್ನು ಸಮಾವೇಶಕ್ಕೆ ಕರೆದೊಯ್ದಿದ್ದು, ಈ ತಂಡವು ಕಪಾಲಿ ಶಂಕರ್ ನೇತೃತ್ವದಲ್ಲಿ ಜೂನಿಯರ್ ಕಾಲೇಜು ಸಮೀಪ ಒಂದಾಗಿ ಸೇರಿ ಪ್ರಯಾಣ ಆರಂಭಿಸಿದೆ. ಮತ್ತೊಂದೆಡೆ ಮಾಜಿ ಶಾಸಕ ಬಿ.ಪಿ. ವೆಂಕಟಮುನಿಯಪ್ಪ ಅವರ ಪುತ್ರ ಬಿ.ವಿ. ಮಹೇಶ್ ನೇತೃತ್ವದಲ್ಲಿ ಬಸ್ ನಿಲ್ದಾಣ ಸಮೀಪದ ಅವರ ಸ್ವಂತ ಪೆಟ್ರೋಲ್ ಬಂಕ್‌ನಲ್ಲಿ ಕಾರ್ಯಕರ್ತರು ಜಮಾಗೊಂಡು ಅಲ್ಲಿಂದ ಸಮಾವೇಶಕ್ಕೆ ತೆರಳಿದ್ದಾರೆ. ಒಂದೇ ಪಕ್ಷದೊಳಗೆ ಪ್ರತ್ಯೇಕ ಶಕ್ತಿಪ್ರದರ್ಶನ ನಡೆದಿರುವುದು ಸ್ಥಳೀಯ ರಾಜಕೀಯ ವಲಯದಲ್ಲಿ ಚರ್ಚೆಗೆ ಕಾರಣವಾಗಿದೆ.

ರಾಜಕೀಯ ವಿಶ್ಲೇಷಕರ ಪ್ರಕಾರ ಈ ರೀತಿಯ ಪ್ರತ್ಯೇಕ ಶಕ್ತಿ ಪ್ರದರ್ಶನಗಳು ಮುಂದಿನ ದಿನಗಳಲ್ಲಿ ಬಂಗಾರಪೇಟೆ ಬಿಜೆಪಿ ಸಂಘಟನೆಯಲ್ಲಿ ನಾಯಕತ್ವ ಪೈಪೋಟಿ ಮತ್ತಷ್ಟು ತೀವ್ರವಾಗುವ ಸೂಚನೆ ನೀಡುತ್ತಿವೆ. ವಿಶೇಷವಾಗಿ ಯುವ ಮುಖಂಡರು ಮತ್ತು ಹಳೆಯ ಕಾರ್ಯಕರ್ತರ ನಡುವೆ ಪ್ರಭಾವದ ಹೋರಾಟ ನಿಧಾನವಾಗಿ ಸ್ಪಷ್ಟವಾಗುತ್ತಿದೆ. ಜಿಲ್ಲಾ ಹಾಗೂ ತಾಲೂಕು ಮಟ್ಟದ ಹುದ್ದೆಗಳ ಹಂಚಿಕೆ, ಮುಂದಿನ ಸ್ಥಳೀಯ ಸಂಸ್ಥೆ ಚುನಾವಣೆಗಳು ಹಾಗೂ ವಿಧಾನಸಭಾ ಟಿಕೆಟ್ ಲೆಕ್ಕಾಚಾರಗಳು ಈ ಬಣ ರಾಜಕೀಯಕ್ಕೆ ಪ್ರಮುಖ ಕಾರಣಗಳಾಗಿ ಕಾಣಿಸುತ್ತಿವೆ.

ಒಂದು ಬಣ ಎಸ್. ಮುನಿಸ್ವಾಮಿ ಅವರ ಬೆಂಬಲದೊಂದಿಗೆ ತನ್ನ ರಾಜಕೀಯ ಪ್ರಾಬಲ್ಯವನ್ನು ಬಲಪಡಿಸಲು ಮುಂದಾಗಿದ್ದರೆ, ಮತ್ತೊಂದು ಬಣ ಬಿ.ವಿ. ಮಹೇಶ್ ಸೇರಿದಂತೆ ಸ್ಥಳೀಯ ಮುಖಂಡರ ಮೂಲಕ ತನ್ನದೇ ಪ್ರಭಾವ ವಲಯವನ್ನು ನಿರ್ಮಿಸಲು ಪ್ರಯತ್ನಿಸುತ್ತಿದೆ. ಸಮಾವೇಶಕ್ಕೆ ಪ್ರತ್ಯೇಕ ವಾಹನ ವ್ಯವಸ್ಥೆ, ಪ್ರತ್ಯೇಕ ಘೋಷಣೆಗಳು ಹಾಗೂ ನಾಯಕತ್ವ ಪ್ರದರ್ಶನಗಳು ಕಾರ್ಯಕರ್ತರಲ್ಲಿ ಪಕ್ಷದೊಳಗಿನ ಸ್ಪರ್ಧಾತ್ಮಕ ಮನೋಭಾವವನ್ನು ಹೊರಹಾಕಿವೆ.

ಪಕ್ಷದ ರಾಜ್ಯ ನಾಯಕತ್ವವು ಬಂಗಾರಪೇಟೆಯಂತಹ ಕ್ಷೇತ್ರಗಳಲ್ಲಿ ಸಂಘಟನಾ ಏಕತೆ ಕಾಪಾಡಿಕೊಳ್ಳುವ ಅಗತ್ಯವಿದೆ ಎಂಬ ಅಭಿಪ್ರಾಯವೂ ಹಿರಿಯ ವಲಯದಲ್ಲಿ ಕೇಳಿಬರುತ್ತಿದೆ. ಪಕ್ಷ ತನ್ನ ನೆಲೆಯನ್ನು ಮತ್ತಷ್ಟು ಬಲಪಡಿಸಲು ಪ್ರಯತ್ನಿಸುತ್ತಿರುವ ಸಂದರ್ಭದಲ್ಲಿ ಒಳಬಣ ಸಂಘರ್ಷ ನಿಯಂತ್ರಣದಲ್ಲಿರದಿದ್ದರೆ ಅದು ಮುಂದಿನ ಚುನಾವಣಾ ಫಲಿತಾಂಶಗಳ ಮೇಲೂ ಪರಿಣಾಮ ಬೀರುವ ಸಾಧ್ಯತೆಯನ್ನು ತಳ್ಳಿ ಹಾಕಲಾಗುವುದಿಲ್ಲ.

ಯಡಿಯೂರಪ್ಪ ಅವರ ಐವತ್ತು ವರ್ಷದ ರಾಜಕೀಯ ಸಾಧನೆ ಸಮಾವೇಶವು ಕಾರ್ಯಕರ್ತರಲ್ಲಿ ಉತ್ಸಾಹ ಮೂಡಿಸಿದರೂ ಅದರ ಹಿನ್ನೆಲೆಯಲ್ಲಿದ್ದ ಬಣ ರಾಜಕೀಯ ಮತ್ತೆ ಮುನ್ನೆಲೆಗೆ ಬಂದಿದೆ. ಮುಂದಿನ ದಿನಗಳಲ್ಲಿ ಈ ಬಣಗಳು ಹೊಂದಾಣಿಕೆ ಸಾಧಿಸುತ್ತವೆಯೇ ಅಥವಾ ಸ್ಪರ್ಧಾತ್ಮಕ ರಾಜಕೀಯ ಇನ್ನಷ್ಟು ತೀವ್ರವಾಗುತ್ತದೆಯೇ ಎಂಬುದು ಸ್ಥಳೀಯ ರಾಜಕೀಯದ ಪ್ರಮುಖ ಕುತೂಹಲವಾಗಿದೆ.

ಒಟ್ಟಿನಲ್ಲಿ, ಎರಡು ಬಣಗಳು ಪ್ರತ್ಯೇಕವಾಗಿ ತೆರಳಿದರೂ ಕೂಡ ಒಂದೇ ವೇದಿಕೆಯಲ್ಲಿ ಕಾಣಿಸಿಕೊಂಡಿರುವುದು ಬಂಗಾರಪೇಟೆ ಬಿಜೆಪಿ ಕಾರ್ಯಕರ್ತರಲ್ಲಿ ಕೆಲ ಮಟ್ಟದ ಸಮಾಧಾನವನ್ನು ತಂದಿದೆ. ಈ ಸಂದರ್ಭದಲ್ಲಿ ಕಪಾಲಿ ನೇತೃತ್ವದಲ್ಲಿ ಹೊಸರಾಯಪ್ಪ, ಜೀವನ್ ರೆಡ್ಡಿ, ಕಾರಮಂಗಲ ಗಂಗಾಧರ್, ಶ್ರೀನಿವಾಸ್ ಸೇರಿದಂತೆ ಹಲವು ಮುಖಂಡರು ಹಾಗೂ ಬಿ.ವಿ. ಮಹೇಶ್ ನೇತೃತ್ವದಲ್ಲಿ ಮಾರ್ಕಂಡೇಗೌಡ, ಸಂಪಂಗಿರೆಡ್ಡಿ, ಸೀತಾರಾಮಪ್ಪ, ಹುಣಸಿನಹಳ್ಳಿ ಶ್ರೀನಿವಾಸ್, ನಾಗೇಶ್ ಸೇರಿದಂತೆ ಇತರರು ಉಪಸ್ಥಿತರಿದ್ದರು.



# ವೈದ್ಯರ ಸೇವೆಗೆ ಅಡ್ಡಿ ಆರೋಪ




ಮಧುಗಿರಿ

ಗ್ರಾಮೀಣ ಪ್ರದೇಶಗಳಲ್ಲಿ ವೈದ್ಯರು ಸೇವೆ ಸಲ್ಲಿಸುವುದು ಈಗ ಅಪರೂಪವಾಗುತ್ತಿರುವ ಸಂದರ್ಭದಲ್ಲಿ ಕೊಡಿಗೇನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯ ಡಾ. ದರ್ಶನ್ ಮಾರೇಗೌಡ ಅವರು ಪ್ರಾಮಾಣಿಕವಾಗಿ ಸೇವೆ ಸಲ್ಲಿಸುತ್ತಿದ್ದರೂ, ಕೆಲವರು ಸಂಘಟನೆಗಳ ಹೆಸರಿನಲ್ಲಿ ವಿಡಿಯೋ ಮಾಡಿ ಕರ್ತವ್ಯಕ್ಕೆ ಅಡ್ಡಿಪಡಿಸುತ್ತಿದ್ದಾರೆ ಎಂದು ಮೈಲಾರ ಲಿಂಗೇಶ್ವರ ಕುರಿ ಸಂಘದ ಅಧ್ಯಕ್ಷ ನಾಗರೆಡ್ಡಿ ಆರೋಪಿಸಿದ್ದಾರೆ.

ಕೊಡಿಗೇನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯರ ವಿರುದ್ಧ ಸಾಮಾಜಿಕ ಜಾಲತಾಣದಲ್ಲಿ ಅಪಪ್ರಚಾರ ನಡೆಯುತ್ತಿದೆ ಎಂದು ಆರೋಪಿಸಿ ಗ್ರಾಮಸ್ಥರು ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ಸುಮಾರು ಒಂದು ವರ್ಷ ಈ ಕೇಂದ್ರದಲ್ಲಿ ವೈದ್ಯರು ಬರಲು ಹೆದರುವ ಸ್ಥಿತಿ ಇತ್ತು. ಆದರೆ ಶಾಸಕ ಕೆ. ಎನ್. ರಾಜಣ್ಣ ಹಾಗೂ ಆರೋಗ್ಯ ಇಲಾಖೆ ಅಧಿಕಾರಿಗಳ ಮಧ್ಯಸ್ಥಿಕೆಯಿಂದ ಉತ್ತಮ ವೈದ್ಯರನ್ನು ನೇಮಿಸಲಾಗಿದೆ ಎಂದು ಹೇಳಿದರು. ಆದರೆ ಕೆಲವರು ಹೊರಗಿನಿಂದ ಬಂದು ಅನಾವಶ್ಯಕವಾಗಿ ವಿಡಿಯೋ ಮಾಡುವುದು, ಪ್ರಶ್ನೆ ಮಾಡಿ ಕರ್ತವ್ಯಕ್ಕೆ ಅಡ್ಡಿಪಡಿಸುವುದು ಸರಿಯಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕರ್ನಾಟಕ ರಕ್ಷಣಾ ವೇದಿಕೆ ತಾಲೂಕು ಅಧ್ಯಕ್ಷ ಶಿವಕುಮಾರ್ ಮಾತನಾಡಿ, ಸರ್ಕಾರಿ ಆಸ್ಪತ್ರೆಗಳಲ್ಲಿ ಕೆಲವು ಔಷಧಿಗಳ ಕೊರತೆ ಸಾಮಾನ್ಯ ಸಮಸ್ಯೆಯಾಗಿದೆ. ಇದನ್ನು ತಾಲೂಕು ಮತ್ತು ಜಿಲ್ಲಾ ಆರೋಗ್ಯ ಅಧಿಕಾರಿಗಳೊಂದಿಗೆ ಚರ್ಚಿಸಬೇಕಾದ ಬದಲು ವೈದ್ಯರನ್ನು ವಿಡಿಯೋ ಮಾಡಿ ಬೆದರಿಸುವುದು, ಹಣಕ್ಕಾಗಿ ಪರೋಕ್ಷವಾಗಿ ಒತ್ತಡ ಹೇರುವಂತಹ ಘಟನೆಗಳು ನಡೆಯುತ್ತಿವೆ ಎಂದು ಆರೋಪಿಸಿದರು. ಇಂತಹವರ ವಿರುದ್ಧ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದರು.

ಹೊರರೋಗಿ ಶಿಲ್ಪ ಮಾತನಾಡಿ, ತಮ್ಮ ಆರೋಗ್ಯ ಗಂಭೀರ ಸ್ಥಿತಿಯಲ್ಲಿದ್ದಾಗ ಈ ಆಸ್ಪತ್ರೆಯಲ್ಲಿ ಒಂದು ಪೈಸೆಯೂ ಪಡೆಯದೆ ಚಿಕಿತ್ಸೆ ನೀಡಲಾಗಿದೆ. ಕೆಲವರು ವೈದ್ಯರ ವಿರುದ್ಧ ಪಿತೂರಿ ಮಾಡುತ್ತಿರುವುದು ಸರಿಯಲ್ಲ. ಗ್ರಾಮೀಣ ಭಾಗದಲ್ಲಿ ಇಂತಹ ವೈದ್ಯರನ್ನು ಕಳೆದುಕೊಂಡರೆ ಜನರಿಗೆ ಚಿಕಿತ್ಸೆ ಸಿಗುವುದು ಕಷ್ಟವಾಗುತ್ತದೆ ಎಂದು ಹೇಳಿದರು. ಜಿಲ್ಲಾಧಿಕಾರಿಗಳು ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದರು.

ಗ್ರಾಮಸ್ಥರು ಮಾತನಾಡಿ, ಕೊಡಿಗೇನಹಳ್ಳಿ ಸ್ಥಳೀಯ ನಿವಾಸಿಗಳು ಯಾರೂ ವೈದ್ಯರ ವಿರುದ್ಧ ಅಸಮಾಧಾನ ವ್ಯಕ್ತಪಡಿಸುತ್ತಿಲ್ಲ. ಆದರೆ ಹೊರಗಿನಿಂದ ಬಂದು ಕೆಲವರು ತಮ್ಮನ್ನು ನಾಯಕರು ಎಂದು ಹೇಳಿಕೊಂಡು ವಿಡಿಯೋ ಮಾಡಿ ಬೆದರಿಸುವುದು, ಅನಾವಶ್ಯಕ ಪ್ರಶ್ನೆ ಕೇಳುವುದು ಸರಿಯಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು. ಔಷಧಿಗಳ ಕೊರತೆ ಬಗ್ಗೆ ವೈದ್ಯರನ್ನು ಪ್ರಶ್ನಿಸುವ ಬದಲು ಆರೋಗ್ಯ ಇಲಾಖೆಯ ಮೇಲಾಧಿಕಾರಿಗಳನ್ನು ಪ್ರಶ್ನಿಸಬೇಕು ಎಂದು ಹೇಳಿದರು. ಈ ವೇಳೆ ಗ್ರಾಪಂ ಮಾಜಿ ಉಪಾಧ್ಯಕ್ಷ ರಾಜೇಶ್, ಮುಖಂಡರಾದ ಮಕ್ತಿಯಾರ್, ವಿಶೇಷಚೇತನರ ಮುಖಂಡ ಹನುಮಂತರಾಜು, ದಲಿತ ಮುಖಂಡರಾದ ಗಂಗಾಧರ್, ಅಶ್ವತ್ಥನಾರಾಯಣ, ಬಸವರಾಜು ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಹರ್ಡಿಕರ್ 137ನೇ ಜನ್ಮ ದಿನಾಚರಣೆ



ದೊಡ್ಡಬಳ್ಳಾಪುರ

ಭಾರತ ಸೇವಾದಳ ಜಿಲ್ಲಾ ಘಟಕ ಹಾಗೂ ತಾಲೂಕು ಘಟಕದ ವತಿಯಿಂದ ಭಾರತ ಸೇವಾದಳ ಸಂಸ್ಥಾಪಕ, ಸ್ವಾತಂತ್ರ್ಯ ಹೋರಾಟಗಾರ ಡಾ. ನಾ. ಸೂ. ಹರ್ಡಿಕರ್ ಅವರ 137ನೇ ಜನ್ಮದಿನಾಚರಣೆಯನ್ನು ನಗರದ ಬಸವೇಶ್ವರ ವೃತ್ತದಲ್ಲಿ ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಭಾರತ ಸೇವಾದಳ ಜಿಲ್ಲಾ ಅಧ್ಯಕ್ಷ ಜಿ. ಲಕ್ಷ್ಮೀಪತಿ ಮಾತನಾಡಿ, ನಾ. ಸೂ. ಹರ್ಡಿಕರ್ ಅವರು ತಮ್ಮ ಉನ್ನತ ವ್ಯಾಸಂಗವನ್ನು ವಿದೇಶದಲ್ಲಿ ಪೂರ್ಣಗೊಳಿಸಿ ನಂತರ ಭಾರತಕ್ಕೆ ಮರಳಿ ಸ್ವಾತಂತ್ರ್ಯ ಚಳವಳಿಯಲ್ಲಿ ಸಕ್ರಿಯವಾಗಿ ಭಾಗವಹಿಸಿದರು. ಯುವಕರನ್ನು ಸಂಘಟಿಸಿ ಸ್ವಾತಂತ್ರ್ಯ ಹೋರಾಟಕ್ಕೆ ಶಕ್ತಿ ನೀಡುವಲ್ಲಿ ಅವರು ಪ್ರಮುಖ ಪಾತ್ರ ವಹಿಸಿದ್ದರು ಎಂದು ಹೇಳಿದರು.

ಹರ್ಡಿಕರ್ ಅವರು ಹಿಂದೂಸ್ತಾನಿ ಸೇವಾದಳವನ್ನು ಸ್ಥಾಪಿಸುವ ಮೂಲಕ ಲಕ್ಷಾಂತರ ಯುವಕರಲ್ಲಿ ಶಿಸ್ತು, ರಾಷ್ಟ್ರಪ್ರೇಮ ಮತ್ತು ಸೇವಾ ಮನೋಭಾವವನ್ನು ಬೆಳೆಸಿದರು. ಸ್ವಾತಂತ್ರ್ಯ ನಂತರ ಸಂಘಟನೆಯನ್ನು ಭಾರತ ಸೇವಾದಳ ಎಂದು ಮರುನಾಮಕರಣ ಮಾಡಿ, ಅದನ್ನು ಶಿಕ್ಷಣ ಇಲಾಖೆಯೊಂದಿಗೆ ಸಂಯೋಜಿಸಿ ವಿದ್ಯಾರ್ಥಿಗಳಲ್ಲಿ ರಾಷ್ಟ್ರಪ್ರೇಮ ಹಾಗೂ ಶಿಸ್ತು ಬೆಳೆಸುವ ಕಾರ್ಯವನ್ನು ಮುಂದುವರಿಸಿದರು ಎಂದು ಅವರು ವಿವರಿಸಿದರು.

ಇಂದಿನ ವಿದ್ಯಾರ್ಥಿಗಳಲ್ಲಿ ರಾಷ್ಟ್ರಪ್ರೇಮ, ಶಿಸ್ತು ಮತ್ತು ಸೇವಾ ಮನೋಭಾವವನ್ನು ಬೆಳೆಸುವ ಉದ್ದೇಶದಿಂದ ಬೆಂಗಳೂರು ಗ್ರಾಮಾಂತರ ಸೇವಾದಳದ ಜಿಲ್ಲಾ ಹಾಗೂ ತಾಲೂಕು ಘಟಕಗಳು ಪ್ರತಿಯೊಂದು ಶಾಲೆಯಲ್ಲೂ ಸೇವಾದಳ ಶಾಖೆಗಳನ್ನು ಆರಂಭಿಸಿ ಅದರ ಪ್ರಾಮುಖ್ಯತೆಯನ್ನು ತಿಳಿಸುತ್ತಿವೆ ಎಂದು ಅವರು ಹೇಳಿದರು.

ಸೇವಾದಳ ತಾಲೂಕು ಸಂಘಟಕ ಸುರೇಶ್ ಮಾತನಾಡಿ ಡಾ. ನಾ. ಸೂ. ಹರ್ಡಿಕರ್ ಅವರ ಜೀವನ ಚರಿತ್ರೆ ಹಾಗೂ ಅವರ ಸಂಘಟನಾ ಕಾರ್ಯಗಳ ಕುರಿತು ವಿವರಿಸಿದರು.

ಕಾರ್ಯಕ್ರಮದಲ್ಲಿ ತಾಲೂಕು ಕಾರ್ಯಾಧ್ಯಕ್ಷ ಹಮಾಮ್ ವೆಂಕಟೇಶ್, ಪ್ರಧಾನ ಕಾರ್ಯದರ್ಶಿ ವಿ. ಸಿ. ಜ್ಯೋತಿ ಕುಮಾರ್, ನಗರಸಭೆಯ ನಾಮನಿರ್ದೇಶಿತ ಸದಸ್ಯ ಕಾಂತರಾಜ್, ಜಿಲ್ಲಾ ಸಂಘಟಕ ರಾಜು, ವಕೀಲರಾದ ಆರ್. ವಿ. ಶಿವಕುಮಾರ್, ಆರ್. ವಿ. ಮನು, ನಿರ್ದೇಶಕ ಮಹೇಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಬ್ರಾಹ್ಮಣ ವಿದ್ಯಾರ್ಥಿಗಳ ಗುರುಕುಲ ಶಿಕ್ಷಣಕ್ಕೆ ಅರ್ಜಿ ಆಹ್ವಾನ

ತುಮಕೂರು

ಜಿಲ್ಲೆಯ ಗುಬ್ಬಿಯ ಶ್ರೀ ಚಿದಂಬರ ಆಶ್ರಮದ ಶ್ರೀ ನಾರಾಯಣ ಗುರುಕುಲ ಮಾದರಿಯ ಶಾಲೆಗೆ ಸೇರಲು ಬಯಸುವ ಬಾಲಕರಿಂದ ಅರ್ಜಿ ಆಹ್ವಾನಿಸಲಾಗಿದೆ. ನಾಲ್ಕರಿಂದ ಎಂಟನೇ ತರಗತಿಯವರೆಗೆ ಮಾತ್ರ ಪ್ರವೇಶವಿದ್ದು,

ತ್ರಿಮತಸ್ಥ ಉಪನೀತ ಬ್ರಾಹ್ಮಣ ವಿದ್ಯಾರ್ಥಿಗಳಿಗೆ 2026-2027 ಸಾಲಿನ ಪ್ರವೇಶ ಪ್ರಕ್ರಿಯೆ ಶುರುವಾಗಿದೆ.

ಆಧುನಿಕ ಶಿಕ್ಷಣದ ಜೊತೆಗೆ ವೈದಿಕ ಸಂಪ್ರದಾಯ, ವೇದ, ಉಪನಿಷತ್ತು, ಸಂಸ್ಕೃತ ಭಾಷೆಯ ಪರಿಚಯ, ಗೀತಾರ್ಥ ಪ್ರಕಾಶ, ಯೋಗ, ಧ್ಯಾನ ಮತ್ತು ಮೌಲ್ಯಯುತ ಶಿಕ್ಷಣವನ್ನು ಗುಬ್ಬಿಯ ಶ್ರೀ ಚಿದಂಬರ ಆಶ್ರಮದಲ್ಲಿ ನೀಡಲಾಗುತ್ತಿದೆ.

ಕಳೆದ ಹತ್ತು ದಶಕಗಳಿಂದ ಬ್ರಾಹ್ಮಣ ಸಂಸ್ಕಾರ ನೀಡುವ ನಿಟ್ಟಿನಲ್ಲಿ ಅವಧೂತ ಪರಂಪರೆಯ ಶ್ರೀ ಚಿದಂಬರ ಆಶ್ರಮ ನಿರಂತರವಾಗಿ ಶ್ರಮ ವಹಿಸುತ್ತಿದೆ.

ಗುರುಕುಲ ಶಿಕ್ಷಣಕ್ಕೆ ಸೇರಲು ಬಯಸುವವರು ಆಶ್ರಮದ ಅಧ್ಯಕ್ಷರಾದ ಡಾ. ಸಚ್ಚಿದಾನಂದ ಶರ್ಮಾ ಅವರನ್ನು ದೂರವಾಣಿ ಸಂಖ್ಯೆ:8660142615ಗೆ ಕರೆ ಮಾಡಿ ಅಥವಾ ವಾಟ್ಸಾಪ್ ಮೂಲಕ ಸಂಪರ್ಕಿಸಲು ಕೋರಲಾಗಿದೆ.

ಅಲ್ಲದೆ, ಆಶ್ರಮದ ಈ ಮೇಲ್: manager@ chidambara. org / ಸಂಪರ್ಕಿಸಬಹುದು. ಆಶ್ರಮದ ದೂರವಾಣಿ ಸಂಖ್ಯೆ: +91 99647 96451ಗೆ ಅಥವಾ ವಾಟ್ಸಾಪ್ ಮೂಲಕ ಸಹ ಸಂಪರ್ಕ ಮಾಡಬಹುದು ಎಂದು ಮಾಧ್ಯಮ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಜಾನುವಾರುಗಳ ಸಹಿತ ರೈತರು ಅನಿರ್ದಿಷ್ಟಾವಧಿ ಚಳುವಳಿ

ರಾಮನಗರ

ಫಲವತ್ತಾದ ಕೃಷಿ ಭೂಮಿಯಲ್ಲಿ ಸಮಗ್ರ ಉಪನಗರ (ಎಐ ಸಿಟಿ)ನಿರ್ಮಾಣ ಯೋಜನೆಗೆ ಸಚಿವ ಸಂಪುಟ ಅನುಮೋದನೆ ನೀಡಿರುವುದನ್ನು ಹಿಂಪಡೆಯಬೇಕು ಹಾಗೂ ಭೂಸ್ವಾಧೀನ ರದ್ದುಗೊಳಿಸಬೇಕೆಂದು ಒತ್ತಾಯಿಸಿ ಮೇ 10ರಿಂದ ರೈತರು ಅನಿರ್ದಿಷ್ಟಾವಧಿ ಪ್ರತಿಭಟನೆ ಹಮ್ಮಿಕೊಳ್ಳಲಿದ್ದಾರೆ ಎಂದು ಕರ್ನಾಟಕ ಪ್ರಾಂತ ರೈತಸಂಘದ ರಾಜ್ಯ ಸಮಿತಿ ಪ್ರಧಾನ ಕಾರ್ಯದರ್ಶಿ ಟಿ.ಯಶವಂತ್ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಟೌನ್‌ಶಿಪ್ ಯೋಜನೆಯನ್ನು ರೈತರು ತೀವ್ರವಾಗಿ ವಿರೋಧಿಸಿ ಕಳೆದ 14 ತಿಂಗಳಿಂದ ಹೋರಾಟ ನಡೆಸುತ್ತಿದ್ದಾರೆ. ಈವರೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ರಾಮಲಿಂಗಾರೆಡ್ಡಿ, ಶಾಸಕ ಎಚ್.ಸಿ.ಬಾಲಕೃಷ್ಣ ಸೇರಿದಂತೆ ಜಿಲ್ಲಾಧಿಕಾರಿಗಳಿಗೂ ಮನವಿ ಸಲ್ಲಿಸಿದ್ದೇವೆ. ಇವರಲ್ಲಿ ಯಾರೊಬ್ಬರೂ ರೈತರ ಅಹವಾಲನ್ನು ಆಲಿಸಿ ಉತ್ತರ ನೀಡುವ ಸೌಜನ್ಯ ತೋರಿಲ್ಲ.

ಇಲ್ಲಿವರೆಗೆ 3500 ರೈತರಿಂದ ಆಕ್ಷೇಪಣೆಗಳನ್ನು ಸಲ್ಲಿಸಿದ್ದರೂ ಸಹ ಸರಕಾರವಾಗಲಿ ಅಥವಾ ಸಂಬಂಧಪಟ್ಟ ಅಧಿಕಾರಿಗಾಳಾಗಲಿ ರೈತರ ಸಮಸ್ಯೆಗಳಿಗೆ ಸ್ಪಂದಿಸಿಲ್ಲ. ಬದಲಿಗೆ ಸರಕಾರದ ಸಚಿವ ಸಂಪುಟದಲ್ಲಿ ಏಕಪಕ್ಷೀಯ ಅನುಮೋದನೆ ನೀಡಲಾಗಿದೆ. ಯೋಜನೆಗೆ ರೈತರು ಒಪ್ಪಿಗೆ ಸೂಚಿಸಿದ್ದಾರೆಂದು ಹಿರಿಯ ಸಚಿವ ಎಚ್.ಕೆ.ಪಾಟೀಲ್ ಅವರಿಂದ ಸುಳ್ಳು ಹೇಳಿಸಿರುವುದು ರಾಜ್ಯ ಸರಕಾರಕ್ಕೆ ಶೋಭೆ ತರುವುದಿಲ್ಲ. ಇದು ರೈತರಿಗೆ ಮಾಡಿದ ಅಪಮಾನ ಎಂದು ಟೀಕಿಸಿದರು.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರಜೆಗಳ ಅಭಿಪ್ರಾಯಕ್ಕೆ ಮನ್ನಣೆ ನೀಡಬೇಕು. ಸುಳ್ಳು ಟಿಪ್ಪಣಿ ಮೇಲೆ ಅನುಮೋದನೆ ನೀಡಿರುವ ಬಿಡದಿ ಟೌನ್‌ಶಿಪ್ ಯೋಜನೆಯನ್ನು ರದ್ದುಗೊಳಿಸಬೇಕು. ಸರಕಾರ ಮಾತುಕತೆ ದಿನಾಂಕ ನಿಗದಿ ಮಾಡಬೇಕು. ಅಲ್ಲಿವರೆಗೆ ರೈತರು ಚಳವಳಿ ಹಿಂಪಡೆಯುವ ಪ್ರಶ್ನೆಯೇ ಇಲ್ಲ ಎಂದು ಎಚ್ಚರಿಸಿದರು.

ಆಲ್ ಇಂಡಿಯಾ ಕಿಸಾನ್ ಸಭಾದ ರಾಷ್ಟ್ರೀಯ ಸಹ ಕಾರ್ಯದರ್ಶಿ ಡಿ.ರವೀಂದ್ರನ್ ರವರು ಹಲವು ಗ್ರಾಮಗಳಲ್ಲಿ ಅಧ್ಯಯನ ಮಾಡಿದ್ದಾರೆ. ಹಸಿರು ವಲಯವನ್ನು ಭೂಸ್ವಾಧೀನ ಮಾಡಬಾರದೆಂದು ಹೋರಾಟಕ್ಕೆ ಬೆಂಬಲ ನೀಡಿದ್ದಾರೆ. ದೆಹಲಿಯ ಆಲ್ ಇಂಡಿಯಾ ಕಿಸಾನ್ ಸಭಾದ ಪದಾಧಿಕಾರಿಗಳು ಹಾಗೂ ಸಂಯುಕ್ತ ಕಿಸಾನ್ ಮೋರ್ಚಾದ ನಾಯಕರೊಂದಿಗೆ ಚರ್ಚೆ ನಡೆಸುವುದಾಗಿ ಭರವಸೆ ನೀಡಿದ್ದಾರೆ. ಹೀಗಾಗಿ ಈ ಹೋರಾಟ ರಾಷ್ಟ್ರಮಟ್ಟದ ಚಳುವಳಿಯಾಗಿ ರೂಪುಗೊಳ್ಳಲಿದೆ ಎಂದು ಹೇಳಿದರು.

ಆದಾಯ ಮೂಲಗಳಿಲ್ಲದೆ ಕೈಗೆತ್ತಿಕೊಳ್ಳುತ್ತಿರುವ ಬಿಡದಿ ಟೌನ್‌ಶಿಪ್ ಯೋಜನೆ ರಾಜ್ಯ ಸರಕಾರಕ್ಕೆ ಹೊರೆಯಾಗಲಿದೆ. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಈ ವಿಚಾರ ಗೊತ್ತಿದ್ದರೂ ಕೂಡ ಯೋಜನೆ ಜಾರಿಗೊಳಿಸಲು ಮೊಂಡುತನ ಪ್ರದರ್ಶಿಸುತ್ತಿರುವುದು ಏಕೆಂದು ಗೊತ್ತಾಗುತ್ತಿಲ್ಲ. ಇದೊಂದು ರಿಯಲ್ ಎಸ್ಟೇಟ್ ದಂಧೆ ಅಲ್ಲದೆ ಮತ್ತೇನೂ ಅಲ್ಲ. ಇದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮಣಿಯಬಾರದು ಎಂದು ಟಿ.ಯಶವಂತ್ ಒತ್ತಾಯಿಸಿದರು.

ತಾಪಂ ಮಾಜಿ ಸದಸ್ಯರು ಆದ ರೈತಮುಖಂಡ ಹೆಚ್.ಜಿ.ಪ್ರಕಾಶ್ ಮಾತನಾಡಿ, ಬಿಡದಿ ಹೋಬಳಿ ಬೈರಮಗಲ ಮತ್ತು ಕಂಚುಗಾರನಹಳ್ಳಿ ಗ್ರಾಪಂ ವ್ಯಾಪ್ತಿಯ 25 ಗ್ರಾಮಗಳ ಸುಮಾರು 9640 ಎಕರೆ ಕೃಷಿಭೂಮಿ ವರ್ಷಪೂರ್ತಿ ನೀರಾವರಿ ಹೊಂದಿರುವ ತೆಂಗು, ಅಡಿಕೆ, ಬಾಳೆ, ಮಾವು ಸೇರಿದಂತೆ ತೋಟಗಾರಿಕೆ ಬೆಳೆಗಳಾದ ರೇಷ್ಮೆ, ಹೈನುಗಾರಿಕೆ, ಜೋಳ, ರಾಗಿ, ಹಣ್ಣು, ತರಕಾರಿ ಬೆಳೆಯುತ್ತಿರುವ ಸಮೃದ್ಧ ಹಸಿರು ಪ್ರದೇಶವಾಗಿದೆ. ಇದನ್ನು ನಿರ್ನಾಮ ಮಾಡಲು ಸರಕಾರ ಹೊರಟಿದೆ ಎಂದು ಟೀಕಿಸಿದರು.

ಬಿಡದಿ ಟೌನ್‌ಶಿಪ್ ಯೋಜನೆಗೆ ಸ್ವಾಧೀನ ಪಡಿಸಿಕೊಳ್ಳಲು ಉದ್ದೇಶಿಸಿರುವ ಭೂಮಿಯನ್ನು ಉಳಿಸಿಕೊಳ್ಳುವುದು ರೈತರಿಗೆ ಸವಾಲಾಗಿದೆ. ಇದು ಅಳಿವು ಉಳಿವಿನ ಪ್ರಶ್ನೆಯಾಗಿರುವುದರಿಂದ ರೈತರು ದನಕರುಗಳು, ಎತ್ತಿನಗಾಡಿಗಳು, ಟ್ರಾಕ್ಟರ್‌ಗಳು ಹಾಗೂ ವ್ಯವಸಾಯ ಮಾಡುವ ಎಲ್ಲಾ ಸಲಕರಣೆಗಳೊಂದಿಗೆ ರೈತರು ಬೃಹತ್ ಪ್ರತಿಭಟನೆಯಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಪ್ರಕಾಶ್ ತಿಳಿಸಿದರು.



# ಅಭಿಮಾನೋತ್ಸವಕ್ಕೆ ಮಾಲೂರಿನಿಂದ 1500 ಜನ

ಮಾಲೂರು

ರಾಜ್ಯ ಕಂಡ ಧೀಮಂತ ನಾಯಕ ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ಅವರ ಅಭಿಮಾನೋತ್ಸವ ಕಾರ್ಯಕ್ರಮ ಚಿತ್ರದುರ್ಗದಲ್ಲಿ ಮೇ 9ರ ಶನಿವಾರ ಬಿಜೆಪಿ ರಾಜ್ಯ ಘಟಕದಿಂದ ನಡೆಯಲಿದ್ದು, ತಾಲೂಕಿನಿಂದ ಬಿಜೆಪಿ ಪಕ್ಷದಿಂದ ಮುಖಂಡರು ಕಾರ್ಯಕರ್ತರು ಸುಮಾರು 200 ಕಾರುಗಳಲ್ಲಿ ಮಾಜಿ ಶಾಸಕ ಕೆ.ಎಸ್.ಮಂಜುನಾಥ್ ಗೌಡ ಅವರ ನೇತೃತ್ವದಲ್ಲಿ 1500ಕ್ಕೂ ಹೆಚ್ಚು ಮಂದಿ ತೆರಳಲಿದ್ದೇವೆ ಎಂದು ತಾಲೂಕು ಬಿಜೆಪಿ ಅಧ್ಯಕ್ಷ ಟಿ.ಬಿ.ಕೃಷ್ಣಪ್ಪ ಹೇಳಿದರು.

ನಗರದ ರೈಲ್ವೆ ನಿಲ್ದಾಣದ ಬಳಿ ಇರುವ ಬಿಜೆಪಿ ಕಾರ್ಯಾಲಯದಲ್ಲಿ ತಾಲೂಕು ಬಿಜೆಪಿ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಭಾಗವಹಿಸಿ ಮಾತನಾಡಿದ ಅವರು ಮಾಜಿ ಮುಖ್ಯಮಂತ್ರಿ ಧೀಮಂತ ನಾಯಕ ಅಭಿವೃದ್ಧಿಯ ಹರಿಕಾರ ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ಅವರು ನಾಲ್ಕು ಬಾರಿ ಮುಖ್ಯಮಂತ್ರಿಗಳಾಗಿ ಕೆಲಸ ಮಾಡಿದ್ದಾರೆ. ಅವರ ಹಾದಿಯಲ್ಲಿ ನಡೆಯುವುದರ ಮೂಲಕ ಪಕ್ಷ ಸಂಘಟಿಸಬೇಕು ಅವರು ನಡೆದು ಬಂದ ದಾರಿಯನ್ನು ನೆನೆಯಲು ಅವರು ನಡೆದು ಬಂದ ದಾರಿಯನ್ನು ಸ್ಮರಿಸಿ ಅವರ ಹಾದಿಯಲ್ಲಿ ನಡೆದು ಆಶೀರ್ವಾದವನ್ನು ಪಡೆದು ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಪಕ್ಷವನ್ನು ಅಧಿಕಾರಕ್ಕೆ ತರಲು ಅಭಿಮಾನೋತ್ಸವ ಕಾರ್ಯಕ್ರಮವನ್ನು ಮೇ 9ರ ಶನಿವಾರ ಚಿತ್ರದುರ್ಗದಲ್ಲಿ ರಾಜ್ಯ ಬಿಜೆಪಿ ಘಟಕವು ಏರ್ಪಡಿಸಿದ್ದು ತಾಲೂಕಿನಿಂದ ಅಭಿಮಾನೋತ್ಸವ ಕಾರ್ಯಕ್ರಮಕ್ಕೆ 1500ಕ್ಕೂ ಹೆಚ್ಚು ಮಂದಿ ಕಾರುಗಳಲ್ಲಿ ತೆರಳಲ್ಲಿದ್ದೇವೆ ಈ ವಿಚಾರ ಕುರಿತು ಈಗಾಗಲೇ ಮುಖಂಡರ ಸಭೆಯನ್ನು ನಡೆಸಿ ಜವಾಬ್ದಾರಿಗಳನ್ನು ನೀಡಲಾಗಿದೆ ಎಂದರು.

ಧರ್ಮಸ್ಥಳ, ತಿರುಪತಿ, ಶಬರಿಮಲೆ ಪ್ರಸಾದ ತಂದು ಇಡುತ್ತೇವೆ ಎಲ್ಲಾ ನಿರ್ದೇಶಕರು ಪ್ರಾಮಾಣಿಕವಾಗಿದ್ದೇವೆ, ದುರಾಡಳಿತವಾಗಿಲ್ಲ, ಯಾವುದೇ ರೀತಿ ಅವ್ಯವಹಾರ ನಡೆದಿಲ್ಲವೆಂದು ಆಣೆ ಮಾಡಿರಿ ನೋಡೋಣ ಎಂದು ಸವಾಲಾಕಿದರು. ಎಚ್ಚರಿಕೆಯಿಂದ ಹೇಳಿಕೆ ನೀಡಬೇಕು ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ತಕ್ಕ ಪಾಠ ಕಲಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಜಿ.ಪಂ.ಸ್ಥಾಯಿ ಸಮಿತಿ ಮಾಜಿ ಅಧ್ಯಕ್ಷ ಚಿನ್ನಸ್ವಾಮಿಗೌಡ, ಹಿರಿಯ ಮುಖಂಡ ಮುನಿಶಾಮಿ ಗೌಡ, ಪಿಎಲ್‌ಡಿ ಬ್ಯಾಂಕ್ ಮಾಜಿ ನಿರ್ದೇಶಕ ಸೋಮಣ್ಣ, ಪಕ್ಷದ ಅಂಚೆ ಮುಸ್ಕೂರ್ ಬಾಬು, ಅಧಿಕಾರಕ್ಕೆ ಬಾಬು, ವಾಟರ್ ನಾರಾಯಣಸ್ವಾಮಿ, ನಂದೀಶ್, ವಿಜಯ್ ಕುಮಾರ್, ಸುರೇಶ್, ಮಂಜು, ಇನ್ನಿತರರು ಹಾಜರಿದ್ದರು.

# ಭದ್ರಾಪುರ ಗ್ರಾಮದಲ್ಲಿ ನಿರಂತರ ಬಾಲ್ಯವಿವಾಹ..!

ರಾಮನಗರ

"ಬಾಲ್ಯವಿವಾಹ" ಸಮಾಜದಲ್ಲಿ ಶತಮಾನಗಳಿಂದ ನಡೆದುಬಂದಿರುವ ಕಹಿವಾಸ್ತವ. ಇದರ ತಡೆಗೆ ಬಲಿಷ್ಠ ಕಾನೂನುಗಳು ಬಂದಿದ್ದರೂ, ಜನಜಾಗೃತಿ ಮೂಡಿಸಿದರೂ ಗ್ರಾಮೀಣ ಪ್ರದೇಶಗಳು ಹಾಗೂ ಬಡಕುಟುಂಬಗಳಲ್ಲಿ ಇದು ಇಂದಿಗೂ ಕಂಡುಬರುತ್ತಿದೆ. ಬಿಡದಿ ಸಮೀಪದ ಭದ್ರಾಪುರ ಗ್ರಾಮದಲ್ಲಿ ಕಳೆದ ಎರಡು ತಿಂಗಳ ಅವಧಿಯಲ್ಲಿ ಮೂರು ಬಾಲ್ಯ ವಿವಾಹಗಳು ನಡೆದಿರುವುದು ತಡವಾಗಿ ಬೆಳಕಿಗೆ ಬಂದಿದೆ.

ತಾಲ್ಲೂಕಿನ ಬಿಡದಿ ಹೋಬಳಿ ಮಂಚನಾಯ್ಕನಹಳ್ಳಿ ಗ್ರಾಪಂ ವ್ಯಾಪ್ತಿಯ ಭದ್ರಾಪುರ ಗ್ರಾಮದಲ್ಲಿ ಸುಮಾರು 600 ಅಲೆಮಾರಿ ಬುಡಕಟ್ಟು ಕುಟುಂಬಗಳು ನೆಲೆಸಿವೆ. ಅಲಂಕಾರಿಕಾ ವಸ್ತುಗಳ ತಯಾರಿಕೆ, ಆಯುರ್ವೇದ ಔಷಧಿಗಳು, ಸುವಾಸನೆ ದ್ರವ್ಯಗಳ ಮಾರಾಟ, ಕೂಲಿ ಕೆಲಸ ಮಾಡುವುದು ಗ್ರಾಮದ ಕನರ ಜೀವನಾಧಾರವಾಗಿದೆ. ಅಜ್ಞಾನ, ಮೂಢನಂಬಿಕೆ, ಬಡತನ, ಸಂಸ್ಕೃತಿ ಮತ್ತು ಸಂಪ್ರದಾಯ ಮತ್ತಿತರ ಕಾರಣಗಳಿಂದ ಅಲೆಮಾರಿ ಬುಡಕಟ್ಟು ಸಮುದಾಯ ತೀರಾ ಹಿಂದುಳಿದಿದೆ. ಹಾಗಾಗಿ ಭದ್ರಾಪುರ ಗ್ರಾಮ ಒಂದಲ್ಲಾ ಒಂದು ಕಾರಣಕ್ಕೆ ಸದಾ ಸುದ್ದಿಯಲ್ಲಿರುತ್ತದೆ.

ಭದ್ರಾಪುರ ಗ್ರಾಮದಲ್ಲಿ ಕಳೆದ ಎರಡು ತಿಂಗಳ ಅವಧಿಯಲ್ಲಿ ಮೂರ್‍ನಾಲ್ಕು ಬಾಲ್ಯವಿವಾಹ ಪ್ರಕರಣಗಳು ಕಂಡುಬಂದಿದ್ದು ತಕ್ಷಣವೇ ಇದರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಹಾಗೂ ಗ್ರಾಮದಲ್ಲಿ ಸಾರ್ವಜನಿಕ ಸಭೆ ಆಯೋಜಿಸಿ ಅರಿವು ಮೂಡಿಸಬೇಕೆಂದು ಆದಿವಾಸಿ ಬುಡಕಟ್ಟು ಹಕ್ಕಿಪಿಕ್ಕಿ ಅಲೆಮಾರಿ ಸಂಘ(ರಿ)ದ ಪದಾಧಿಕಾರಿಗಳು ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕಕ್ಕೆ ಗುರುವಾರ ದೂರು ಸಲ್ಲಿಸಿದ್ದಾರೆ.

ಗ್ರಾಮದಲ್ಲಿ ದಿನೇ ದಿನೇ ಬಾಲ್ಯವಿವಾಹ ಪ್ರಕರಣಗಳು ಹೆಚ್ಚಾಗುತ್ತಿದ್ದರೂ ಸಹ ತಮ್ಮ ಇಲಾಖಾಧಿಕಾರಿಗಳು ಕಂಡರೂ ಕಾಣದಂತೆ ಕಣ್ಮುಚ್ಚಿ ಕುಳಿತಿದ್ದಾರೆ.

ಕಠಿಣ ಕ್ರಮಗಳನ್ನು ಜರುಗಿಸದ ಕಾರಣ ಬಾಲ್ಯವಿವಾಹ ಪ್ರಕರಣಗಳ ಸಂಖ್ಯೆ ಹೆಚ್ಚಾಗುತ್ತಿವೆ. ಪ್ರಕರಣಗಳು ಬೆಳಕಿಗೆ ಬಂದಾಗ ಮಾತ್ರ ಕ್ರಮಕ್ಕೆ ಮುಂದಾಗುತ್ತೀರಿ, ಆದರೆ ಮೊದಲೇ ಏಕೆ ಜನರಿಗೆ ಮಾಹಿತಿ ಕೊಡುತ್ತಿಲ್ಲ, ಕಾನೂನು ಅರಿವು ಮೂಡಿಸುತ್ತಿಲ್ಲ? ಇದರಿಂದಾಗುವ ದುಷ್ಪರಿಣಾಮಗಳ ಬಗ್ಗೆ ಜನರಿಗೆ ಸಭೆ ಆಯೋಜಿಸಿ ತಿಳಿಸಿ, ತಪ್ಪಿತಸ್ಥರಿಗೆ ಪೋಕ್ಸೋ ಕಾಯ್ದೆಯಡಿ ಕ್ರಮ ಜರುಗಿಸಿ, ಗ್ರಾಮದಲ್ಲಿ ಬಾಲ್ಯವಿವಾಹಗಳನ್ನು ತಡೆಯಬೇಕೆಂದು ದೂರಿನಲ್ಲಿ ತಿಳಿಸಿದ್ದಾರೆ.

ಬಾಲ್ಯ ವಿವಾಹವು ಬಡತನ, ಲಿಂಗ ಅಸಮಾನತೆ, ಅನಕ್ಷರತೆ, ಮತ್ತು ಹಳೆಯ ಸಂಪ್ರದಾಯಗಳಿಂದಾಗಿ ನಡೆಯುವ ಗಂಭೀರ ಸಾಮಾಜಿಕ ಪಿಡುಗಾಗಿದೆ. ಕುಟುಂಬದ ಆರ್ಥಿಕ ಹೊರೆಯನ್ನು ತಗ್ಗಿಸಲು ಕೆಲವು ಪೋಷಕರು ಅಪ್ರಾಪ್ತ ವಯಸ್ಸಿನಲ್ಲೇ ಮದುವೆ ಮಾಡುತ್ತಾರೆ. ಇದು ಮಕ್ಕಳ ಶಿಕ್ಷಣ ಮತ್ತು ಆರೋಗ್ಯವನ್ನು ಕಸಿದುಕೊಳ್ಳುತ್ತದೆ. ಶಿಕ್ಷಣದ ಮಹತ್ವ ತಿಳಿಯದಿರುವುದು ಮತ್ತು ಶಾಲೆಗೆ ಹೋಗದ ಹುಡುಗಿಯರು ಬಾಲ್ಯ ವಿವಾಹಕ್ಕೆ ಒಳಗಾಗುವ ಸಾಧ್ಯತೆ ಹೆಚ್ಚು. ಹೆಣ್ಣು ಮಗುವಿನ ಸುರಕ್ಷತೆ ದೃಷ್ಟಿಯಿಂದ ಅಥವಾ ಲೈಂಗಿಕ ದೌರ್ಜನ್ಯದಿಂದ ರಕ್ಷಿಸಲು ತಕ್ಷಣ ಮದುವೆ ಮಾಡುವ ಪ್ರಕರಣಗಳು ಅಲೆಮಾರಿ ಬುಡಕಟ್ಟು ಸಮುದಾಯಗಳಲ್ಲಿ ಹೆಚ್ಚಾಗಿ ಕಂಡುಬರುತ್ತಿವೆ.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy